ಸಂಪುಟ: 03 | ಸಂಚಿಕೆ: 255 | ದಿನಾಂಕ: 26-08-2026 | ಬುಧವಾರ | ಪುಟ: 4 | ಬೆಲೆ: 2.00ರೂ.

ಸಂಪಾದಕರು, ಮಾಲೀಕರು: ರಾಧಿಕಾ ಎ.ಆರ್.

RNI:KARKAN/2023/88508, Postal Reg No:L2/RNP-1287/TMR/2025-27

# ಕರ್ನಾಟಕ ಸಕ್ಸಸ್ ನಂ 1

KARNATAKA SUCCESS NO1 Kannada Daily

ಕನ್ನಡ ದಿನಪತ್ರಿಕೆ

ಇದು ಸ್ವಾಭಿಮಾನಿಗಳ ಧ್ವನಿ

Email: radhikaarno1@gmail.com Ph: 9380988530

## ಅಲ್ಪಸಂಖ್ಯಾತ ಸಮುದಾಯದಿಂದ ಅರ್ಜಿ ಆಹ್ವಾನ

**ತುಮಕೂರು:** ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದಿಂದ ಅನುಷ್ಠಾನಗೊಳಿಸುತ್ತಿರುವ ವಿವಿಧ ಯೋಜನೆಗಳಡಿ ಸಾಲ/ಸಹಾಯಧನ ಸೌಲಭ್ಯಕ್ಕಾಗಿ ಅಲ್ಪಸಂಖ್ಯಾತರ ಸಮುದಾಯದವರಿಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅರಿವು ವಿದ್ಯಾಭ್ಯಾಸ ಸಾಲ, ಸ್ವಾವಲಂಬಿ ಸಾರಥಿ, ಶ್ರಮಶಕ್ತಿ, ವೃತ್ತಿ ಪ್ರೋತ್ಸಾಹ, ರೇಷ್ಮೇ ನೂಲು ಬಿಚ್ಚಾಣಿಕ್ ಉದ್ಯಮಕ್ಕೆ ಪ್ರೋತ್ಸಾಹ, ಗಂಗಾ ಕಲ್ಯಾಣ, ನವೋದಯ, ಫಾಸ್ಟ್ ಫುಡ್‌ಟ್ರಕ್/ಟ್ರೈಲರ್ ಕಿಚನ್ ಫುಡ್ (ಕಿಯೋಸ್ಕ್), ಅಲ್ಪಸಂಖ್ಯಾತರ ಸಮುದಾಯದ ಮಹಿಳಾ ಸ್ವ ಸಹಾಯ ಗುಂಪುಗಳಿಗೆ ಸ್ವಯಂ ಉದ್ಯೋಗ ಪ್ರೋತ್ಸಾಹ, ಸಿಖ್ಖಲಿಗಾರ ಸಮುದಾಯದ ಜನರ ಆರ್ಥಿಕ ಸಬಲೀಕರಣಕ್ಕೆ ಪ್ರೋತ್ಸಾಹ, ಸಮುದಾಯದ ಆಧಾರಿತ ತರಬೇತಿ, ವಿದೇಶಿ ವಿದ್ಯಾಭ್ಯಾಸ ಸಾಲ, ವ್ಯಾಪಾರ / ಉದ್ದಿಮೆ ನೇರ ಸಾಲ ಹಾಗೂ ಸಾಂತ್ವನ ಯೋಜನೆಯಡಿ ಸಾಲ/ಸಹಾಯಧನಕ್ಕಾಗಿ ಅರ್ಜಿ ಸಲ್ಲಿಸಬಹುದಾಗಿದೆ. ಅರ್ಜಿಯನ್ನು ವೆಬ್‌ಸೈಟ್ kmdconline.karnataka.gov.in ಮೂಲಕ ಸೆಪ್ಟೆಂಬರ್ 17ರೊಳಗಾಗಿ ಸಲ್ಲಿಸಬಹುದಾಗಿದೆ.

## ಅಭಿವೃದ್ಧಿ ಕಾಮಗಾರಿಗಳನ್ನು ಗುಣಮಟ್ಟದೊಂದಿಗೆ ಪೂರ್ಣಗೊಳಿಸಲು ಡೀಸಿ ಶುಭ ಕಲ್ಯಾಣ್ ಸೂಚನೆ



**ತುಮಕೂರು:** ಜಿಲ್ಲಾಧಿಕಾರಿ ಹಾಗೂ ತುಮಕೂರು ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರ ಅಧ್ಯಕ್ಷತೆಯಲ್ಲಿ ಪ್ರಾಧಿಕಾರದ ಸಾಮಾನ್ಯ ಸಭೆ ಗೂಗಲ್ ಮೀಟ್ ಮೂಲಕ ನಡೆಯಿತು. ಸಭೆಯಲ್ಲಿ ಪ್ರಾಧಿಕಾರದ ವ್ಯಾಪ್ತಿಯ ವಿವಿಧ ಅಭಿವೃದ್ಧಿ ಕಾಮಗಾರಿಗಳು, ಆಡಳಿತಾತ್ಮಕ ವಿಷಯಗಳು ಹಾಗೂ ನಗರಾಭಿವೃದ್ಧಿಗೆ ಸಂಬಂಧಿಸಿದ ಹಲವು ವಿಚಾರಗಳ ಕುರಿತು ಸಮಗ್ರವಾಗಿ ಚರ್ಚಿಸಲಾಯಿತು.

ಸಭೆಯಲ್ಲಿ ಪ್ರಾಧಿಕಾರದ ವತಿಯಿಂದ ಕೈಗೊಳ್ಳಲಾಗುತ್ತಿರುವ ವಿವಿಧ ಅಭಿವೃದ್ಧಿ ಕಾಮಗಾರಿಗಳ ಪ್ರಗತಿ ಕುರಿತು ಅಧಿಕಾರಿಗಳಿಂದ ಜಿಲ್ಲಾಧಿಕಾರಿಗಳು ಮಾಹಿತಿ ಪಡೆದರು. ಕಾಮಗಾರಿಗಳ ಪ್ರಸ್ತುತ ಸ್ಥಿತಿ, ಪೂರ್ಣಗೊಳ್ಳಬೇಕಿರುವ ಕಾರ್ಯಗಳು ಹಾಗೂ ಬಾಕಿ ಇರುವ ವಿಷಯಗಳ ಕುರಿತು ಅಧಿಕಾರಿಗಳೊಂದಿಗೆ ಚರ್ಚೆ ನಡೆಸಿದರು. ಪ್ರಾಧಿಕಾರದ ವ್ಯಾಪ್ತಿಯಲ್ಲಿ ಸಾರ್ವಜನಿಕರಿಗೆ ಅಗತ್ಯವಿರುವ ಮೂಲಸೌಕರ್ಯ ಹಾಗೂ ಸೇವೆಗಳನ್ನು ಪರಿಣಾಮಕಾರಿಯಾಗಿ ಒದಗಿಸುವ ಕುರಿತು ಸಭೆಯಲ್ಲಿ ವಿಶೇಷ ಗಮನ ಹರಿಸಲಾಯಿತು. ಸಾರ್ವಜನಿಕರಿಗೆ ಯಾವುದೇ ರೀತಿಯ ತೊಂದರೆ ಉಂಟಾಗದಂತೆ ಸಂಬಂಧಿಸಿದ ವಿಷಯಗಳನ್ನು ಆದ್ಯತೆಯ ಮೇರೆಗೆ ಪರಿಹರಿಸುವಂತೆ ಜಿಲ್ಲಾಧಿಕಾರಿಗಳು ಅಧಿಕಾರಿಗಳಿಗೆ ಸೂಚಿಸಿದರು.

ನಗರಾಭಿವೃದ್ಧಿಗೆ ಸಂಬಂಧಿಸಿದ ಕಾಮಗಾರಿಗಳನ್ನು ನಿಗದಿತ ಅವಧಿಯೊಳಗೆ ಪೂರ್ಣಗೊಳಿಸುವುದರ ಜೊತೆಗೆ ಕಾಮಗಾರಿಗಳ ಗುಣಮಟ್ಟವನ್ನು ಖಚಿತಪಡಿಸಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿಗಳು ನಿರ್ದೇಶನ ನೀಡಿದರು. ಕಾಮಗಾರಿಗಳ ಅನುಷ್ಠಾನದಲ್ಲಿ ವಿಳಂಬವಾಗದಂತೆ ನಿಯಮಿತವಾಗಿ ಪರಿಶೀಲನೆ ನಡೆಸಿ ಅಗತ್ಯ ಕ್ರಮ ಕೈಗೊಳ್ಳುವಂತೆ ಸೂಚಿಸಿದರು. ಸಭೆಯಲ್ಲಿ ಬಾಕಿ ಇರುವ ಆಡಳಿತಾತ್ಮಕ ಹಾಗೂ ಅಭಿವೃದ್ಧಿ ಸಂಬಂಧಿತ ವಿಷಯಗಳನ್ನು ತ್ವರಿತವಾಗಿ ಇತ್ಯರ್ಥಪಡಿಸುವಂತೆ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ತಿಳಿಸಿದರು. ನಗರಾಭಿವೃದ್ಧಿಯ ಉದ್ದೇಶಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ಮೂಲಕ ಸಾರ್ವಜನಿಕರಿಗೆ ಉತ್ತಮ ಸೇವೆ ಒದಗಿಸುವ ನಿಟ್ಟಿನಲ್ಲಿ ಸಮನ್ವಯದಿಂದ ಕಾರ್ಯನಿರ್ವಹಿಸುವಂತೆ ಅವರು ಸೂಚಿಸಿದರು.

## ಕೆರೆ ಹೂಳೆತ್ತುವ ಕಾಮಗಾರಿಗೆ ಚಾಲನೆ




**ಗುಬ್ಬಿ:** ತಾಲೂಕಿನ ಎಸ್ ಕೊಡಗಳ್ಳಿ ಗ್ರಾಮ ಪಂಚಾಯತಿಯ ನಂದಿಪುರ ಗ್ರಾಮದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮೀಣಾಭಿವೃದ್ಧಿ ಸಂಸ್ಥೆವತಿಯಿಂದ ಕೆರೆ ಹೂಳೆತ್ತುವ "ನಮ್ಮೂರು ನಮ್ಮ ಕೆರೆ" ಕಾಮಗಾರಿಗೆ ಶಾಸಕ ಎಸ್‌ಆರ್ ಶ್ರೀನಿವಾಸ್ ಗುದ್ದಲಿ ಪೂಜೆಯ ನೆರವೇರಿಸಿದರು.

ಈ ಸಂದರ್ಭದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಜಿಲ್ಲಾ ನಿರ್ದೇಶಕ ಸತೀಶ್ ಸುವರ್ಣ, ಯೋಜನಾಧಿಕಾರಿ ಜಯಂತಿ, ರೈತ ಸಂಘ ಜಿಲ್ಲಾಧ್ಯಕ್ಷ ಗೋವಿಂದರಾಜು. ಜಿಲ್ಲಾ ಜನ ಜಾಗೃತಿಯ ಸದಸ್ಯ ವೆಂಕಟಗೌಡ, ಕೆರೆ ಅಭಿವೃದ್ಧಿ ಅಧ್ಯಕ್ಷರಾದ ಪ್ರತಾಪ್, ಸಮಿತಿಯ ಸದಸ್ಯರಾದ ಯಶೋದಮ್ಮ, ಕಿರಣ್ , ಪಿಡಿಒ ಮಂಜುಳ, ಮುಖಂಡ ರಾಮೇಗೌಡ, ಕೃಷಿ ಮೇಲ್ವಿಚಾರಕ ಕಾಂತರಾಜು ಹೆಚ್ ಪಿ, ಸೇವಾ ಪ್ರತಿನಿಧಿ ಶಿವರಾಜು,ಚಿಕ್ಕಣ್ಣ, ಕಾಳಯ್ಯ, ಸಂಘದ ಸದಸ್ಯರು ಉಪಸ್ಥಿತರಿದ್ದರು.

## ಹವಾಮಾನ ಬದಲಾವಣೆಯ ಪರಿಣಾಮ ತಡೆಯಲು ಮಣ್ಣು ಸಂರಕ್ಷಣೆ, ಅರಣ್ಯೀಕರಣ ಬಹುಮುಖ್ಯ: ನರಸಿಂಹ ಮೂರ್ತಿ

**ಕೊರಟಗೆರೆ:** ಹವಾಮಾನ ಬದಲಾವಣೆಯ ಪರಿಣಾಮಗಳನ್ನು ತಡೆಗಟ್ಟುವಲ್ಲಿ ಮಣ್ಣಿನ ಸಂರಕ್ಷಣೆ ಅರಣ್ಯೀಕರಣ ಹಾಗೂ ಕೆರೆ ಸಂರಕ್ಷಣೆ ಬಹು ಮುಖ್ಯವಾಗಿದೆ ಕೊರಟಗೆರೆ ರೋಟರಿ ಕ್ಲಬ್ ನ ಅಧ್ಯಕ್ಷರಾದ ನರಸಿಂಹ ಮೂರ್ತಿ ರವರು ಅಭಿಪ್ರಾಯಪಟ್ಟರು

ಅಸರ್ ಹಾಗೂ ಗ್ರಾಮ ವಿಕಾಸ ಸಂಸ್ಥೆಯ ಮಾರ್ಗದರ್ಶನದಲ್ಲಿ ಹವಾಮಾನ ಕ್ರಿಯಾ ಆಂದೋಲನ ಕರ್ನಾಟಕ ದ ವತಿಯಿಂದ ರಚಿಸಲಾಗಿರುವ ಕಲ್ಪತರು ಹವಾಮಾನ ಕ್ರಿಯಾ ಸಮಿತಿಗಳ ಒಕ್ಕೂಟ ದ ವತಿಯಿಂದ ಹೊಳವನಹಳ್ಳಿ ಯಲ್ಲಿ ಆಯೋಜಿಸಲಾಗಿದ್ದ ಹವಾಮಾನ ಕ್ರಿಯೆಯಲ್ಲಿ ಮಣ್ಣು ಸಂರಕ್ಷಣೆ ಕುರಿತ ಕಾರ್ಯಾಗಾರವನ್ನು ಉದ್ಘಾಟನೆ ಮಾಡಿ ಮಾತನಾಡಿದರು.

ಕೃಷಿಯ ಜೀವಾಳವಾದ ಮಣ್ಣು ಮುಂದಿನ ಪೀಳಿಗೆಗೂ ಅಗತ್ಯವಿದೆ. ಮಣ್ಣಿನ ಸಂರಕ್ಷಣೆ ಕೃಷಿ ಯ ಉಳಿವಿಗೆ ಅತ್ಯಗತ್ಯವಾಗಿದೆ ಎಂದು ತಿಳಿಸುತ . ನಮ್ಮ ಮುಂದಿನ ಪೀಳಿಗೆಗಾಗಿ ನಮ್ಮ ಹಳ್ಳಿಗಳನ್ನು ಉಳಿಸಲು ಮುಂದಾಗಬೇಕು ಈ ನಿಟ್ಟಿನಲ್ಲಿ ನಮ್ಮ ರೋಟರಿ ಕ್ಲಬ್ ಕಲ್ಪತರು ಹವಾಮಾನ ಕ್ರಿಯಾ ಸಮಿತಿಯ ಒಕ್ಕೂಟ ದೊಂದಿಗೆ ಕೈ ಜೋಡಿಸಲಿದೆ ಎಂದು ಹೇಳಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಹವಾಮಾನ ಕ್ರಿಯಾ ಆಂದೋಲನ ಕರ್ನಾಟಕದ ರಾಜ್ಯ ಸಂಯೋಜಕ ರಾಜಾ ಹುಣಸೂರು ಅಸರ್ ಮತ್ತು ಗ್ರಾಮ ವಿಕಾಸ್ ಸಂಸ್ಥೆಯ ಆಯೋಗದಲ್ಲಿ ರಾಜ್ಯದ ಐದು ಜಿಲ್ಲೆಗಳಲ್ಲಿ ನಮ್ಮ ಮಕ್ಕಳ




ಭವಿಷ್ಯಕ್ಕಾಗಿ ನಮ್ಮ ಹಳ್ಳಿಯನ್ನು ಉಳಿಸೋಣ ಅಭಿಯಾನವನ್ನು ಹವಾಮಾನ ಕ್ರಿಯಾ ಸಮಿತಿಗಳ ಮೂಲಕ ನಡೆಸಲಾಗುತ್ತಿದೆ. ನೆಲ ಜಲ ಅರಣ್ಯ ಜೀವಸಂಪತ್ತು ಹಾಗೂ ಗ್ರಾಮೀಣ ಜೀವನೋಪಾಯ ಚಟುವಟಿಕೆಗಳನ್ನು ಸಂಘಟಿತವಾಗಿ ಕಾಪಾಡಿಕೊಳ್ಳಲು ಕೊರಟಗೆರೆ ತಾಲೂಕು ಮಟ್ಟದ ಕಲ್ಪತರು ಹವಾಮಾನ ಕ್ರಿಯಾ ಸಮಿತಿಗಳ ಒಕ್ಕೂಟವನ್ನು ರಚಿಸಿ ಹವಾಮಾನ ಕ್ರಿಯಾ ಚಟುವಟಿಕೆಗಳಾದ ಭಯೋಚಾರ್ ತಯಾರಿಕೆ, ಮರ ಗಿಡಗಳ ನಡೆಸುವುದು, ಸಾವಯವ ಕೃಷಿಕರ ಸಂಘಟನೆ, ಸ್ಥಳೀಯ ತಳಿಯ ಜಾನುವಾರುಗಳನ್ನು ಉಳಿಸುವುದು ಬೀಜ ಬ್ಯಾಂಕ್ ಗಳ ಸ್ಥಾಪನೆ ಸೇರಿದಂತೆ ಕೃಷಿ ಆಧಾರಿತ ಉದ್ಯಮಗಳ ಉತ್ತೇಜನಕ್ಕೆ ಶ್ರಮಿಸಲಾಗುತ್ತಿದೆ ಎಂದು ತಿಳಿಸಿದರು. ಕೃಷಿ ಇಲಾಖೆಯ ಹೊಳ ವನಹಳ್ಳಿ ರೈತ ಸಂಪರ್ಕ ಕೇಂದ್ರದ ಕೃಷಿ ಅಧಿಕಾರಿ ಗಳು,ಸುನೀತಾರವರು ತೋಟಗಾರಿಕೆ ಇಲಾಖೆ ಅಧಿಕಾರಿಗಳು ಕೆಂಪೇಗೌಡ ರವರು ಪಶು ಸಂಗೋಪನೆ ಇಲಾಖೆಯ ಅಧಿಕಾರಿಗಳು ದತ್ತ ರವರು ಇಲಾಖಾ ಕಾರ್ಯ ಕ್ರಮಗಳ ಕುರಿತು ಸವಿವರವಾದ ಮಾಹಿತಿಯನ್ನು ನೀಡಿದರು ಬಿದಲೂಟಿ ಗ್ರಾಮದ ಹವಾ ಮಾನ ಕ್ರಿಯಾ ಸಮಿತಿಯ ಅಧ್ಯಕ್ಷ ಚನ್ನಾವೀರ ಆರಾಧ್ಯ ರವರು ಅಧ್ಯಕ್ಷತೆ ವಹಿಸಿದ್ದರು.

ಹವಾಮಾನ ಕ್ರಿಯಾ ಆಂದೋಲನದ ತುಮಕೂರು ಜಿಲ್ಲಾ ಸಂಯೋಜಕ ರಾದ ರವಿಕುಮಾರ್ ಕೆ ಎನ್ ರವರು ಕೊರಟಗೆರೆ ತಾಲೂಕು ಹವಾಮಾನ ಕ್ರಿಯಾ ಸಮಿತಿಯ ಪದಾಧಿಕಾರಿಗಳು, ಕೊರಟಗೆರೆ ತಾಲೂಕಿನ ಮಣ್ಣು ಸಂರಕ್ಷಕರುಗಳಾದ ಶಿಲ್ಪಾ, ಲಕ್ಷ್ಮಿ , ಜಾನಕಮ್ಮ, ಅಲುವೇಲಮ್ಮ, ಮಂಜುಳಾ, ಶಾಂತಮ್ಮ, ರಾಮಕ್ಕ, ಜಯಲಕ್ಷ್ಮಿ , ಚಿಕ್ಕಮ್ಮಣ್ಣಿ ರವರು ಹಾಗೂ ಪ್ರಗತಿಪರ ರೈತರಾದ ಚಂದ್ರಶೇಖರ, ಬಾಲಸುಬ್ರಹ್ಮಣ್ಯ, ತಿಮ್ಮರೆಡ್ಡಿ ಮತ್ತು ರೈತ ಸಂಘದ ಅಧ್ಯಕ್ಷರಾದ ಕೆಂಪರಾಜು ಹಾಗೂ ಸದಸ್ಯರು ಹಾಗೂ ಪತ್ರಕರ್ತರದ ಪ್ರಸನ್ನ ರವರು ಹಾಗೂ ನಿವೃತ್ತ ಬ್ಯಾಂಕ್ ನ ಅಧಿಕಾರಿಯದಂತಹ ನಾಗರಾಜುರವರು ಉಪಸ್ಥಿತರಿದ್ದರು. ಕಾರ್ಯಗಾರದಲ್ಲಿ 100 ಕ್ಕೂ ಹೆಚ್ಚಿನ ಕ್ರಿಯಾ ಸಮಿತಿಯ ಸದಸ್ಯರುಗಳಾದ ರೈತರು ಯುವಕರು ಹಾಗೂ ಮಹಿಳೆಯರು ಭಾಗವಹಿಸಿದ್ದರು.

## ಜಲಾಶಯಕ್ಕೆ ನೀರಿನ ಒಳ ಹರಿವು ಆಧಾರದಲ್ಲಿ ರಾಗಿ ಬೆಳೆಗೆ ನೀರು: ಶಾಸಕ ಡಾ. ಎಚ್.ಡಿ. ರಂಗನಾಥ್

**ಕುಣಿಗಲ್:** ತಾಲೂಕಿನ ಮಾರ್ಕೋನಹಳ್ಳಿ, ಮಂಗಳ ಅಚ್ಚುಕಟ್ಟು ಪ್ರದೇಶದ ರಾಗಿ ಬೆಳೆಗೆ ನೀರು ಹರಿಸಬೇಕೆ ಅಥವಾ ಸಾಲು ಕೆರೆಗಳನ್ನು ತುಂಬಿಸಬೇಕೆ ಎಂಬುದರ ಬಗ್ಗೆ ಜಲಾಶಯದ ಒಳ ಹರಿವು ಹಾಗೂ ಮಳೆ ಪ್ರಮಾಣ ನೋಡಿಕೊಂಡು ತೀರ್ಮಾನ ಕೈಗೊಳ್ಳಲಾಗುವುದು ಎಂದು ಶಾಸಕ ಡಾ. ಎಚ್.ಡಿ. ರಂಗನಾಥ್ ತಿಳಿಸಿದರು.



ಅವರು ಭಾನುವಾರ ಮಾರ್ಕೋನಹಳ್ಳಿ ಪ್ರವಾಸಿ ಮಂದಿರ ಬಳಿ ಉಪವಿಭಾಗಾಧಿಕಾರಿ ನಾಹೀದಾ ಜಮ್ ಜಮ್ ಅವರ ಅಧ್ಯಕ್ಷತೆಯಲ್ಲಿ, ಶಾಸಕರ ನೇತೃತ್ವದಲ್ಲಿ ಮಾರ್ಕೋನಹಳ್ಳಿ ಹಾಗೂ ಮಂಗಳ ಜಲಾಶಯದ ಅಚ್ಚುಕಟ್ಟು ಪ್ರದೇಶದ ನೂರಾರು ರೈತರೊಂದಿಗೆ ನಡೆದ ನೀರಾವರಿ ಸಲಹಾ ಸಮಿತಿ ಸಭೆಯಲ್ಲಿ ರೈತರ ಸಲಹೆ ಪಡೆದು ಮಾತನಾಡಿದರು.

ಮಾರ್ಕೋನಹಳ್ಳಿ ಜಲಾಶಯವು 2.4 ಟಿಎಂಸಿ ನೀರು ಸಂಗ್ರಹ ಸಾಮರ್ಥ್ಯ ಹೊಂದಿದೆ. ಹಾಲಿ 1555 ಎಂಸಿಎಫ್‌ಟಿ ನೀರು ಲಭ್ಯ ಇದೆ. ಇನ್ನೂ 846 ಎಂಸಿಎಫ್‌ಟಿ ನೀರು ಜಲಾಶಯಕ್ಕೆ ತುಂಬಿಸಬೇಕಾಗಿದೆ. ಮಂಗಳ ಜಲಾಶಯ 530 ಎಂಸಿಎಫ್‌ಟಿ ನೀರಿನ ಸಾಮರ್ಥ್ಯ ಹೊಂದಿದೆ. ಜಲಾಶಯದಲ್ಲಿ 197 ಎಂಸಿಎಫ್‌ಟಿ ನೀರು ಇದ್ದು, ಜಲಾಶಯ ತುಂಬಲು 333 ಎಂಸಿಎಫ್‌ಟಿ ನೀರು ಅವಶ್ಯಕತೆ ಇದೆ ಎಂದರು.

ಕುಡಿಯುವ ನೀರಿಗೆ ಆದ್ಯತೆ : ರಾಜ್ಯದ ಬಹುತೇಕ ಜಿಲ್ಲಾ ಮತ್ತು ತಾಲೂಕುಗಳಲ್ಲಿ ನಿರೀಕ್ಷಿತ ಪ್ರಮಾಣದಲ್ಲಿ ಮಳೆಯಾಗದೇ ಹಲವು ತಾಲೂಕುಗಳು ಬರ ದವಡೆಗೆ ಸಿಲುಕಿವೆ. ಹೀಗಾಗಿ ಬೆಳೆಯ ಬದಲಾಗಿ ಮೊದಲು ಜನ ಜಾನುವಾರುಗಳ ಕುಡಿಯುವ ನೀರಿಗೆ ಸರ್ಕಾರ ಮೊದಲ ಆದ್ಯತೆ ನೀಡಿದೆ. ನಂತರ ಜಲಾಶಯಗಳಲ್ಲಿನ ನೀರಿನ ಲಭ್ಯತೆ ನೋಡಿಕೊಂಡು ಬೆಳೆಗೆ ನೀರು ಹರಿಸುವ ಸಂಬಂಧ ತೀರ್ಮಾನ ಕೈಗೊಳ್ಳಲಿದೆ. ನಮ್ಮ ತಾಲೂಕು ಮಳೆಯಾಶ್ರಿತ ಪ್ರದೇಶವಾಗಿದ್ದು ಮಳೆ ನಂಬಿ ರೈತರು ಬೆಳೆ ಇಡುತ್ತಿದ್ದಾರೆ. ಮಳೆಯ ಪ್ರಮಾಣ ನೋಡಿಕೊಂಡು ಅಕ್ಟೋಬರ್ ತಿಂಗಳಲ್ಲಿ ರಾಗಿ ಬೆಳೆಗೆ ನೀರು ಕೊಡುವ ಸಂಬಂಧ ಅ.27 ರಂದು ಹಾಸನದಲ್ಲಿ ನಡೆಯುವ ಐಸಿಸಿ ಸಭೆಯಲ್ಲಿ ತೀರ್ಮಾನ ಕೈಗೊಳ್ಳಲಾಗುವುದು ಎಂದು ಹೇಳಿದರು.

ಸಭೆಯಲ್ಲಿ ಎಡೆಯೂರು ಹೇಮಾವತಿ ನಾಲಾ ವಲಯದ ಇಇ ಎಸ್.ಟಿ. ಶ್ರೀನಿವಾಸ್, ಇಇ ಜಿ.ಬಿ.ರುದ್ರೇಶ್, ಕೃಷಿ ಸಹಾಯಕ ನಿರ್ದೇಶಕ ರಂಗನಾಥ್ ಮತ್ತಿತರರು ಇದ್ದರು.

ನಿಮ್ಮ ನೀರು ನಿಮಗೆ ಕೊಡಲು ನಾವು ಯಾರು...?! : ಇದಕ್ಕೂ ಮುನ್ನ ಸಭೆಯಲ್ಲಿ ಭಾಗವಹಿಸಿದ ರೈತರು ರಾಗಿ ಬೆಳೆಗೆ ನೀರು ಕೊಡಿ ಎಂದು ನೀರಾವರಿ ಸಲಹಾ ಸಮಿತಿಗೆ ಮನವಿ ಮಾಡಿದರು. ರೈತರ ಆಶಯವೇ ನನ್ನ ಆಶಯವೂ ಆಗಿದೆ. ವರುಣ ದೇವ ಕೃಪೆ ತೋರಿ ಮಳೆಯಾಗಿ ಜಲಾಶಯಗಳು ತುಂಬಿದರೆ ರಾಗಿ ಬೆಳೆಗೂ, ಭತ್ತದ ಬೆಳೆಗೂ ನೀರು ಕೊಡಲಾಗುವುದು. ನೀರು ರೈತರ ಸ್ವತ್ತು. ನಿಮ್ಮ ನೀರು ನಿಮಗೆ ಕೊಡಲು ನಾವು ಯಾರು? ನಾವುಗಳು ನಿರ್ವಹಣೆ ಮಾಡುವವರು ಮಾತ್ರ ಎಂದು ಶಾಸಕರು ಹೇಳಿದರು.

## ಬ್ರಹ್ಮಶ್ರೀ ನಾರಾಯಣಗುರು, ಶರಣ ನುಲಿಯ ಚಂದಯ್ಯನವರ ಜಯಂತಿ ಪೂರ್ವಭಾವಿ ಸಭೆ



**ತುರುವೇಕೆರೆ :** ಬ್ರಹ್ಮಶ್ರೀ ನಾರಾಯಣಗುರು ಅವರ 172ನೇ ಹಾಗೂ ಶರಣ ನುಲಿಯ ಚಂದಯ್ಯನವರ 919ನೇ ಜಯಂತ್ಯೋತ್ಸವವನ್ನು ಆಗಸ್ಟ್ 28ರಂದು ಆಚರಿಸಲು ಇಂದು ತಾಲ್ಲೂಕು ಕಛೇರಿಯಲ್ಲಿ ಗ್ರೇಡ್ 2 ತಹಸೀಲ್ದಾರ್ ಸುನಿಲ್ ಕುಮಾರ್ ಅವರ ಅಧ್ಯಕ್ಷತೆಯಲ್ಲಿ ಪೂರ್ವಭಾವಿ ಸಭೆ ನಡೆಸಲಾಯಿತು.

ಸಭೆಯಲ್ಲಿ ಮಾತನಾಡಿದ ತಾಲ್ಲೂಕು ಈಡಿಗ ಸಮಾಜದ ಅಧ್ಯಕ್ಷ ಎಸ್.ಎಲ್.ಎನ್. ರಾಜಣ್ಣ, ಪ್ರತಿ ವರ್ಷದಂತೆ ಈ ವರ್ಷವೂ ಸರ್ಕಾರದ ಆಶಯದಂತೆ ತಾಲ್ಲೂಕು ಆಡಳಿತ ಯಾವುದೇ ಲೋಪವಿಲ್ಲದಂತೆ ಬ್ರಹ್ಮಶ್ರೀ ನಾರಾಯಣ ಗುರುಗಳ ಜಯಂತಿಯನ್ನು ಆಚರಿಸಬೇಕು. ತಾಲ್ಲೂಕು ಆಡಳಿತಕ್ಕೆ ಈಡಿಗ ಸಮುದಾಯ ಸರ್ವ ರೀತಿಯಲ್ಲಿ ಸಹಕಾರ ನೀಡುತ್ತದೆ ಎಂದರು.

ತಾಲ್ಲೂಕು ಕೊರಮ ಕೊರಚ ಸಮುದಾಯದ ಅಧ್ಯಕ್ಷ ಶ್ರೀನಿವಾಸ್ ಮಾತನಾಡಿ, 12ನೇ ಶತಮಾನದ ಶರಣ ನುಲಿಯ ಚಂದಯ್ಯನವರ ಜಯಂತಿಯನ್ನು ಸರ್ಕಾರದಿಂದ ಆಚರಣೆ ಮಾಡುತ್ತಿರುವುದು ನಮ್ಮೆಲ್ಲರಿಗೂ ಸಂತಸದ ವಿಚಾರವಾಗಿದೆ. ತಾಲೂಕು ಆಡಳಿತ ಪ್ರತಿ ವರ್ಷದಂತೆ ನುಲಿಯ ಚಂದಯ್ಯನವರ ಜಯಂತಿಯನ್ನು ಆಚರಿಸಲು ತೀರ್ಮಾನಿಸಿದ್ದು, ಸಮುದಾಯ ಅಗತ್ಯ ಸಹಕಾರ ನೀಡುತ್ತದೆ ಎಂದರು.

ಇದೇ ಸಂದರ್ಭದಲ್ಲಿ ಎರಡೂ ಸಮಾಜದ ಅಧ್ಯಕ್ಷರು, ಸದಸ್ಯರುಗಳು ಕಳೆದ ಎರಡು ಮೂರು ವರ್ಷದಿಂದ ಜಯಂತಿ ಆಚರಣೆಯ ಅನುದಾನ ದೊರೆತಿಲ್ಲವಾದ್ದರಿಂದ ಕೂಡಲೇ ಅನುದಾನ ಒದಗಿಸಬೇಕೆಂದು ಮನವಿ ಮಾಡಿದರು. ಇದಕ್ಕೆ ಉತ್ತರಿಸಿದ ಗ್ರೇಡ್ 2 ತಹಸೀಲ್ದಾರ್ ಸುನಿಲ್ ಕುಮಾರ್, ಈ ಕುರಿತಂತೆ ಸರ್ಕಾರಕ್ಕೆ ಪತ್ರ ಬರೆಯಲಾಗಿದೆ. ಅನುದಾನ ಬಂದ ತಕ್ಷಣ ನೀಡಲಾಗುವುದು. ಆಗಸ್ಟ್ 28ರಂದು ಶಾಸಕ ಎಂ.ಟಿ.ಕೃಷ್ಣಪ್ಪನವರ ಅಧ್ಯಕ್ಷತೆಯಲ್ಲಿ ನಡೆಯುವ ಬ್ರಹ್ಮಶ್ರೀ ನಾರಾಯಣ ಗುರುಗಳು ಹಾಗೂ ನುಲಿಯ ಚಂದಯ್ಯನವರ ಜಯಂತಿಗೆ ಸಮುದಾಯದ ಎಲ್ಲರೂ ಸಹಕಾರ ನೀಡಬೇಕು ಹಾಗೂ ಬೆಳಿಗ್ಗೆ 10.30ಕ್ಕೆ ತಾಲೂಕು ಕಛೇರಿ ಆವರಣದಲ್ಲಿ ನಡೆಯುವ ಜಯಂತಿ ಆಚರಣೆಯಲ್ಲಿ ಎಲ್ಲರೂ ಪಾಲ್ಗೊಳ್ಳಬೇಕೆಂದರು.

ಈಡಿಗ ಸಮುದಾಯದ ಉಪಾಧ್ಯಕ್ಷ ಉಮೇಶ್, ಕಾರ್ಯದರ್ಶಿ ಗೋಪಾಲ್, ಆರ್ಯ ಈಡಿಗರ ಸಂಘದ ಜಿಲ್ಲಾ ನಿರ್ದೇಶಕ ಮುಗಳೂರು ಮಂಜುನಾಥ್, ಗ್ರಾಪಂ ಮಾಜಿ ಅಧ್ಯಕ್ಷ ದೇವರಾಜ್, ಕಾಂಗ್ರೆಸ್ ಒಬಿಸಿ ಅಧ್ಯಕ್ಷ ಚೇತನ್ ಕುಮಾರ್, ತಾಲ್ಲೂಕು ಕೊರಮ ಕೊರಚ ಸಮುದಾಯದ ಉಪಾಧ್ಯಕ್ಷ ವಿಠಲ್ ಕುಮಾರ್, ಖಜಾಂಚಿ ಕರಿಯಪ್ಪ, ಮಾಜಿ ಗೌರವಾಧ್ಯಕ್ಷ ರಾಮಾಂಜಿನಪ್ಪ ಹಾಗೂ ಕಂದಾಯ ಇಲಾಖೆಯ ವತ್ಸಲ ಉಪಸ್ಥಿತರಿದ್ದರು.

## ರೈತರು ದೇಶದ ಬೆನ್ನೆಲುಬು ಅವರ ಕೈ ಹಿಡಿಯಬೇಕಿರುವುದು ಸರ್ಕಾರದ ಕರ್ತವ್ಯ: ಡಾ. ಶ್ರೀ ಹನುಮಂತನಾಥ ಸ್ವಾಮೀಜಿ




**ಮಧುಗಿರಿ:** ರೈತನು ಇವತ್ತಿನ ಪರಿಸ್ಥಿತಿಯಲ್ಲಿ ಬಹಳ ಸಂಕಷ್ಟದ ಸಮಯವನ್ನು ಕಳೆಯುತ್ತಿದ್ದು ಈ ದೇಶದ ಬೆನ್ನೆಲುಬಾದ ರೈತರ ನೆರವಿಗೆ ಸರ್ಕಾರ ಹಾಗೂ ಸಂಘ ಸಂಸ್ಥೆಗಳು ನಿಲ್ಲಬೇಕು ಎಂದು ಎಲೆ ರಾಂಪುರದ ಕುಂಚಿಟಿಗ ಮಹಾ ಸಂಸ್ಥಾನ ಮಠದ ಪೀಠಾಧ್ಯಕ್ಷರಾದ ಡಾ. ಶ್ರೀ ಹನುಮಂತನಾಥ ಸ್ವಾಮೀಜಿ ಸಲಹೆ ನೀಡಿದರು.

ಪಟ್ಟಣದ ಹೊರವಲಯದ ತುಮುಲ್ ಕ್ಷೀರಭವನದಲ್ಲಿ ತಾಲೂಕಿನ ಹೈನುಗಾರರ ಮೃತಪಟ್ಟ ಹಸುಗಳ ಪರಿಹಾರದ ಚೆಕ್ ವಿತರಿಸಿ ಮಾತನಾಡಿದ ಶ್ರೀಗಳು ರೈತರು ಇಂದು ಉಸಿರು ಕಟ್ಟುವ ವಾತಾವರಣದಲ್ಲಿ ಜೀವನ ಮಾಡುತ್ತಿದ್ದಾರೆ ಒಕ್ಕಲಿತನ ಮಾಡುವ ಪ್ರತಿಯೊಬ್ಬರು ಹೈನುಗಾರಿಕೆಯನ್ನು ನಂಬಿ ಬದುಕುತ್ತಿದ್ದಾರೆ. ವ್ಯವಸಾಯದಲ್ಲಿ ನಷ್ಟ ಉಂಟಾದರೂ ಹೈನುಗಾರಿಕೆಯಲ್ಲಿ ಕೊಂಚವಾದರೂ ಲಾಭವನ್ನ ನೋಡಲು ಸಾಧ್ಯವಾಗುತ್ತಿದೆ. ಇದಕ್ಕೆ ಇತರೆ ಎಲ್ಲಾ ಹಾಲುಗಳ ಒಕ್ಕೂಟಗಳಿಗಿಂತ ತುಮಕೂರು ಹಾಲು ಒಕ್ಕೂಟದ ಕಾರ್ಯಕ್ರಮಗಳು ರೈತರ ನೆರವಿಗೆ ನಿಂತಿರುವುದು ಸಾಕ್ಷಿಯಾಗಿದೆ. ಅದು ರೈತ ಕಲ್ಯಾಣ ಟ್ರಸ್ಟ್ ನಿಂದ ಸಾಧ್ಯವಾಗಿದ್ದು ಈ ಕಾರ್ಯಕ್ರಮ ಆರಂಭವಾಗಲು ಕಾರಣರಾದ ತುಮಲ್ ಮಾಜಿ ಅಧ್ಯಕ್ಷ ಹಾಲಿ ನಿರ್ದೇಶಕರಾದ ಕೊಂಡವಾಡಿ ಚಂದ್ರಶೇಖರ್ ರವರ ದೂರದೃಷ್ಟಿಯೇ ಕಾರಣವಾಗಿದೆ. ಎಲ್ಲಿಯೂ ಹಸು ಮರಣ ಹೊಂದಿದರೆ ಅಥವಾ ಹೈನುಗಾರರು ಮರಣ ಹೊಂದಿದರೆ ಪರಿಹಾರವನ್ನು ಕೊಡುವ ಪರಿಪಾಠವಿಲ್ಲ. ಅಲ್ಲದೆ ಹೈನುಗಾರರ ಮಕ್ಕಳ ಉನ್ನತ ಶಿಕ್ಷಣಕ್ಕೆ ವಿದ್ಯಾರ್ಥಿ ವೇತನ, ಜಿಲ್ಲಾ ಕೇಂದ್ರದಲ್ಲಿ ಮಕ್ಕಳಿಗಾಗಿ ಹಾಸ್ಟೆಲ್ ವ್ಯವಸ್ಥೆ ಇವೆಲ್ಲವೂ ಕೂಡ ತುಮಕೂರು ಹಾಲು ಒಕ್ಕೂಟದಿಂದ ಮಾತ್ರ ಸಾಧ್ಯವಾಗಿದ್ದು ಇದನ್ನು ಸರ್ಕಾರ ರಾಜ್ಯದೆಲ್ಲೆಡೆ ವಿಸ್ತರಿಸಬೇಕು ಎಂದು ಸಲಹೆ ನೀಡಿದರು. ಹಾಗೆಯೇ ರೈತರೂ ಕೂಡ ಗುಣಮಟ್ಟದ ಹಾಲನ್ನು ಹಾಕುವ ಮೂಲಕ ಒಕ್ಕೂಟವನ್ನು ಸದೃಢಗೊಳಿಸಬೇಕು. ಇಂದು ಇಂಜಿನಿಯರ್, ವೈದ್ಯರು ಪಡೆಯುವಂತಹ ವೇತನವನ್ನು 4 ಹಸುಗಳನ್ನು ಸಾಕುವ ರೈತರು ಪಡೆಯುತ್ತಿದ್ದಾರೆ. ಇಂದು 250 ಮೃತ ರಾಸುಗಳ ಪರಿಹಾರ ವಿಮೆಯನ್ನ ನೀಡುತ್ತಿದ್ದು ಇದಕ್ಕೆ ಕಾರಣ ಸಧೃಡವಾದ ಒಕ್ಕೂಟ ವ್ಯವಸ್ಥೆ. ಇದಕ್ಕೆ ನಿಮ್ಮೆಲ್ಲರ ಸಹಕಾರ ಮುಂದುವರಿಯಬೇಕು. ಹಾಗೂ ರೈತ ಕಲ್ಯಾಣ ಟ್ರಸ್ಟ್ ಸ್ಥಾಪಿಸಿದ ಕೊಂಡವಾಡಿ ಚಂದ್ರಶೇಖರ್ ರವರು ಕೂಡ ಮುಂದಿನ ದಿನಗಳಲ್ಲಿ ಉನ್ನತ ಅಧಿಕಾರವನ್ನು ಪಡೆಯಲಿ ಎಂದು ಆಶಿಸಿದರು.

ತುಮಲ್ ನಿರ್ದೇಶಕ ಕೊಂಡವಾಡಿ ಚಂದ್ರಶೇಖರ್ ಮಾತನಾಡಿ ಪ್ರತಿಧನಸುಗಳ ಆರೋಗ್ಯವನ್ನು ಹೈನುಗಾರು ಕಾಪಾಡಿಕೊಳ್ಳಬೇಕು ಗುಣಮಟ್ಟದ ಹಾಲನ್ನ ಹಾಕಬೇಕು ಇದು ಒಕ್ಕೂಟವನ್ನ ಮತ್ತಷ್ಟು ಶಕ್ತಿಯುತಗೊಳಿಸುತ್ತದೆ ಅಲ್ಲದೆ ಸಕಾಲದಲ್ಲಿ ಬಟವಾಡೆ ನೀಡಲು ಸಹಕಾರಿಯಾಗುತ್ತದೆ ಇಂದು ತುಮಕೂರು ಒಕ್ಕೂಟದ ಹಾಲು, ಶ್ರೇಷ್ಠ ಗುಣಮಟ್ಟದಿಂದ ಕೂಡಿದ್ದು ತಿರುಪತಿಗೆ ತುಪ್ಪವನ್ನ ಕಾಶ್ಮೀರದವರೆಗೂ ನಮ್ಮ ಸೈನಿಕರಿಗೆ ಗುಣಮಟ್ಟದ ಹಾಲನ್ನ ವಿತರಣೆ ಮಾಡುತ್ತಿದ್ದೇವೆ ಅಲ್ಲದೆ ಮುಂಬೈ ಮಾರುಕಟ್ಟೆಗೂ ನಮ್ಮ ಮಾರುಕಟ್ಟೆಯನ್ನು ವಿಸ್ತರಿಸಿದ್ದು ಈ ಗುಣಮಟ್ಟದ ಹಾಲಿನಿಂದಲೇ ಎಂಬುದನ್ನು ನಾವು ಮರೆಯಬಾರದು ಹಾಗಾಗಿ ಹೈನುಗಾರರ ಪ್ರತಿ ಸಂಕಷ್ಟಕ್ಕೆ ನಾವು ಎಂದಿಗೂ ರೈತ ಕಲ್ಯಾಣ ಟ್ರಸ್ಟ್ ಕಾರ್ಯಕ್ರಮಗಳನ್ನ ನಿಲ್ಲಿಸಲು ಬಿಡುವುದಿಲ್ಲ ಎಂದರು.

ಈ ಸಂದರ್ಭದಲ್ಲಿ ಪುರಸಭೆ ಮಾಜಿ ಸದಸ್ಯ ಜಗಣ್ಣ, ತಾಪಂ ಮಾಜಿ ಅಧ್ಯಕ್ಷ ಸುನಂದ ಸಿದ್ದಪ್ಪ, ಮಾಜಿ ಸದಸ್ಯ ದೊಡ್ಡಯ್ಯ, ಎಪಿಎಂಸಿ ಮಾಜಿ ಸದಸ್ಯ ಕೂರ್ಲಪ್ಪ, ಮುಖಂಡರಾದ ಗುಟ್ಟೇ ವೀರೇಂದ್ರ, ಕಾಂತಣ್ಣ, ಹೂವಿನಹಳ್ಳಿ ರಾಮಚಂದ್ರಪ್ಪ, ಬೋರ್ವೆಲ್ ಕುಮಾರ್ ಹಾಗೂ ತುಮಲ್ ಅಧಿಕಾರಿಗಳು ಹೈನುಗಾರರು ಉಪಸ್ಥಿತರಿದ್ದರು.

## ಆಗಸ್ಟ್ 29ರಂದು ಒಕ್ಕಲಿಗ ಸಮುದಾಯದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪುರಸ್ಕಾರ

**ತುರುವೇಕೆರೆ:** ಬಿಜಿಎಸ್ ವಿದ್ಯಾನಿಧಿ ಟ್ರಸ್ಟ್, ಬಿಜಿಎಸ್ ಅನ್ನದಾನ ಸೇವಾ ಟ್ರಸ್ಟ್, ನೇಗಿಲ ಯೋಗಿ ಸೇವಾ ಸಮಾಜ ಸಂಯುಕ್ತಾಶ್ರಯದಲ್ಲಿ ತಾಲ್ಲೂಕಿನ ಒಕ್ಕಲಿಗ ಸಮುದಾಯದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಸಮಾರಂಭವನ್ನು ಆಗಸ್ಟ್ 29ರಂದು ಬೆಳಿಗ್ಗೆ 10.30ಕ್ಕೆ ಪಟ್ಟಣದ ಎಸ್.ಎ.ಸಿ. ಮಯೂರ ವಿದ್ಯಾಲಯದಲ್ಲಿ ಏರ್ಪಡಿಸಲಾಗಿದೆ ಎಂದು ಬಿಜಿಎಸ್ ವಿದ್ಯಾನಿಧಿ ಟ್ರಸ್ಟ್ ಕಾರ್ಯದರ್ಶಿ ಪ್ರೊ.ಪುಟ್ಟರಂಗಪ್ಪ ತಿಳಿಸಿದರು.



ಮಾಧ್ಯಮದೊಂದಿಗೆ ಮಾತನಾಡಿದ ಅವರು, ಒಕ್ಕಲಿಗ ಸಮುದಾಯದ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಪುರಸ್ಕರಿಸಿ ಇನ್ನೂ ಹೆಚ್ಚಿನ ಸಾಧನೆಗೈಯಲು ಪ್ರೋತ್ಸಾಹಿಸುವ ಉದ್ದೇಶದಿಂದ ಸಮಾರಂಭವನ್ನು ಹಮ್ಮಿಕೊಳ್ಳಲಾಗಿದೆ. ಸಮಾರಂಭದ ದಿವ್ಯಸಾನಿಧ್ಯವನ್ನುಶ್ರೀಆದಿಚುಂಚನಗಿರಿ ಮಹಾಸಂಸ್ಥಾನದ ಕಾರ್ಯದರ್ಶಿ ಶ್ರೀ ಪ್ರಸನ್ನನಾಥ ಸ್ವಾಮೀಜಿ ವಹಿಸಲಿದ್ದು, ಶಾಸಕ ಎಂ.ಟಿ.ಕೃಷ್ಣಪ್ಪ ಅಧ್ಯಕ್ಷತೆ ವಹಿಸಲಿದ್ದಾರೆ. ಹಾಲಪ್ಪ ಪ್ರತಿಷ್ಠಾನದ ಅಧ್ಯಕ್ಷ ಮುರಳೀಧರ ಹಾಲಪ್ಪ ಪ್ರೇರಣಾ ನುಡಿಗಳನ್ನಾಡಿ, ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರಶಸ್ತಿ ಪತ್ರ ವಿತರಿಸಲಿದ್ದಾರೆ.

ಮಾಜಿ ಶಾಸಕ ಮಸಾಲಾ ಜಯರಾಮ್, ರಾಜ್ಯ ಒಕ್ಕಲಿಗರ ಸಂಘದ ನಿರ್ದೇಶಕ ಆರ್. ಹನುಮಂತರಾಯಪ್ಪ, ಬಿಜಿಎಸ್ ವಿದ್ಯಾನಿಧಿ ಟ್ರಸ್ಟ್ ಅಧ್ಯಕ್ಷ ಎಂ.ಎನ್. ಚಂದ್ರೇಗೌಡ, ನೇಗಿಲ ಯೋಗಿ ಸೇವಾ ಸಮಾಜದ ಅಧ್ಯಕ್ಷ ರಂಗನಾಥ್ ಸೇರಿದಂತೆ ಹಲವು ಗಣ್ಯರು ಆಗಮಿಸಲಿದ್ದಾರೆ ಎಂದರು.

# ಎಸ್‌ಎಸ್‌ಎಲ್‌ಸಿ ಮಕ್ಕಳಿಗೆ ವಿದ್ಯಾರ್ಥಿ ವೇತನ




**ಮಧುಗಿರಿ:** ಸ್ಥಳದಲ್ಲಿಯೇ ವಿದ್ಯಾರ್ಥಿಗಳಿಗೆ ಭೋದನೆ ಮಾಡಿ ಪರೀಕ್ಷೆಯನ್ನು ಬರೆಸಿರುವಂತಹ ಕಾರ್ಯ ಕ್ರಮ ವಿನೂತನವಾದ ಪ್ರಯತ್ನವಾಗಿದೆ ಎಂದು ಖಾಸಗಿ ಶಾಲೆಗಳ ಒಕ್ಕೂಟದ ಅಧ್ಯಕ್ಷ ಎಂ.ಎಸ್ ಶಂಕರನಾರಾಯಣ ಅಭಿಪ್ರಾಯಪಟ್ಟರು.

ಪಟ್ಟಣದ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಕೆ.ಎನ್.ರಾಜಣ್ಣ ಸಭಾಂಗಣದಲ್ಲಿ ಬೆಂಗಳೂರಿನ ದೀಕ್ಷಾ ವೇದಾಂತು ಕಾಲೇಜು ವತಿಯಿಂದ ಶಿರಾ, ಪಾವಗಡ, ಮಧುಗಿರಿ ಶಾಲೆಗಳಲ್ಲಿ ಎಸ್ ಎಸ್ ಎಲ್ ಸಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ನೀಡುವ ಪರೀಕ್ಷಾ ಕಾರ್ಯಕ್ರಮವನ್ನು ಕುರಿತು ಮಾತನಾಡಿದ ಅವರು,

ದೀಕ್ಷಾ ವೇದಾಂತು ಕಾಲೇಜಿನವರು ವಿದ್ಯಾರ್ಥಿಗಳ ಮುಂದಿನ ವಿದ್ಯಾಭ್ಯಾಸಕ್ಕೆ ಅವಶ್ಯವಿರುವಂತಹ ವಾತವರಣವನ್ನು ಈಗಲೇ ಸೃಷ್ಟಿಸಿ ಅನೂಕೂಲ ಮಾಡಿ ಕೊಡುತ್ತಿದ್ದಾರೆ. ಈ ಕಾಲೇಜು ರಾಜ್ಯದಲ್ಲಿ ಸುಮಾರು 14 ಕೇಂದ್ರಗಳನ್ನು ಹೊಂದಿರುವ ಪ್ರತಿಷ್ಠಿತ ಕಾಲೇಜು. ವಿದ್ಯಾರ್ಥಿಗಳು ಈ ಸ್ಪರ್ಧಾತ್ಮಕ ಯುಗದಲ್ಲಿ ವಿದ್ಯೆಯ ಮೂಲಕ ಎಲ್ಲಾವನ್ನೂ ಪಡೆಯ ಬಹುದಾಗಿದ್ದು ತಮ್ಮ ಪೋಷಕರೊಂದಿಗೆ ಪರೀಕ್ಷೆ ಯನ್ನು ಎದುರಿಸುವಂತಹ ಸನ್ನೀವೇಶವನ್ನು ಕಾಲೇಜು ಮಾಡಿಕೊಟ್ಟಿದೆ. ಇಂತಹ ಅವಕಾಶಗಳನ್ನು ವಿದ್ಯಾರ್ಥಿಗಳು ಬಳಸಿಕೊಂಡು ಉನ್ನತ ವಿದ್ಯಾಭ್ಯಾಸದ ಕಡೆ ಗಮನಹರಿಸಬೇಕು ಎಂದರು.

ನೆಲಮಂಗಲದ ದೀಕ್ಷಾ ವೇದಾಂತು ಕಾಲೇಜಿನ ಮುಖ್ಯಸ್ಥ ಕಲ್ಯಾಣ್ ಕುಮಾರ್ .ಸಿ , ಮಾತನಾಡಿ ಎಸ್ ಎಸ್ ಎಲ್ ಸಿ ಪರೀಕ್ಷೆಯ ನಂತರ ನಮ್ಮ ಕಾಲೇಜಿನಲ್ಲಿ ದಾಖಲಾತಿಗಳನ್ನು ಇಡೀ ರಾಜ್ಯಾದ್ಯಂತ ಇಂತಹ ಕಾರ್ಯಕ್ರಮಗಳನ್ನು ಆಯೋಜಿಸುವುದರ ಮೂಲಕ ದಾಖಲಾತಿ ಮಾಡಿಕೊಳ್ಳಲಾಗುತ್ತಿದೆ. ಇದರಿಂದ ವಿದ್ಯಾರ್ಥಿಗಳಿಗೂ ಹಾಗೂ ಪೋಷಕರಿಗೂ ಅನೂಕೂಲವಾಗಲಿದೆ. ನಮ್ಮ ಕಾಲೇಜಿನಲ್ಲಿ ಮುಂದಿನ ವಿದ್ಯಾಭ್ಯಾಸಕ್ಕೆ ಅಗತ್ಯವಿರುವ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಎದುರಿಸುವಂತಹ ಕೌಶಲ್ಯ ಹಾಗೂ ವೃತ್ತಿಪರ ಪರೀಕ್ಷೆಗಳಾದ ಇಂಜನಿಯರಿಂಗ್, ವೈದ್ಯಕೀಯ ಸೀಟುಗಳ ಆಯ್ಕೆ ಪ್ರಕ್ರಿಯೆಗಳ ಬಗ್ಗೆ ವಿದ್ಯಾರ್ಥಿಗಳಿಗೆ ಮಾಹಿತಿ ನೀಡಲಾಗುವುದು ಎಂದರು.

ದೀಕ್ಷಾ ವೇದಾಂತು ಮೆಗಾ ಡಿಸ್ಯಾಟ್ ವಿದ್ಯಾರ್ಥಿ ವೇತನದ ಈ ಪರೀಕ್ಷೆಯಲ್ಲಿ ಮೂರು ತಾಲೂಕಿನಿಂದ ಸುಮಾರು 152 ಕ್ಕೂ ಹೆಚ್ಚು ವಿದ್ಯಾರ್ಥಿಗಳು ಭಾಗವಹಿಸಿ ಇವರಲ್ಲಿ ಭೌತಶಾಸ್ತ್ರ ಹಾಗೂ ರಸಾಯನಶಾಸ್ತ್ರ ವಿಷಯದ 25 ಅಂಕೆಗಳಿಗೆ ನಡೆದ ಪರೀಕ್ಷೆಯಲ್ಲಿ ಶೇ.100 ರಷ್ಟು ಅಂಕಗಳೊಂದಿಗೆ ವಿದ್ಯಾರ್ಥಿವೇತನ, ಉಚಿತ ಹಾಸ್ಟೆಲ್, ಉಚಿತ ಕಾಲೇಜು ಶಿಕ್ಷಣಕ್ಕಾಗಿ 6 ಜನ ವಿದ್ಯಾರ್ಥಿಗಳು, ಉಚಿತ ಕಾಲೇಜು ಶಿಕ್ಷಣದಲ್ಲಿ 4 ಜನ ವಿದ್ಯಾರ್ಥಿಗಳು, ಇತರೆ ವಿದ್ಯಾರ್ಥಿವೇತನಕ್ಕಾಗಿ 5 ಜನ ವಿದ್ಯಾರ್ಥಿಗಳು ಉನ್ನತ ಅಂಕಗಳನ್ನು ಗಳಿಸಿ ಕಾಲೇಜಿನ ವಿದ್ಯಾರ್ಥಿ ವೇತನಕ್ಕೆ ಭಾಜನರಾದರು.

ಕಾರ್ಯಕ್ರಮದಲ್ಲಿ ದೀಕ್ಷಾ ವೇದಾಂತು ಕಾಲೇಜಿನ ನಿತಿನ್ ಎನ್,ಯತೀಶ್ ವೈ.ಜೆ ಹಾಗೂ ಪೋಷಕರು, ವಿದ್ಯಾರ್ಥಿಗಳು ಇದ್ದರು.

# ಕಡಿಮೆ ದರದಲ್ಲಿ ಎಥೆನಾಲ್ ಉತ್ಪಾದಕರಿಗೆ ಅಕ್ಕಿ ಮಾರಾಟ: ಪ್ರಿಯಾಂಕ ಖರ್ಗೆ ಆಕ್ಷೇಪ

**ಬೆಂಗಳೂರು:** ತೆರಿಗೆದಾರರ ಹಣದಲ್ಲಿ ಖರೀದಿಸಿದ ಅಕ್ಕಿಯನ್ನು ಎಥೆನಾಲ್ ಉತ್ಪಾದಕರಿಗೆ ಶೇ.40ರಷ್ಟು ಕಡಿಮೆ ದರದಲ್ಲಿ ಮಾರಾಟ ಮಾಡುತ್ತಿರುವುದೇಕೆ ಎಂದು ಗೃಹ ಸಚಿವ ಪ್ರಿಯಾಂಕ್ ಖರ್ಗೆ ಪ್ರಶ್ನಿಸಿದ್ದಾರೆ. ತಮ್ಮ ಸಾಮಾಜಿಕ ಜಾಲತಾಣದಲ್ಲಿ ಈ ಕುರಿತು ಪ್ರತಿಕ್ರಿಯಿಸಿರುವ ಅವರು, ಕೇಂದ್ರ ಸರ್ಕಾರದ ಎಥೆನಾಲ್ ನೀತಿಯ ಬಗ್ಗೆ ಹಲವು ಪ್ರಶ್ನೆಗಳನ್ನು ಮುಂದಿಟ್ಟಿದ್ದಾರೆ.

ಆಹಾರ ಭದ್ರತೆಗಾಗಿ ತೆರಿಗೆದಾರರ ಹಣದಲ್ಲಿ ರೈತರಿಂದ ಭತ್ತ ಖರೀದಿಸಿ, ಅದನ್ನು ಸಂಗ್ರಹಿಸಿ, ಸಾಗಣೆ ವೆಚ್ಚ ಭರಿಸಿದ ಬಳಿಕ ಭಾರತೀಯ ಆಹಾರ ನಿಗಮ (ಎಫ್‌ಸಿಐ) ಮೂಲಕ ಎಥೆನಾಲ್ ಉತ್ಪಾದಕರಿಗೆ ಅದರ ಸ್ವಾಧೀನ ವೆಚ್ಚಕ್ಕಿಂತ ಸುಮಾರು ಶೇ.40ರಷ್ಟು ಕಡಿಮೆ ದರದಲ್ಲಿ ಅಕ್ಕಿಯನ್ನು ಮಾರಾಟ ಮಾಡುತ್ತಿರುವ ಕೇಂದ್ರ ಸರ್ಕಾರದ ನೀತಿ ಸರಿಯಲ್ಲ ಎಂದು ಅವರು ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಭಾರತದ ಎಥೆನಾಲ್ ಗಣಿತವೇ ಸರಿಯಾಗಿ ಹೊಂದಿಕೆಯಾಗುತ್ತಿಲ್ಲ. ಆಹಾರ ಭದ್ರತೆಗಾಗಿ ಸರ್ಕಾರ ರೈತರಿಂದ ಭತ್ತವನ್ನು ಖರೀದಿಸುತ್ತದೆ. ಇದಕ್ಕಾಗಿ ತೆರಿಗೆದಾರರ ಹಣ ಬಳಸಲಾಗುತ್ತದೆ. ಬಳಿಕ ಖರೀದಿಸಿದ ಧಾನ್ಯವನ್ನು ಸಂಗ್ರಹಿಸುವುದು, ಸಾಗಣೆ ಮಾಡುವುದು ಸೇರಿದಂತೆ ಸರ್ಕಾರದ ಮೇಲೆ ಮತ್ತಷ್ಟು ವೆಚ್ಚದ ಹೊರೆ ಬೀಳುತ್ತದೆ. ಇಷ್ಟೆಲ್ಲ ವೆಚ್ಚ ಮಾಡಿದ ಬಳಿಕ ಅದೇ ಅಕ್ಕಿಯನ್ನು ಎಥೆನಾಲ್ ಉತ್ಪಾದಕರಿಗೆ ಸ್ವಾಧೀನ ವೆಚ್ಚಕ್ಕಿಂತ ಸುಮಾರು ಶೇ.40ರಷ್ಟು ಕಡಿಮೆ ದರದಲ್ಲಿ ಮಾರಾಟ ಮಾಡುತ್ತಿರುವುದು ಯಾವ ರೀತಿಯ ಆರ್ಥಿಕ ನೀತಿ ಎಂದು ಅವರು ಪ್ರಶ್ನಿಸಿದ್ದಾರೆ. ಈ ಸಂಪೂರ್ಣ ವ್ಯವಸ್ಥೆಯಿಂದ ನಿಜವಾಗಿ ಲಾಭ ಪಡೆಯುತ್ತಿರುವವರು ಯಾರು? ಎಂದು ಪ್ರಶ್ನಿಸಿರುವ ಸಚಿವರು, ತುರ್ತಾಗಿ ಸೃಷ್ಟಿಸಲಾದ ಎಥೆನಾಲ್ ಉತ್ಪಾದನಾ ಸಾಮರ್ಥ್ಯಕ್ಕೆ ಅಗತ್ಯವಾದ ಕಚ್ಚಾ ವಸ್ತು ಒದಗಿಸುವ ಉದ್ದೇಶದಿಂದ ಆಹಾರ ಧಾನ್ಯವನ್ನು ದೊಡ್ಡ ಪ್ರಮಾಣದಲ್ಲಿ ಎಥೆನಾಲ್ ಉತ್ಪಾದನೆಗೆ ಒದಗಿಸಲಾಗುತ್ತಿದೆಯೇ ಎಂದು ಕೇಳಿದ್ದಾರೆ. ಇನ್ನೊಂದೆಡೆ, ಸರ್ಕಾರವೇ ಉತ್ಪಾದಕರಿಂದ ಹೆಚ್ಚಿನ ಬೆಲೆಗೆ ಎಥೆನಾಲ್ ಖರೀದಿಸಿ, ಅದನ್ನು ಪೆಟ್ರೋಲ್‌ನಲ್ಲಿ ಮಿಶ್ರಣ ಮಾಡುತ್ತಿದೆ. ಹೀಗಿರುವಾಗ ಧಾನ್ಯವನ್ನು ಕಡಿಮೆ ದರದಲ್ಲಿ ನೀಡಿ,

ಬಳಿಕ ಅದೇ ಉದ್ಯಮದಿಂದ ಹೆಚ್ಚಿನ ಬೆಲೆಗೆ ಎಥೆನಾಲ್ ಖರೀದಿಸುವುದರಿಂದ ಅಂತಿಮವಾಗಿ ಸಾಮಾನ್ಯ ಗ್ರಾಹಕನಿಗೆ ಆಗುವ ಲಾಭವೇನು? ಎಂದು ಅವರು ಕಿಡಿಕಾರಿದ್ದಾರೆ.ಎಥೆನಾಲ್ ಮಿಶ್ರಣದ ಪರಿಣಾಮವಾಗಿ ಪೆಟ್ರೋಲ್ ಬೆಲೆ ಸಾಮಾನ್ಯ ಜನರಿಗೆ ಕಡಿಮೆಯಾಗಿದೆಯೇ? ವಾಹನಗಳ ಮೈಲೇಜ್ ಮತ್ತು ನಿರ್ವಹಣಾ ವೆಚ್ಚದ ಮೇಲೆ ಉಂಟಾಗುವ ಪರಿಣಾಮವನ್ನು ಯಾರು ಪರಿಗಣಿಸುತ್ತಿದ್ದಾರೆ? ಎಂದು ಅವರು ಪ್ರಶ್ನಿಸಿದ್ದಾರೆ. ಯಾರನ್ನು ಯಾರು ಸಬ್ಸಿಡಿ ಮಾಡುತ್ತಿದ್ದಾರೆ? ಈ ವ್ಯವಸ್ಥೆಯಲ್ಲಿ ನಿಜವಾದ ಲಾಭ ಯಾರಿಗೆ? ಎಂಬುದಕ್ಕೆ ಕೇಂದ್ರ ಸರ್ಕಾರ ಸ್ಪಷ್ಟವಾಗಿ ಉತ್ತರಿಸಬೇಕಾಗಿದೆ ಎಂದು ಪ್ರಿಯಾಂಕ್ ಖರ್ಗೆ ಹೇಳಿದ್ದಾರೆ.

ಆಹಾರ ಭದ್ರತೆಗಾಗಿ ಮೀಸಲಿಟ್ಟಿರುವ ಧಾನ್ಯವನ್ನು ಎಥೆನಾಲ್ ಉತ್ಪಾದನೆಗೆ ಬಳಸುವ ನೀತಿಯ ಆರ್ಥಿಕ, ಸಾಮಾಜಿಕ ಹಾಗೂ ಸಾರ್ವಜನಿಕ ಹಿತಾಸಕ್ತಿಯ ಪರಿಣಾಮಗಳ ಕುರಿತು ಕೇಂದ್ರ ಸರ್ಕಾರ ಪಾರದರ್ಶಕವಾಗಿ ಲೆಕ್ಕ ನೀಡಬೇಕು ಎಂದು ಅವರು ಒತ್ತಾಯಿಸಿದ್ದಾರೆ.

# ಪೋಷಕರ ತ್ಯಾಗವೇ ವಿದ್ಯಾರ್ಥಿಗಳ ಸಾಧನೆಯ ಬೆನ್ನೆಲುಬು: ಡಾ. ಕೆ. ಬಿ. ಲಿಂಗೇಗೌಡ

**ತುಮಕೂರು:** ನಗರದ ಶ್ರೀ ಸಿದ್ಧಾರ್ಥ ಇನ್‌ಸ್ಟಿಟ್ಯೂಟ್ ಆಫ್ ಮ್ಯಾನೇಜ್‌ಮೆಂಟ್ ಸ್ಟಡೀಸ್ (ಎಂಬಿಎ) ವತಿಯಿಂದ 28ನೇ ಬ್ಯಾಚ್‌ನ ವಿದ್ಯಾರ್ಥಿಗಳಿಗೆ ಪದವಿ ಪ್ರದಾನ ಸಮಾರಂಭವು ಪಿಜಿ ಸೆಮಿನಾರ್ ಹಾಲ್‌ನಲ್ಲಿ ಆಯೋಜಿಸಲಾಗಿತ್ತು.

ಶ್ರೀ ಸಿದ್ಧಾರ್ಥ ಅಕಾಡೆಮಿ ಆಫ್ ಹೈಯರ್ ಎಜುಕೇಶನ್‌ನ ಉಪಕುಲಪತಿಗಳಾದ ಡಾ. ಕೆ. ಬಿ. ಲಿಂಗೇಗೌಡ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಪ್ರತಿಯೊಬ್ಬ ವಿದ್ಯಾರ್ಥಿಯೂ ಪದವೀಧರನಾಗುವ ಹಿಂದೆ ಪೋಷಕರ ಅಪಾರ ತ್ಯಾಗ, ಪರಿಶ್ರಮ ಮತ್ತು ನಿರಂತರ ಪ್ರೋತ್ಸಾಹ ಅಡಗಿದೆ. ವಿದ್ಯಾರ್ಥಿಗಳು ತಮ್ಮ ಜೀವನದಲ್ಲಿ ಸಾಧನೆಯ ಎತ್ತರಕ್ಕೇರಿದಾಗ ತಮ್ಮ ಪೋಷಕರ ಕೊಡುಗೆಯನ್ನು ಎಂದಿಗೂ ಮರೆಯಬಾರದು ಎಂದು ಅವರು ಅಭಿಪ್ರಾಯ ವ್ಯಕ್ತಪಡಿಸಿದರು. ಪೋಷಕರ ಆಶಯ ಮತ್ತು ಕನಸುಗಳನ್ನು ಸಾಕಾರಗೊಳಿಸುವ ಜವಾಬ್ದಾರಿ ಪ್ರತಿಯೊಬ್ಬ ಪದವೀಧರ ವಿದ್ಯಾರ್ಥಿಯ ಮೇಲೆಯೂ ಇದೆ. ಇದೇ ಸಂದರ್ಭದಲ್ಲಿ ಎಸ್‌ಎಸ್‌ಐಎಂಎಸ್ ಸಂಸ್ಥೆಯ ಶೈಕ್ಷಣಿಕ ಪಯಣ, ಅದರ ಬೆಳವಣಿಗೆ ಹಾಗೂ ವಿದ್ಯಾರ್ಥಿಗಳ ಅಭಿವೃದ್ಧಿಗಾಗಿ ಸಂಸ್ಥೆ ನೀಡುತ್ತಿರುವ ಗುಣಮಟ್ಟದ ಶಿಕ್ಷಣದ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿ, ಸಂಸ್ಥೆಯ ಸಾಧನೆ ಕಂಡು ತಮಗೆ ಅಪಾರ ಸಂತೋಷವಾಗಿದೆ ಎಂದು ಅವರು ಹೇಳಿದರು.

ಮುಖ್ಯ ಅತಿಥಿಯಾಗಿ ಆಗಮಿಸಿದ್ದ ಶ್ರೀ ಸಿದ್ಧಾರ್ಥ ಅಕಾಡೆಮಿ ಆಫ್ ಹೈಯರ್ ಎಜುಕೇಶನ್‌ನ ರಿಜಿಸ್ಟ್ರಾರ್ ಡಾ. ಅಶೋಕ್ ಮೆಹ್ತಾ ಮಾತನಾಡಿ, ವಿದ್ಯಾರ್ಥಿ ಜೀವನವು ಪ್ರತಿಯೊಬ್ಬರ ಬದುಕಿನ ಅತ್ಯಂತ ಸುವರ್ಣಯುಗವಾಗಿದ್ದು, ಇದೇ ಅವಧಿಯಲ್ಲಿ ವ್ಯಕ್ತಿತ್ವ, ಜ್ಞಾನ ಮತ್ತು ಮೌಲ್ಯಗಳು ರೂಪುಗೊಳ್ಳುತ್ತವೆ. ಸಾಮಾನ್ಯ ವ್ಯಕ್ತಿಯೊಬ್ಬರನ್ನು ಸಮಾಜದಲ್ಲಿ ಸಾಧನೆಯ ಮೂಲಕ ದಿಗ್ಗಜ ವ್ಯಕ್ತಿಯನ್ನಾಗಿ ರೂಪಿಸುವ ಶಕ್ತಿಯ ಹಿಂದೆ ಪೋಷಕರ ಮಹತ್ವದ ಪಾತ್ರವಿದೆ ಎಂದರು.

ವಿದ್ಯಾರ್ಥಿಗಳ ಪ್ರತಿಯೊಂದು ಯಶಸ್ಸಿನ ಬೆನ್ನೆಲುಬಾಗಿ ನಿಲ್ಲುವವರು ಪೋಷಕರು. ಪದವಿ ಪಡೆದ ವಿದ್ಯಾರ್ಥಿಗಳು ತಮ್ಮ ಮುಂದಿನ ವೃತ್ತಿಜೀವನದಲ್ಲಿ ಶಿಸ್ತು, ನೈತಿಕತೆ ಹಾಗೂ ನಿರಂತರ ಕಲಿಕೆಯ ಮನೋಭಾವವನ್ನು ಅಳವಡಿಸಿಕೊಂಡು ಸಮಾಜಕ್ಕೆ ಉತ್ತಮ ಕೊಡುಗೆ ನೀಡುವ ನಾಗರಿಕರಾಗಿ ಬೆಳೆಯಬೇಕು ಎಂದು ಅವರು ವಿದ್ಯಾರ್ಥಿಗಳಿಗೆ ಶುಭ ಹಾರೈಸಿದರು.

ಈ ಸಂದರ್ಭದಲ್ಲಿ ಎಸ್‌ಎಸ್‌ಐಎಂಎಸ್‌ನ ಪ್ರಾಂಶುಪಾಲರಾದ ಡಾ. ಬಿ. ಅಜ್ಮತುಲ್ಲಾ ಅವರು ಪದವೀಧರ ವಿದ್ಯಾರ್ಥಿಗಳಿಗೆ ಶುಭ ಹಾರೈಸಿ, ಎಸ್‌ಎಸ್‌ಐಎಂಎಸ್‌ನ ಶೈಕ್ಷಣಿಕ ಚಟುವಟಿಕೆಗಳು ಮತ್ತು ವಿದ್ಯಾರ್ಥಿಗಳ ಸಮಗ್ರ ಅಭಿವೃದ್ಧಿಗೆ ಸಂಸ್ಥೆ ನೀಡುತ್ತಿರುವ ಪ್ರಾಮುಖ್ಯತೆಯನ್ನು ವಿವರಿಸಿದರು. ವಿದ್ಯಾರ್ಥಿಗಳ ಯಶಸ್ಸಿನಲ್ಲಿ ಬೋಧಕವರ್ಗದ ನಿರಂತರ ಮಾರ್ಗದರ್ಶನ ಮತ್ತು ಪ್ರೋತ್ಸಾಹವೂ ಪ್ರಮುಖ ಪಾತ್ರ ವಹಿಸಿದೆ ಎಂದು ಅವರು ತಿಳಿಸಿದರು. ಕಾರ್ಯಕ್ರಮ ಸಂಯೋಜಕರಾದ ಡಾ. ಪವಿತ್ರಾ ಎನ್. ಅವರು ಕಾರ್ಯಕ್ರಮದ ಯಶಸ್ವಿ ಆಯೋಜನೆಗೆ ಪ್ರಮುಖ ಪಾತ್ರ ವಹಿಸಿದರು. ಎಸ್‌ಎಸ್‌ಐಎಂಎಸ್‌ನ ಬೋಧಕವರ್ಗವು ವಿದ್ಯಾರ್ಥಿಗಳ ಶೈಕ್ಷಣಿಕ ಹಾಗೂ ವೃತ್ತಿಪರ ಬೆಳವಣಿಗೆಗೆ ನೀಡಿದ ಮಾರ್ಗದರ್ಶನವನ್ನು ಈ ಸಂದರ್ಭದಲ್ಲಿ ಸ್ಮರಿಸಲಾಯಿತು. ಸಮಾರಂಭದಲ್ಲಿ 28ನೇ ಬ್ಯಾಚ್‌ನ ಎಂಬಿಎ ವಿದ್ಯಾರ್ಥಿಗಳಿಗೆ ಪದವಿ ಪ್ರದಾನ ಮಾಡಲಾಯಿತು. ವಿದ್ಯಾರ್ಥಿಗಳ ಶೈಕ್ಷಣಿಕ ಸಾಧನೆ, ಪರಿಶ್ರಮ ಮತ್ತು ಯಶಸ್ವಿ ಪಯಣವನ್ನು ಸಂಭ್ರಮಿಸುವ ಉದ್ದೇಶದಿಂದ ಆಯೋಜಿಸಲಾದ ಈ ಸಮಾರಂಭದಲ್ಲಿ ವಿದ್ಯಾರ್ಥಿಗಳು, ಪೋಷಕರು, ಗಣ್ಯರು ಹಾಗೂ ಸಂಸ್ಥೆಯ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳು ಉಪಸ್ಥಿತರಿದ್ದರು.



# ಬುಕ್ಕಾಪಟ್ಟಣದ ಉದ್ಭವ ಗಣಪತಿ ದೇವಸ್ಥಾನದಲ್ಲಿ ಕೇತು ಸ್ತಂಭ ಹಾಗೂ 21 ಗಣಪತಿ ವಿಗ್ರಹಗಳ ಪ್ರತಿಷ್ಠಾಪನೆ



**ಶಿರಾ:** ತಾಲೂಕು ಬುಕ್ಕಾಪಟ್ಟಣದ ಉದ್ಭವ ಗಣಪತಿ ದೇವಸ್ಥಾನದಲ್ಲಿ ಕೇತು ಸ್ತಂಭ ಸ್ಥಾಪನೆ ಹಾಗೂ ದೇವಾಲಯದ ಪ್ರಾಂಗಣದಲ್ಲಿ, ದೇವರ ಗೋಪುರದಲ್ಲಿ ವಿವಿಧ ಭಂಗಿಯ ವಿಶೇಷ 21 ಗಣಪತಿ ವಿಗ್ರಹಗಳನ್ನು ಪ್ರತಿಷ್ಠಾಪನೆ ಮಾಡುವ ಕಾರ್ಯ ಭಾನುವಾರ ನೆರವೇರಿತು.

ಸೆಪ್ಟೆಂಬರ್ 4, 5 6ನೇ ದಿನಾಂಕದಂದು ವಿಶೇಷವಾಗಿ ಹಾಗೂ ವಿಜೃಂಭಣೆಯಿಂದ ಉದ್ಭವ ಗಣಪತಿ ದೇವಸ್ಥಾನದ ನೂತನ ದೇವಾಲಯ ಉದ್ಘಾಟನೆ ಹಾಗೂ ಕಳಶ ಪ್ರತಿಷ್ಠಾಪನೆ ಸೇರಿದಂತೆ ಹಲವು ವಿವಿಧ ಧಾರ್ಮಿಕ ಕಾರ್ಯಕ್ರಮಗಳು ಹಮ್ಮಿಕೊಂಡಿರುವ ಹಿನ್ನೆಲೆಯಲ್ಲಿ ನೂತನವಾಗಿ ನಿರ್ಮಾಣಗೊಂಡಿರುವ ದೇವಸ್ಥಾನದ ಪ್ರಾಂಗಣ ಹಾಗೂ ಗೋಪುರದಲ್ಲಿ ವಿಶೇಷ ಭಂಗಿಯ 21 ವಿವಿಧ ಗಣಪತಿ ವಿಗ್ರಹಗಳನ್ನು ಶಾಸ್ತ್ರೋಕ್ತವಾಗಿ ಪ್ರತಿಷ್ಠಾಪನೆ ಮಾಡಲಾಯಿತು. ದೇವಸ್ಥಾನ ಅಭಿವೃದ್ಧಿ ಸಮಿತಿ ಅಧ್ಯಕ್ಷ ಶಾಂತಕುಮಾರ್. ಮುಖಂಡರಾದ ಬಿ ಆರ್ ಎಂ ಸತ್ಯನಾರಾಯಣ, ಎನ್ ಆರ್ ಬಸವರಾಜು, ಬಿಎಮ್ ಕಾಂತರಾಜು, ವೆಂಕಟೇಶ್, ದೊಡ್ಡ ಸಿದ್ದಪ್ಪ, ಸೇರಿದಂತೆ ಭಕ್ತಾದಿಗಳು ಗ್ರಾಮಸ್ಥರು ಕಾರ್ಯಕ್ರಮದಲ್ಲಿ ಹಾಜರಿದ್ದರು.

# ವೆಂಕಟಾಪುರ ಆಂಜನೇಯ ದೇವಸ್ಥಾನ ಅಭಿವೃದ್ಧಿಗೆ ಅನುದಾನಕ್ಕೆ ಗ್ರಾಮಸ್ಥರ ಮನವಿ



**ಪಾವಗಡ:** ಪಾವಗಡ ತಾಲೂಕಿನ ವೆಂಕಟಾಪುರ ಗ್ರಾಮದ ಶ್ರೀ ಆಂಜನೇಯಸ್ವಾಮಿ ದೇವಸ್ಥಾನ ಅಭಿವೃದ್ಧಿ ಸಮಿತಿ ಅಧ್ಯಕ್ಷರು ಹಾಗೂ ಪದಾಧಿಕಾರಿಗಳು ಭಾನುವಾರ ಪಟ್ಟಣದ ಪ್ರವಾಸಿ ಮಂದಿರದಲ್ಲಿ ಶಾಸಕ ಹೆಚ್.ವಿ.ವೆಂಕಟೇಶ್ ಅವರನ್ನು ಭೇಟಿ ಮಾಡಿ ದೇವಸ್ಥಾನ ಅಭಿವೃದ್ಧಿಗೆ ಅನುದಾನ ನೀಡುವಂತೆ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಸಮಿತಿ ಅಧ್ಯಕ್ಷೆ ಕಳಾವತಿ, ಮುಖಂಡರಾದ ಹರಿಬಾಬು, ಗೋವಿಂದಪ್ಪ, ಆನಂದಪ್ಪ, ಲಕ್ಷ್ಮೀನಾರಾಯಣಪ್ಪ, ರಂಜಿತ್ ಕುಮಾರ್, ಸರ್ವೇಶಪ್ಪ ಸೇರಿದಂತೆ ಹಲವರು ಇದ್ದರು.

# ಪಾವಗಡದಲ್ಲಿ ಈದ್–ಮಿಲಾದ್ ಹಿನ್ನೆಲೆ ಶಾಂತಿ ಸಭೆ




**ಪಾವಗಡ:** ಪಾವಗಡ ಪೊಲೀಸ್ ಠಾಣೆ ವತಿಯಿಂದ ಮುಂಬರುವ ಈದ್–ಮಿಲಾದ್ ಹಬ್ಬದ ಹಿನ್ನೆಲೆಯಲ್ಲಿ ಪೊಲೀಸ್ ಇನ್ಸ್‌ಪೆಕ್ಟರ್ ಸುರೇಶ್ ನೇತೃತ್ವದಲ್ಲಿ ಮುಸ್ಲಿಂ ಧಾರ್ಮಿಕ ಮುಖಂಡರೊಂದಿಗೆ ಶಾಂತಿ ಸಭೆ ನಡೆಸಲಾಯಿತು.

ಸರ್ಕಾರದ ಮಾರ್ಗಸೂಚಿ ಅನ್ವಯ ಹಬ್ಬ ಆಚರಿಸುವಂತೆ ಸೂಕ್ತ ಸಲಹೆ ಸೂಚನೆಗಳನ್ನು ನೀಡಲಾಯಿತು. ಈ ಸಂದರ್ಭದಲ್ಲಿ ಮುಸ್ಲಿಂ ಸಮುದಾಯದ ಮುಖಂಡರು, ಪೊಲೀಸ್ ಅಧಿಕಾರಿಗಳು ಹಾಗೂ ಸಿಬ್ಬಂದಿ ಹಾಜರಿದ್ದರು.

# ಹಸಿರು ಪರಿಸರ ನಿರ್ಮಾಣಕ್ಕೆ ಜನರ ಸಹಭಾಗಿತ್ವ ಅಗತ್ಯ: ಪ್ರವೀಣ್ ಕುಮಾರ್



**ಮಧುಗಿರಿ:** ಗ್ರಾಮಗಳ ಸಮಗ್ರ ಅಭಿವೃದ್ಧಿಯ ಜೊತೆಗೆ ಪರಿಸರ ಸಂರಕ್ಷಣೆಗೆ ಹೆಚ್ಚಿನ ಆದ್ಯತೆ ನೀಡಲಾಗುತ್ತಿದೆ. ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯಿಂದ ಆರೋಗ್ಯ, ಶಿಕ್ಷಣ, ಮಹಿಳಾ ಸಬಲೀಕರಣ, ನಿರ್ಗತಿಕರಿಗೆ ನೆರವು, ವಿದ್ಯಾರ್ಥಿಗಳಿಗೆ ಶಿಷ್ಯವೇತನ ಹಾಗೂ ಸಾಲ ಸೌಲಭ್ಯ ಸೇರಿದಂತೆ ಹಲವು ಸಮಾಜಮುಖಿ ಕಾರ್ಯಕ್ರಮಗಳನ್ನು ನಡೆಸಲಾಗುತ್ತಿದೆ ಎಂದು ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮೀಣಾಭಿವೃದ್ಧಿ ತುಮಕೂರು–02 ಜಿಲ್ಲಾ ನಿರ್ದೇಶಕ ಪ್ರವೀಣ್ ಕುಮಾರ್ ತಿಳಿಸಿದರು.

ತಾಲೂಕಿನ ಪುರವರ ಹೋಬಳಿಯ ಬಾಲ್ಯ ವಲಯದ ಸರ್ಕಾರಿ ಪ್ರಾಥಮಿಕ ಆರೋಗ್ಯ ಕೇಂದ್ರದ ಆವರಣದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ವತಿಯಿಂದ ಹಮ್ಮಿಕೊಂಡಿದ್ದ ಸಾಮಾಜಿಕ ಅರಣ್ಯೀಕರಣ ಕಾರ್ಯಕ್ರಮವನ್ನು ಸಸಿಗಳಿಗೆ ನೀರುಣಿಸುವ ಮೂಲಕ ಉದ್ಘಾಟಿಸಿ

ಮಾತನಾಡಿದ ಅವರು ಕೋವಿಡ್ ಸಂದರ್ಭದಲ್ಲಿ ಆಮ್ಲಜನಕದ ಮಹತ್ವವನ್ನು ಎಲ್ಲರೂ ಅರಿತಿದ್ದೇವೆ. ಮುಂದಿನ ದಿನಗಳಲ್ಲಿ ಆಮ್ಲಜನಕದ ಕೊರತೆ ಎದುರಾಗದಂತೆ ಪ್ರತಿಯೊಬ್ಬರೂ ಗಿಡಮರಗಳನ್ನು ನೆಟ್ಟು ಬೆಳೆಸಿ ಸಂರಕ್ಷಿಸಬೇಕು. ಸಾರ್ವಜನಿಕ ಸ್ಥಳಗಳಲ್ಲಿ ಗಿಡಗಳನ್ನು ನೆಡುವುದರ ಜೊತೆಗೆ ರೈತರ ಜಮೀನುಗಳಲ್ಲಿ ಗಿಡಗಳನ್ನು ಬೆಳೆಸಲು ಪ್ರೋತ್ಸಾಹ ನೀಡಲಾಗುತ್ತಿದೆ. ಇಂದು ನೆಡುವ ಗಿಡಗಳು ಮುಂದಿನ ಪೀಳಿಗೆಗೆ ದೊಡ್ಡ ಆಸ್ತಿಯಾಗಲಿವೆ ಎಂದು ಹೇಳಿದರು.

ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯು ಗ್ರಾಮೀಣ ಪ್ರದೇಶಗಳಲ್ಲಿ ಸೇವಾ ಧರ್ಮ ಕಾರ್ಯಕ್ರಮಗಳನ್ನು ವಿಸ್ತರಿಸುವುದರ ಜೊತೆಗೆ ಸಂಘಗಳ ಸದಸ್ಯರಿಗೆ ವಿವಿಧ ಬ್ಯಾಂಕುಗಳ ಮೂಲಕ ಸಾಲ ಸೌಲಭ್ಯ ಒದಗಿಸುತ್ತಿದೆ. ಆರೋಗ್ಯ ತಪಾಸಣಾ ಶಿಬಿರ, ಆರೋಗ್ಯ ಮಾಹಿತಿ ಕಾರ್ಯಕ್ರಮ, ಮಹಿಳೆಯರಿಗಾಗಿ ಸ್ವಾವಲಂಬನಾ ಹಾಗೂ ಕೌಶಲ ತರಬೇತಿ, ನಿರ್ಗತಿಕರಿಗೆ ಮನೆ ನಿರ್ಮಾಣ, ವಿದ್ಯಾರ್ಥಿಗಳಿಗೆ ಸುಜ್ಞಾನನಿಧಿ ಶಿಷ್ಯವೇತನ ಸೇರಿದಂತೆ ಹಲವು ಕಾರ್ಯಕ್ರಮಗಳನ್ನು ನಡೆಸಲಾಗುತ್ತಿದೆ ಎಂದರು.

ಕುಡಿಯುವ ನೀರಿನ ಸಮಸ್ಯೆ ನಿವಾರಣೆಗೆ ವಾಟರ್ ಪ್ಯೂರಿಫೈಯರ್ ಘಟಕಗಳನ್ನು ಸ್ಥಾಪಿಸಲಾಗುತ್ತಿದೆ. ಶಾಲೆಗಳು, ದೇವಸ್ಥಾನಗಳು ಹಾಗೂ ಸಮುದಾಯದ ಅಭಿವೃದ್ಧಿ ಕಾರ್ಯಗಳಿಗೆ ನೆರವು ನೀಡಲಾಗುತ್ತಿದೆ. ಪರಿಸರ ಸಂರಕ್ಷಣೆಯ ದೃಷ್ಟಿಯಿಂದ ಕೆರೆಗಳ ಅಭಿವೃದ್ಧಿ ಹಾಗೂ ಪುನಶ್ಚೇತನಕ್ಕೂ ಆದ್ಯತೆ ನೀಡಲಾಗುತ್ತಿದೆ ಎಂದು ತಿಳಿಸಿದರು.

ಸಾರ್ವಜನಿಕ ಸ್ಥಳಗಳಲ್ಲಿ ಗಿಡಗಳನ್ನು ನೆಟ್ಟ ಬಳಿಕ ಅವುಗಳ ಸಂರಕ್ಷಣೆಯ ಜವಾಬ್ದಾರಿಯನ್ನೂ ವಹಿಸಬೇಕು. ಆಸ್ಪತ್ರೆ, ಶಾಲೆ, ದೇವಸ್ಥಾನ ಸೇರಿದಂತೆ ವಿವಿಧೆಡೆ ನೆಟ್ಟ ಸಸಿಗಳಿಗೆ ನೀರುಣಿಸುವ ಹಾಗೂ ರಕ್ಷಿಸುವ ವ್ಯವಸ್ಥೆ ಮಾಡಬೇಕು. ಅರಣ್ಯ ಇಲಾಖೆ ಸೇರಿದಂತೆ ಸಂಬಂಧಪಟ್ಟ ಇಲಾಖೆಗಳ ಸಹಕಾರ ಪಡೆಯಬೇಕು. ರೈತರ ಜಮೀನುಗಳಲ್ಲಿ ಒಂದೆರಡು ಗಿಡಗಳನ್ನು ವಿತರಿಸಿ ಬೆಳೆಸಲು ಪ್ರೋತ್ಸಾಹಿಸಿದರೆ, ರೈತರು ಅವುಗಳನ್ನು ಹೆಚ್ಚಿನ ಶ್ರದ್ಧೆಯಿಂದ ಸಂರಕ್ಷಿಸುತ್ತಾರೆ ಎಂದು ಹೇಳಿದರು.

ಜಿಲ್ಲಾ ಜನಜಾಗೃತಿ ವೇದಿಕೆಯ ಸದಸ್ಯ ಲಿಂಗಾರೆಡ್ಡಿ ಮಾತನಾಡಿ, ಪರಿಸರ ಸಂರಕ್ಷಣೆ ಕುರಿತು ಜನರಲ್ಲಿ ನಿರಂತರವಾಗಿ ಜಾಗೃತಿ ಮೂಡಿಸುವ ಅಗತ್ಯವಿದೆ. ಸಾರ್ವಜನಿಕ ಸ್ಥಳಗಳ ಜೊತೆಗೆ ರೈತರ ಜಮೀನುಗಳಲ್ಲೂ ಗಿಡಗಳನ್ನು ನೆಟ್ಟು ಬೆಳೆಸಲು ಹೆಚ್ಚಿನ ಆದ್ಯತೆ ನೀಡಬೇಕು. ರೈತರಿಗೆ ಗಿಡಗಳನ್ನು ವಿತರಿಸಿ ಅವುಗಳ ಸಂರಕ್ಷಣೆಗೆ ಪ್ರೋತ್ಸಾಹ ನೀಡಿದರೆ ಪರಿಸರ ಸಂರಕ್ಷಣೆಯ ಕಾರ್ಯ ಮತ್ತಷ್ಟು ಪರಿಣಾಮಕಾರಿಯಾಗಲಿದೆ ಎಂದರು.

ವೈದ್ಯೆ ಡಾ. ರಂಗಲಕ್ಷ್ಮಿ ಮಾತನಾಡಿ, ಕಾರ್ಯಕ್ರಮವನ್ನು ಇಷ್ಟು ತ್ವರಿತವಾಗಿ ಅನುಷ್ಠಾನಗೊಳಿಸಿರುವುದು ಸಂತೋಷ ಹಾಗೂ ಹೆಮ್ಮೆಯ ವಿಷಯವಾಗಿದೆ. ಸಾಮಾನ್ಯವಾಗಿ ಸರ್ಕಾರಿ ಕೆಲಸಗಳು ವಿಳಂಬವಾಗುತ್ತವೆ. ಆದರೆ ಇಲ್ಲಿ ಹೇಳಿದ ಮೂರೇ ದಿನಗಳಲ್ಲಿ ಕೆಲಸ ಪೂರ್ಣಗೊಂಡು ಕಾರ್ಯಕ್ರಮ ನಡೆಸುತ್ತಿರುವುದು ಸಂತಸ ತಂದಿದೆ ಎಂದರು.

ನಮ್ಮ ಅನುಕೂಲಕ್ಕಾಗಿ ಹಾಗೂ ರಸ್ತೆ, ಇನ್ನಿತರೆ ಕಾಮಗಾರಿಗಳಿಗೆ ಮರಗಳನ್ನು ಕಡಿಯಬೇಕಾಗುತ್ತದೆ. ಆದರೆ ಮುಂದೊಂದು ದಿನ ಆಮ್ಲಜನಕದ ಕೊರತೆ ಎದುರಾಗದಂತೆ ಈಗಿನಿಂದಲೇ ಗಿಡಗಳನ್ನು ಬೆಳೆಸಬೇಕು. ಪ್ರತಿಯೊಬ್ಬರೂ ಗಿಡಗಳನ್ನು ನೆಟ್ಟು, ನೀರುಣಿಸಿ, ಬೆಳೆಸಿ ಸಂರಕ್ಷಿಸುವುದನ್ನು ಜೀವನದ ಭಾಗವನ್ನಾಗಿ ಮಾಡಿಕೊಳ್ಳಬೇಕು ಎಂದು ಕರೆ ನೀಡಿದರು.

ಒಕ್ಕೂಟ ಅಧ್ಯಕ್ಷ ಶಿವಕುಮಾರ್ ಬಿ ಮಾತನಾಡಿ, ಶ್ರೀ ಕ್ಷೇತ್ರ ಧರ್ಮಸ್ಥಳದ ಸೇವಾ ಪರಂಪರೆಯಲ್ಲಿ ಔಷಧದಾನ, ವಿದ್ಯಾದಾನ ಹಾಗೂ ಅಭಯದಾನಕ್ಕೆ ವಿಶೇಷ ಮಹತ್ವವಿದೆ. ಆರೋಗ್ಯ ಸೇವೆ, ಶಿಕ್ಷಣ ಹಾಗೂ ವಿವಿಧ ನೆರವುಗಳ ಮೂಲಕ ಸಮಾಜದ ಸರ್ವತೋಮುಖ ಅಭಿವೃದ್ಧಿಗೆ ಯೋಜನೆ ಶ್ರಮಿಸುತ್ತಿದೆ ಎಂದರು.

ಕಡಿಮೆ ವಿದ್ಯಾಭ್ಯಾಸ ಹೊಂದಿರುವವರಿಗೆ ಕೌಶಲ್ಯ ತರಬೇತಿ ನೀಡಿ ಪ್ರಮಾಣಪತ್ರ ಒದಗಿಸುವ ಮೂಲಕ ಸ್ವಾವಲಂಬಿಗಳಾಗಲು ನೆರವು ನೀಡಲಾಗುತ್ತಿದೆ. ನಿರ್ಗತಿಕರಿಗೆ ಪಿಂಚಣಿ, ವಸತಿ ಸೇರಿದಂತೆ ಅಗತ್ಯ ನೆರವು ಕಲ್ಪಿಸಲಾಗುತ್ತಿದೆ. ಆರ್ಥಿಕ ನೆರವು ಅಗತ್ಯವಿರುವವರಿಗೆ ಬ್ಯಾಂಕುಗಳ ಮೂಲಕ ಸಾಲ ಸೌಲಭ್ಯ ದೊರಕಿಸಿಕೊಡಲಾಗುತ್ತಿದೆ ಎಂದು ತಿಳಿಸಿದರು. ರೈತರಿಗೆ ಒಂದೆರಡು ಗಿಡಗಳನ್ನು ವಿತರಿಸಿ, ಅವುಗಳನ್ನು ತಮ್ಮ ಜಮೀನಿನಲ್ಲಿ ಬೆಳೆಸುವಂತೆ ಪ್ರೋತ್ಸಾಹಿಸಬೇಕು. ಹಿಂದೆ ವಿತರಿಸಲಾದ ಮಾವು, ನೇರಳೆ ಸೇರಿದಂತೆ ಹಲವು ಗಿಡಗಳು ಇಂದು ಗ್ರಾಮೀಣ ಭಾಗದಲ್ಲಿ ಉತ್ತಮವಾಗಿ ಬೆಳೆದು ಜನರಿಗೆ ಅನುಕೂಲವಾಗಿವೆ. ಇಂದು ನೆಡುವ ಗಿಡಗಳು ಮುಂದಿನ ಪೀಳಿಗೆಗೆ ದೊಡ್ಡ ಆಸ್ತಿಯಾಗಲಿವೆ ಎಂದು ಹೇಳಿದರು.

ಈ ವೇಳೆಯಲ್ಲಿ ತಾಲೂಕು ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನಾಧಿಕಾರಿ ಸಂತೋಷ್ ಕುಮಾರ್ ಜೈನ್, ಕೃಷಿ ಮೇಲ್ವಿಚಾರಕ ಕುಮಾರ್ ಟಿ.ಆರ್, ವಲಯ ಮೇಲ್ವಿಚಾರಕ ಮುದ್ದಣ್ಣ, ಗ್ರಾಮದ ಪ್ರಮುಖರಾದ ಎಂ.ಡಿ. ವರ್ಧಮಾನಯ್ಯ, ನಿವೃತ್ತ ಸೈನಿಕ ಭೀಮಯ್ಯ, ಕೊಂಡವಾಡಿ ಒಕ್ಕೂಟದ ಅಧ್ಯಕ್ಷ ಶಿವರಾಮಣ್ಣ, ಜನ ಜಿಲ್ಲಾ ಜಾಗೃತಿ ವೇದಿಕೆ ಸದಸ್ಯ ಎಚ್. ಎಸ್. ಶಿವಕುಮಾರ್, ವಲಯ ಸೇವಾ ಪ್ರತಿನಿಧಿಗಳಾದ ಅನಿತಾ, ರಂಗಲಿಂಗೇಶ್ವರ, ಆಸ್ಪತ್ರೆಯ ಸಿಬ್ಬಂದಿಗಳು ಸೇರಿದಂತೆ ಮತ್ತಿತರರು ಇದ್ದರು.

# ಉಪನ್ಯಾಸಕರ ಅಮಾನತ್ತಿಗೆ ಒತ್ತಾಯಿಸಿ ಎಬಿವಿಪಿ ಪ್ರತಿಭಟನೆ




**ತುರುವೇಕೆರೆ:** ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಆಂಗ್ಲಭಾಷಾ ಉಪನ್ಯಾಸಕ ಚಂದ್ರಶೇಖರ್ ಅವರು ಕಾಲೇಜಿನ ವಿದ್ಯಾರ್ಥಿನಿಯರೊಂದಿಗೆ ಅನುಚಿತವಾಗಿ ವರ್ತಿಸುತ್ತಿದ್ದಾರೆಂದು ಆರೋಪಿಸಿ ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ ಕಾಲೇಜಿನ ಎದುರು ಪ್ರತಿಭಟನೆ ನಡೆಸಿತು. ಅಲ್ಲದೆ ಉಪನ್ಯಾಸಕರನ್ನು ಅಮಾನತ್ತುಗೊಳಿಸಬೇಕೆಂದು ಒತ್ತಾಯಿಸಿತು.

ಈ ಕುರಿತಂತೆ ಎಬಿವಿಪಿ ರಾಜ್ಯ ಸಹಕಾರ್ಯದರ್ಶಿ ಗಣೇಶ್ ಮಾತನಾಡಿ, ಕಾಲೇಜಿನ ಆಂಗ್ಲಭಾಷಾ ಉಪನ್ಯಾಸಕರ ನಡವಳಿಕೆ ಹಾಗೂ ಅವರಿಂದಾಗುತ್ತಿರುವ ಮಾನಸಿಕ ತೊಂದರೆಯ ಬಗ್ಗೆ ವಿದ್ಯಾರ್ಥಿನಿಯರು ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ ಗೆ ಮೌಖಿಕ ಹಾಗೂ ಲಿಖಿತವಾಗಿ ತಿಳಿಸಿದ್ದಾರೆ. ಈ ಬಗ್ಗೆ ಎಬಿವಿಪಿ ಕಾಲೇಜಿನ ಪ್ರಾಂಶುಪಾಲರು ಹಾಗೂ ಜಿಲ್ಲಾ ಉಪನಿರ್ದೇಶಕರ ಗಮನಕ್ಕೂ ತಂದಿದ್ದೇವೆ. ಗುರು ಸ್ಥಾನ ಬಹಳ ದೊಡ್ಡದು. ಅಂತಹ ಸ್ಥಾನದಲ್ಲಿದ್ದುಕೊಂಡು ವಿದ್ಯಾರ್ಥಿನಿಯರೊಂದಿಗೆ ಅಸಭ್ಯ ವರ್ತನೆ ಮಾಡುವ ಇಂತಹ ಉಪನ್ಯಾಸಕರ ಅವಶ್ಯಕತೆ ಕಾಲೇಜಿಗೆ ಇರುವುದಿಲ್ಲ. ಕೂಡಲೇ ಉಪನ್ಯಾಸಕ ಚಂದ್ರಶೇಖರ್ ಅವರನ್ನು ಅಮಾನತ್ತುಗೊಳಿಸಬೇಕು ಹಾಗೂ ನಾಳೆಯಿಂದ ಈ ಕಾಲೇಜಿಗೆ ಅವರು ಕರ್ತವ್ಯಕ್ಕೆ ಬರದಂತೆ ಅಧಿಕಾರಿಗಳು ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಿದರು.

ಎಬಿವಪಿ ರಾಜ್ಯ ಕಾರ್ಯಕಾರಿಣಿ ಸದಸ್ಯ ಪ್ರಜ್ವಲ್ ಮಾತನಾಡಿ, ಆಂಗ್ಲ ಉಪನ್ಯಾಸಕರು ವಿದ್ಯಾರ್ಥಿನಿಯರೊಂದಿಗೆ ಅನುಚಿತವಾಗಿ ವರ್ತಿಸುವುದು, ಎರಡು ಅರ್ಥ ಬರುವ ರೀತಿಯಲ್ಲಿ ಮಾತನಾಡುವುದು, ಪಾಠದ ಸಮಯದಲ್ಲಿ ಸ್ಪರ್ಶಿಸಿ ಮಾತನಾಡುವುದು, ಪಾಠದ ಹೊರತಾದ ವಿಷಯ ಮಾತನಾಡುವುದು,

ಕಾಲೇಜಿನ ಸಮಯದ ನಂತರವೂ ವಿದ್ಯಾರ್ಥಿನಿಯರ ಮೊಬೈಲ್ ಗೆ ಸಾಮಾಜಿಕ ಜಾಲತಾಣದ ಮೂಲಕ ಸಂದೇಶ ರವಾನಿಸುವುದು ಸೇರಿದಂತೆ ಹಲವು ರೀತಿಯಲ್ಲಿ ಮಾನಸಿಕವಾಗಿ ತೊಂದರೆ ಕೊಡುತ್ತಿದ್ದಾರೆಂದು ಆರೋಪಿಸಿದ ಅವರು, ಈ ಹಿನ್ನೆಲೆಯಲ್ಲಿ ಎಬಿವಿಪಿ ವಿದ್ಯಾರ್ಥಿನಿಯರ ಪರವಾಗಿ ನಿಂತು ಉಪನ್ಯಾಸಕರ ಅಮಾನತ್ತಿಗೆ ಒತ್ತಾಯಿಸುತ್ತಿದೆ ಎಂದರು.

ಬೆಳಿಗ್ಗೆ 11.30 ಕ್ಕೆ ಪ್ರಾರಂಭವಾದ ಪ್ರತಿಭಟನೆ ಮಧ್ಯಾಹ್ನ 3 ಗಂಟೆಯಾದರೂ ನಿಲ್ಲಲಿಲ್ಲ. ಕೊನೆಗೆ ಜೋರಾಗಿ ಮಳೆ ಸುರಿಯಿತು. ಮಳೆಯಲ್ಲೂ ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ ನ ಕಾರ್ಯಕರ್ತರು ಕಾಲೇಜಿನ ಎದುರು ಪ್ರತಿಭಟಿಸುತ್ತಲೇ ಇದ್ದರು. ಈ ಮಧ್ಯೆ ಎರಡು ಮೂರು ಬಾರಿ ಪೊಲೀಸರು, ಪ್ರಾಂಶುಪಾಲರು ಪ್ರತಿಭಟನೆ ಕೈಬಿಡುವಂತೆ ಮನವಿ ಮಾಡಿದರೂ ಪ್ರಯೋಜನವಾಗಲಿಲ್ಲ. ಮಳೆ ನಿಂತ ನಂತರ ಕಾಲೇಜಿನ ವಿದ್ಯಾರ್ಥಿನಿಯರೂ ಪ್ರತಿಭಟನಾ ನಿರತರ ಬಳಿ ತೆರಳಿ ನಾಳೆಯಿಂದ ಆಂಗ್ಲ ಉಪನ್ಯಾಸಕರು ಕಾಲೇಜಿಗೆ ಬರುವುದು ಬೇಡ ಎಂದು ಘೋಷಣೆ ಕೂಗಿ ತಮ್ಮ ನೋವನ್ನು ಹೊರಹಾಕಿದರು.

ಕಾಲೇಜಿನ ಪ್ರಾಂಶುಪಾಲ ಪಾಪರಾಜು ಪ್ರತಿಭಟನಾ ನಿರತರೊಂದಿಗೆ ಮಾತನಾಡಿ, ಎಬಿವಿಪಿ ನೀಡಿರುವ ಮನವಿಯನ್ನು ಸಂಬಂಧಿಸಿದ ಜಿಲ್ಲಾ ಉಪನಿರ್ದೇಶಕರಿಗೆ ದೂರವಾಣಿ ಮೂಲಕ ತಿಳಿಸಿದ್ದೇನೆ. ಉಪನಿರ್ದೇಶಕರು ಉಪನ್ಯಾಸಕರನ್ನು ತುಮಕೂರಿನ ಇಲಾಖಾ ಕಛೇರಿಗೆ ಕರೆ ತರುವಂತೆ ಸೂಚಿಸಿದ್ದಾರೆ. ಉಪನ್ಯಾಸಕರು ತಪ್ಪು ಮಾಡಿದ್ದರೆ ಅವರ ಮೇಲೆ ಕ್ರಮ ಕೈಗೊಳ್ಳುವುದಾಗಿ ತಿಳಿಸಿದ್ದಾರೆ ಎಂದರು. ಪ್ರಾಂಶುಪಾಲರು ಹಾಗೂ ಪೊಲೀಸ್ ಇಲಾಖೆಯ ಮನವಿ ಮೇರೆಗೆ ಎಬಿವಿಪಿ ಕಾರ್ಯಕರ್ತರು ಪ್ರತಿಭಟನೆ ಅಂತ್ಯಗೊಳಿಸಿದರು.

ಉಪನ್ಯಾಸಕರ ಅಮಾನತ್ತು ಆಗದಿದ್ದರೆ ಮುಂದಿನ ದಿನಗಳಲ್ಲಿ ಮತ್ತೆ ಹೋರಾಟ, ಪ್ರತಿಭಟನೆ ನಡೆಸಲಾಗುವುದೆಂದು ಎಚ್ಚರಿಸಿದರು. ಪ್ರಭಟನೆಯಲ್ಲಿ ಮನೋಜ್, ಭರತ್, ಗೌರಮ್, ದರ್ಶನ್, ಮಧು, ಚಂದ್ರಶೇಖರ್, ಧನಂಜಯ, ರೋಹನ್ ಮುಂತಾದವರಿದ್ದರು.

# ಬರ ಪರಿಸ್ಥಿತಿ ಚರ್ಚೆ ಬದಲು ರಾಜಕೀಯಕ್ಕೆ ವಿಪಕ್ಷಗಳ ಆದ್ಯತೆ, ರಾಜ್ಯದ ಜನತೆಗೆ ದ್ರೋಹ: ಸಿಎಂ ಅಸಮಾಧಾನ

**ಬೆಂಗಳೂರು:** ರಾಜ್ಯದ ಹಿತ ಕಾಪಾಡಲು ಆಡಳಿತ ಪಕ್ಷ ಮತ್ತು ವಿರೋಧ ಪಕ್ಷದ ಸದಸ್ಯರು ಒಗ್ಗಟ್ಟಾಗಿ ಕೆಲಸ ಮಾಡಬೇಕು. ರಾಜಕಾರಣಕ್ಕಿಂತ ಜನರ ಸಮಸ್ಯೆಗಳ ಚರ್ಚೆಗೆ ವಿಧಾನಮಂಡಲದ ಕಲಾಪವನ್ನು ಬಳಸಿಕೊಳ್ಳಬೇಕು ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ವಿರೋಧ ಪಕ್ಷದ ಸದಸ್ಯರಿಗೆ ಮನವಿ ಮಾಡಿದರು.

ವಿಧಾನ ಪರಿಷತ್ತಿನಲ್ಲಿ ಸೋಮವಾರ ಮಾತನಾಡಿದ ಅವರು, ಸರ್ಕಾರ ರಚನೆಯಾದ ಬಳಿಕ ನಡೆದ ಮೊದಲ ಅಧಿವೇಶನದಲ್ಲೇ ವಿಧಾನಸಭೆ ಮತ್ತು ವಿಧಾನ ಪರಿಷತ್ತಿನ ಎಲ್ಲ ಸದಸ್ಯರಿಗೆ ಮುಕ್ತ ಮನಸ್ಸಿನಿಂದ ಕೆಲಸ ಮಾಡುವಂತೆ ಮನವಿ ಮಾಡಿದ್ದೆ. ನನಗೆ ಯಾವುದೇ ಸಂಕೋಚ ಅಥವಾ ದ್ವೇಷವಿಲ್ಲ. ಎಲ್ಲರೂ ಒಟ್ಟಾಗಿ ರಾಜ್ಯದ ಹಿತಕ್ಕಾಗಿ ಕೆಲಸ ಮಾಡೋಣ ಎಂದು ಹೇಳಿದ್ದೆ. ಚುನಾವಣೆ ಬಂದಾಗ ಚುನಾವಣೆ ಮಾಡೋಣ, ಆದರೆ ಸದನದಲ್ಲಿ ರಾಜ್ಯದ ಸಮಸ್ಯೆಗಳ ಬಗ್ಗೆ ಚರ್ಚಿಸೋಣ ಎಂದು ಮುಖ್ಯಮಂತ್ರಿ ಹೇಳಿದರು. ರಾಜ್ಯದಲ್ಲಿ ಬರ ಪರಿಸ್ಥಿತಿ ಗಂಭೀರವಾಗಿದೆ. ಈ ಕುರಿತು ಉಪಮುಖ್ಯಮಂತ್ರಿ ಜಿ.ಪರಮೇಶ್ವರ ಅವರು ಸಮಗ್ರ ವರದಿ ನೀಡಿದ್ದಾರೆ. ಬೆಳಗಾವಿ, ಕಲಬುರಗಿ ಹಾಗೂ ಚಿತ್ರದುರ್ಗ ಸೇರಿದಂತೆ ವಿವಿಧ ಭಾಗಗಳಿಗೆ ಭೇಟಿ ನೀಡಿ ಪರಿಸ್ಥಿತಿಯನ್ನು ಪರಿಶೀಲಿಸಲಾಗಿದೆ. ಸಚಿವರಿಗೂ ರಾಜ್ಯದ ವಿವಿಧ ಜಿಲ್ಲೆಗಳಿಗೆ ತೆರಳಿ ವರದಿ ನೀಡುವಂತೆ ಸೂಚಿಸಲಾಗಿದ್ದು, ಅದರ ಆಧಾರದ ಮೇಲೆ ಸರ್ಕಾರ ಕ್ರಮ ಕೈಗೊಳ್ಳುತ್ತಿದೆ ಎಂದರು.

ಕುಡಿಯುವ ನೀರಿನ ಸಮಸ್ಯೆ ಎದುರಾಗದಂತೆ ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ ತಲಾ ರೂ. 1 ಕೋಟಿ ನೀಡಲಾಗಿದೆ. ಜಿಲ್ಲಾಧಿಕಾರಿಗಳಿಗೂ ಪ್ರತ್ಯೇಕವಾಗಿ ಅಗತ್ಯ ಹಣಕಾಸು ಒದಗಿಸಲಾಗಿದೆ. ಇಂತಹ ಗಂಭೀರ ಪರಿಸ್ಥಿತಿಯಲ್ಲಿ ಬರದ ಬಗ್ಗೆ ಚರ್ಚೆ ನಡೆಸುವ ಬದಲು ವಿರೋಧ ಪಕ್ಷ ರಾಜಕೀಯಕ್ಕೆ ಹೆಚ್ಚಿನ ಆದ್ಯತೆ ನೀಡುತ್ತಿರುವುದು ಸರಿಯಲ್ಲ ಎಂದು ಅವರು ಅಸಮಾಧಾನ ವ್ಯಕ್ತಪಡಿಸಿದರು.

ವಾಲ್ಮೀಕಿ ಅಭಿವೃದ್ಧಿ ನಿಗಮದ ಹಣ ಅಕ್ರಮ ವರ್ಗಾವಣೆ ಪ್ರಕರಣಕ್ಕೆ ಸಂಬಂಧಿಸಿದಂತೆ ಸಚಿವ ಬಿ.ನಾಗೇಂದ್ರ ಅವರ ರಾಜೀನಾಮೆ ಕೇಳುವುದರಲ್ಲಿ ತಪ್ಪಿಲ್ಲ. ಆದರೆ ಈ ಕುರಿತು ನೋಟಿಸ್ ನೀಡಿ, ಚರ್ಚೆ ನಡೆಸಬೇಕು. ತನಿಖೆ ನಡೆಸಲಾಗಿದ್ದು, ವರದಿಯೂ ಬಂದಿದೆ. ಹಣವನ್ನು ವಾಪಸ್ ಪಡೆಯುವ ಪ್ರಕ್ರಿಯೆಯೂ ನಡೆದಿದೆ. ಈ ಎಲ್ಲ ವಿವರಗಳನ್ನು ಸದನದಲ್ಲಿ ನೀಡಲು ಸರ್ಕಾರ ಸಿದ್ಧವಿದೆ ಎಂದು ಮುಖ್ಯಮಂತ್ರಿ ಹೇಳಿದರು. ಸಿಬಿಐ ಸೇರಿದಂತೆ ವಿವಿಧ ತನಿಖಾ ಸಂಸ್ಥೆಗಳು ತನಿಖೆ ನಡೆಸಿವೆ. ಇದುವರೆಗೆ ನಾಗೇಂದ್ರ ಅವರು ನೇರವಾಗಿ ತಪ್ಪಿತಸ್ಥರು ಎಂದು ತೋರಿಸುವ ದಾಖಲೆಗಳು ಬಂದಿಲ್ಲ. ಈ ಹಿನ್ನೆಲೆಯಲ್ಲಿ ಚರ್ಚೆ ನಡೆಸದೆ ಸದನದ ಕಲಾಪಕ್ಕೆ ಅಡ್ಡಿಪಡಿಸುವುದು ಸೂಕ್ತವಲ್ಲ ಎಂದರು. ಕೆಪಿಎಸ್ಸಿ ವಿಚಾರದಲ್ಲಿಯೂ ತನಿಖೆ ನಡೆಯುತ್ತಿದೆ. ಹಿಂದಿನ ಅವಧಿಯಲ್ಲಿ ನಡೆದ ನೇಮಕಾತಿ ಮತ್ತು ಅಕ್ರಮಗಳ ಕುರಿತು ಸಿಐಡಿ ತನಿಖೆ ನಡೆಸುತ್ತಿದೆ. ಜಾರಿ ನಿರ್ದೇಶನಾಲಯವೂ ತನಿಖೆಗೆ ಪ್ರವೇಶಿಸಿದೆ. ತಪ್ಪಿತಸ್ಥರು ಯಾರೇ ಆಗಿದ್ದರೂ ಕಾನೂನು ಪ್ರಕಾರ ಕ್ರಮ ಕೈಗೊಳ್ಳಲಾಗುವುದು. ಈ ಕುರಿತು ಸಂಪುಟದಿಂದಲೂ ಅಗತ್ಯ ಅನುಮೋದನೆ ನೀಡಲಾಗಿದೆ ಎಂದು ಮುಖ್ಯಮಂತ್ರಿ ತಿಳಿಸಿದರು. ದೇಶದ ಯುವಕರು ಮತ್ತು ವಿದ್ಯಾರ್ಥಿಗಳ ಭವಿಷ್ಯ ರಾಷ್ಟ್ರದ ಆಸ್ತಿ. ಅವರಿಗೆ ನ್ಯಾಯ ಒದಗಿಸುವಲ್ಲಿ ಕೇಂದ್ರದ ಬಿಜೆಪಿ ಸರ್ಕಾರ ವಿಫಲವಾಗಿದೆ ಎಂದು ಆರೋಪಿಸಿದ ಅವರು, ಯುವಕರ ಸಮಸ್ಯೆಗಳ ಬಗ್ಗೆ ವಿಧಾನಸಭೆಯಲ್ಲಿ ಗಂಭೀರ ಚರ್ಚೆ ನಡೆಯಬೇಕಿತ್ತು ಎಂದು ಹೇಳಿದರು. ಬೆಂಗಳೂರಿಗೆ ನೀರು ಒದಗಿಸುವುದು ಸವಾಲಿನ ಕೆಲಸ: ಯೌವನ, ಹಣ, ಅಧಿಕಾರ ಒಂದೇ ಕಡೆ ಸೇರಬಾರದು; ಡಿಕೆ ಶಿವಕುಮಾರ್ನಾವು ಹೊಸ ಯುಗಕ್ಕೆ ಕಾಲಿಟ್ಟಿದ್ದೇವೆ. ಇಂದಿನ ಯುವಕರು ವಿದ್ಯಾವಂತರು, ಬುದ್ಧಿವಂತರು ಹಾಗೂ ಪ್ರಜ್ಞಾವಂತರು. ಅವರ ಭವಿಷ್ಯದ ಬಗ್ಗೆ ಚಿಂತಿಸುವುದು ಸರ್ಕಾರಗಳ ಆದ್ಯತೆಯಾಗಬೇಕು. ಆದರೆ ಯುವಕರ ಭವಿಷ್ಯದ ಕುರಿತು ಚರ್ಚಿಸುವುದನ್ನು ಬಿಟ್ಟು ರಾಜಕೀಯಕ್ಕೆ ಹೆಚ್ಚಿನ ಮಹತ್ವ ನೀಡುತ್ತಿರುವುದು ಬೇಸರದ ಸಂಗತಿ? ಎಂದು ಅವರು ಹೇಳಿದರು.

ವಿಧಾನಸಭೆಯಲ್ಲಿ ಇಂತಹ ವಿಷಯಗಳ ಕುರಿತು ಅರ್ಥಪೂರ್ಣ ಚರ್ಚೆ ನಡೆಯಬೇಕು. ರಾಜಕೀಯ ಆರೋಪ?ಪ್ರತ್ಯಾರೋಪಗಳಿತ ಜನರ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳುವುದು ಮುಖ್ಯ ಎಂದು ಅವರು ತಿಳಿಸಿದರು.

ಕಾವೇರಿ ವಿಚಾರದಲ್ಲಿ ಸುಪ್ರೀಂ ಕೋರ್ಟ್ ಆದೇಶಗಳು ಹಾಗೂ ನಂತರದ ಬೆಳವಣಿಗೆಗಳ ಹಿನ್ನೆಲೆಯಲ್ಲಿ ರಾಜ್ಯದ ಹಿತ ಕಾಪಾಡಲು ಎಲ್ಲ ಪಕ್ಷಗಳ ಸಹಕಾರ ಅಗತ್ಯವಾಗಿದೆ. ಮಳೆ ಕೊರತೆ ಮತ್ತು ಬರದ ಪರಿಸ್ಥಿತಿಯಲ್ಲಿ ರೈತರ ಬದುಕು ಸಂಕಷ್ಟಕ್ಕೆ ಸಿಲುಕಿದ್ದು, ಅವರಿಗೆ ನೆರವು ನೀಡಲು ಸರ್ಕಾರ ಈಗಾಗಲೇ ಅಣೆಕಟ್ಟುಗಳಿಗೆ ತೆರಳಿ ಸಭೆ ನಡೆಸಿದೆ. ರೈತರನ್ನು ಉಳಿಸಲು ಯಾವ ಕ್ರಮ ಕೈಗೊಳ್ಳಬೇಕು ಎಂಬ ಬಗ್ಗೆ ವಿರೋಧ ಪಕ್ಷಗಳು ಸಲಹೆ ನೀಡಬೇಕು ಎಂದು ಅವರು ಮನವಿ ಮಾಡಿದರು. ಇತ್ತೀಚೆಗೆ ಚೆನ್ನೈನಲ್ಲಿ ಕೇಂದ್ರ ಗೃಹ ಸಚಿವರು ಕರೆದಿದ್ದ ಸಭೆಯಲ್ಲಿ ರಾಜ್ಯದ ಹಲವು ವಿಚಾರಗಳನ್ನು ಪ್ರಸ್ತಾಪಿಸಿದ್ದೇನೆ. ಮೇಕೆದಾಟು ಯೋಜನೆಗೆ ಸಂಬಂಧಿಸಿದಂತೆ, ಅದರ ನೀರನ್ನು ಬೆಂಗಳೂರು ಕುಡಿಯುವ ನೀರಿನ ಅಗತ್ಯ ಸೇರಿದಂತೆ ರಾಜ್ಯದ ಹಿತಕ್ಕಾಗಿ ಬಳಸಬೇಕೆಂಬ ನಿಲುವನ್ನು ತಮಿಳುನಾಡಿನಲ್ಲಿಯೇ ಸ್ಪಷ್ಟವಾಗಿ ಪ್ರತಿಪಾದಿಸಿದ್ದೇನೆ ಎಂದು ಹೇಳಿದರು.

## ಬಿಡಿಎ ಕಾರ್ಯಾಚರಣೆ: 25 ಕೋಟಿ ರೂ. ಆಸ್ತಿ ವಶ

**ಬೆಂಗಳೂರು:** ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ಅನಧಿಕೃತ ನಿರ್ಮಾಣಗಳನ್ನು ತೆರವುಗೊಳಿಸುವ ಕಾರ್ಯಾಚರಣೆಯನ್ನು ಮುಂದುವರೆಸಿದ್ದು, ಕಾರ್ಯಾಚರಣೆಯಲ್ಲಿ ಇಂಡಸ್ಟ್ರೀಯಲ್ ಸಬರ್ಬ್, 2ನೇ ಹಂತ, ರಾಜಾಜಿನಗರ ಬಡಾವಣೆಯ ನಿವೇಶನ ಸಂಖ್ಯೆ: 13 ಮತ್ತು 17 ನಿವೇಶನಗಳ ತೆರವು ಕಾರ್ಯಾಚರಣೆ ಕೈಗೊಂಡು ಸುಮಾರು ರೂ. 25.00 ಕೋಟಿ ಮೌಲ್ಯದ ಆಸ್ತಿಯನ್ನು ವಶಪಡಿಸಿಕೊಂಡಿದೆ.

ಭೌಗೋಳಿಕನಕ್ಷೆಗಳು ಮತ್ತು ವಿವರಗಳನ್ನು ಅನ್ವೇಷಿಸುವುದುಬೆಂಗಳೂರು ಉತ್ತರ ತಾಲ್ಲೂಕು, ಯಶವಂತಪುರ ಹೋಬಳಿ ಪೀಣ್ಯ ಗ್ರಾಮದ ಸರ್ವೆ ನಂ. 79 ಮತ್ತು 70 ರಲ್ಲಿನ ಇಂಡಸ್ಟ್ರೀಯಲ್ ಸಬರ್ಬ್, 2ನೇ ಹಂತ, ರಾಜಾಜಿನಗರ ಬಡಾವಣೆಯ ನಿವೇಶನ ಸಂಖ್ಯೆ: 13 ಮತ್ತು 17 ನಿವೇಶನಗಳ ಸುಮಾರು 13000 ಚದರ ಅಡಿಗಳ ಪ್ರದೇಶದಲ್ಲಿ ಅನಧಿಕೃವಾಗಿ ನಿರ್ಮಾಣವನ್ನು ತೆರವುಗೊಳಿಸಿ, ಸುಮಾರು 25.00 ಕೋಟಿ ಬೆಲೆ ಬಾಳುವ ಪ್ರದೇಶವನ್ನು ಪ್ರಾಧಿಕಾರವು ವಶಪಡಿಸಿಕೊಂಡಿತು. ಈ ಕಾರ್ಯಾಚರಣೆಯನ್ನು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ವಲಯ ಆಯುಕ್ತರು, ಆರಕ್ಷಕ ಅಧೀಕ್ಷಕರು, ಅಭಿಯಂತರ ಅಧಿಕಾರಿ-1 ಹಾಗೂ ಪ್ರಾಧಿಕಾರದ ಕಾರ್ಯನಿರತ ಆರಕ್ಷಕ ಪಡೆ, ಪಶ್ಚಿಮ ವಿಭಾಗದ ಅಭಿಯಂತರರು, ಸರ್ವೆಯರ್ ಇವರುಗಳನ್ನು ಒಳಗೊಂಡಂತೆ ಸ್ಥಳೀಯ ಪೊಲೀಸ್ ಇಲಾಖೆಯ ಸಹಕಾರದೊಂದಿಗೆ ತೆರವುಕಾರ್ಯಾಚರಣೆಯನ್ನು ಕೈಗೊಂಡು ಸದರಿ ಪ್ರದೇಶವನ್ನು ಪ್ರಾಧಿಕಾರದ ಸುಪರ್ದಿಗೆ ಪಡೆಯಲಾಯಿತು.

# ಹನೂರು ಶೂಟೌಟ್ ಸಿಐಡಿಗೆ



**ಬೆಂಗಳೂರು:** ರಾಜ್ಯದಲ್ಲಿ ತೀವ್ರ ಸಂಚಲನ ಸೃಷ್ಟಿಸಿರುವ ಚಾಮರಾಜನಗರ ಜಿಲ್ಲೆಯ ಹನೂರು ತಾಲ್ಲೂಕಿನ ಕಾವೇರಿ ವನ್ಯಧಾಮದಲ್ಲಿ ನಡೆದ ಮೂವರು ಶೂಟೌಟ್ ಪ್ರಕರಣದ ತನಿಖೆಯನ್ನು ಸಿಐಡಿಗೆ ವರ್ಗಾಯಿಸಿ ರಾಜ್ಯ ಪೊಲೀಸ್ ಮಹಾ ನಿರ್ದೇಶಕ(ಡಿಜಿ ಐಜಿಪಿ)ಡಾ.ಎಂ.ಎ. ಸಲೀಂ ಆದೇಶ ಹೊರಡಿಸಿದ್ದಾರೆ.

ಮೂವರು ಎನ್‌ಕೌಂಟರ್ ಸಂಬಂಧಿಸಿದಂತೆ ದಾಖಲಿಸಿರುವ ನಾಲ್ಕು ಎಫ್‌ಐಆರ್‌ಗಳನ್ನು ಸಿಐಡಿ ತನಿಖೆಗೆ ವರ್ಗಾವಣೆ ಮಾಡಲಾಗಿದೆ. ರಾಮಪುರ ಠಾಣೆಯಲ್ಲಿ ದಾಖಲಾದ ಅರಣ್ಯಾಧಿಕಾರಿಗಳ ಮೇಲಿನ ಹಲ್ಲೆ, ಹನೂರು ಠಾಣೆಯಲ್ಲಿ ದಾಖಲಾದ ಮೂವರು ಬೇಟೆಗಾರರ ಎನ್‌ಕೌಂಟರ್, ಅರಣ್ಯ ಪ್ರದೇಶದಲ್ಲಿ ಅರಣ್ಯ ಇಲಾಖೆಗೆ ಸೇರಿದ ವಸ್ತುಗಳಿಗೆ ಹಾನಿ, ಶಿಬಿರಗಳನ್ನು ನಾಶ, ಕೊಳ್ಳೇಗಾಲ ಗ್ರಾಮಾಂತರ ಠಾಣೆಯಲ್ಲಿ ದಾಖಲಾದ ಅರಣ್ಯಾಧಿಕಾರಿಗಳ ಮೇಲಿನ ಹಲ್ಲೆ ಹಾಗೂ ಅರಣ್ಯ ಇಲಾಖೆ ಶಿಬಿರಗಳ ನಾಶ, ಹಾನಿ ಸೇರಿ ನಾಲ್ಕು ಪ್ರಕರಣಗಳ ತನಿಖೆಯನ್ನು ಸಿಐಡಿಗೆ ವಹಿಸಿ ಆದೇಶ ಹೊರಡಿಸಲಾಗಿದೆ.

ಅರಣ್ಯ ಇಲಾಖೆ ಅಧಿಕಾರಿಗಳು ನಡೆಸಿದ ಎನ್ ಕೌಂಟರ್ ನಲ್ಲಿ ಅಂಥೋಣಿಸಾಮಿ, ಜಾನ್ ಪೀಟರ್ ಹಾಗೂ ಡೇವಿಡ್ ಕುಮಾರ್ ಹತ್ಯೆಯಾಗಿದ್ದರು. ಈ ಮೂವರೂ ಬೇಟೆಯಾಡುವ ಉದ್ದೇಶದಿಂದಲೇ ಅರಣ್ಯದೊಳಗೆ ಪ್ರವೇಶ ಮಾಡಿದ್ದರು. ಈ ಕಾರಣಕ್ಕಾಗಿಯೇ ನಾಡ ಬಂದೂಕು ತೆಗೆದುಕೊಂಡು ಹೋಗಿದ್ದರು ಎಂದು ಅರಣ್ಯಾಧಿಕಾರಿಗಳು ಆರೋಪಿಸಿದ್ದರು.

ಇದಕ್ಕೆ ಪೂರಕವಾಗಿ ಮೂವರ ಶವಗಳ ವೈದ್ಯಕೀಯ ಪರೀಕ್ಷೆ ನಡೆಸುವಾಗ ಸಾಕ್ಷಿಗಳು ದೊರೆತಿದ್ದವು. ಈ ಪೈಕಿ ಅಂಥೋಣಿಸಾಮಿ ಹಾಗೂ ಪೀಟರ್ ಧರಿಸಿದ್ದ ಒಳ ಉಡುಪಿನ ಜೇಬಿನಲ್ಲಿ ನಾಡ ಬಂದೂಕಿಗೆ ಬಳಸುವ ತಲಾ 5 ಅಲ್ಯೂಮಿನಿಯಮ್ ಪ್ರೈಮರ್‌ಗಳು ಪತ್ತೆಯಾಗಿದ್ದವು. ನಾಡ ಬಂದೂಕುಗಳಲ್ಲಿ ಗನ್ ಪೌಡರ್ ಸ್ಫೋಟಿಸಲು ಬಳಸುವ ಅಲ್ಯೂಮಿನಿಯಮ್ ಕ್ಯಾಪ್ / ಪ್ರೈಮರ್ ಬಳಸಲಾಗುತ್ತದೆ. ಇನ್ನೂ ಎನ್‌ಕೌಂಟರ್‌ನಲ್ಲಿ ಹತ್ಯೆಯಾದ ಮೂವರ ಮರಣೋತ್ತರ ಪರೀಕ್ಷೆಯನ್ನು ಮೈಸೂರಿನ ಕೆ ಆರ್ ಆಸ್ಪತ್ರೆಯಲ್ಲಿ ನಡೆಸಲಾಗಿತ್ತು. ವರದಿಯಲ್ಲಿ ಅತ್ಯಂತ ಸಮೀಪದಿಂದ ಗುಂಡು ಹಾರಿಸಲಾಗಿದೆ ಎಂಬ ಅಂಶ ದೃಢಪಟ್ಟಿದೆ. ಇದು ಸ್ಥಳೀಯ ರೈತರು ಮತ್ತು ಮೃತರ ಕುಟುಂಬಸ್ಥರ ವಾದಕ್ಕೆ ಭಾರೀ ಬಲ ತಂದಿದೆ. ಮೃತರ ಬಟ್ಟೆ ಮತ್ತು ಚರ್ಮದ ಮೇಲೆ ಗನ್‌ಪೌಡರ್ ಕಲೆಗಳು, ಹೊಗೆಯ ಕಪ್ಪು ಕಲೆಗಳು ಹಾಗೂ ಸುಟ್ಟ ಗಾಯಗಳು ಪತ್ತೆಯಾಗಿವೆ. ಇದು ಅತ್ಯಂತ ಸಮೀಪದಿಂದ ಗುಂಡು ಹಾರಿಸಿರುವುದನ್ನು ಸ್ಪಷ್ಟಪಡಿಸಿದೆ. ಕುಟುಂಬಸ್ಥರ ವಾದ:ದನಗಳನ್ನು ಹುಡುಕಲು ಹೋದ ಅಮಾಯಕರನ್ನು ಅರಣ್ಯ ಸಿಬ್ಬಂದಿ ಹಿಡಿದು, ಉದ್ದೇಶಪೂರ್ವಕವಾಗಿ ಪಾಯಿಂಟ್ ಬ್ಲಾಂಕ್ ರೇಂಜ್‌ನಲ್ಲಿ ಗುಂಡಿಕ್ಕಿ ಹತ್ಯೆ ಮಾಡಿದ್ದಾರೆ ಎಂದು ಕುಟುಂಬಸ್ಥರು ಮೊದಲಿನಿಂದಲೂ ಆರೋಪಿಸುತ್ತಿದ್ದರು.

ಮರಣೋತ್ತರ ವರದಿಯು ಸಮೀಪದಿಂದಲೇ ಗುಂಡು ಹಾರಿಸಲಾಗಿದೆ ಎಂದು ಹೇಳುತ್ತಿರುವುದರಿಂದ, ಕಾರ್ಯಾಚರಣೆಯಲ್ಲಿದ್ದ ಅರಣ್ಯ ಸಿಬ್ಬಂದಿಯನ್ನು ತಕ್ಷಣವೇ ವಶಕ್ಕೆ ಪಡೆದು ತನಿಖೆ ನಡೆಸಬೇಕೆಂದು ಗ್ರಾಮಸ್ಥರು ಹಾಗೂ ರೈತ ಸಂಘಟನೆಗಳು ಪಟ್ಟು ಹಿಡಿದಿವೆ, ವರದಿ ಬಹಿರಂಗಗೊಳ್ಳುತ್ತಿದ್ದಂತೆ ವಿಪಕ್ಷಗಳು ಸರ್ಕಾರದ ವಿರುದ್ಧ ಆಕ್ರೋಶ ಹೊರಹಾಕಿದ್ದು, ಅರಣ್ಯ ಇಲಾಖೆಯ ಕ್ರಮವನ್ನು ತೀವ್ರವಾಗಿ ಖಂಡಿಸಿವೆ. ಆತ್ಮರಕ್ಷಣೆಗೆ ದಾಳಿ: ಅರಣ್ಯ ಇಲಾಖೆಯು ?ಬೇಟೆಗಾರರು ದಾಳಿ ಮಾಡಿದಾಗ ಆತ್ಮರಕ್ಷಣೆಗಾಗಿ ಪ್ರತಿದಾಳಿ ನಡೆಸಿದೆವು ಎಂದು ಹೇಳುತ್ತಿದ್ದರೆ, ಗ್ರಾಮಸ್ಥರು ಇದು ಅಮಾಯಕರ ಎಂದು ಪ್ರತಿಪಾದಿಸುತ್ತಿದ್ದಾರೆ. ಪ್ರಕರಣದ ಅಂತಿಮ ತನಿಖಾ ವರದಿ ಇನ್ನಷ್ಟೇ ಸಲ್ಲಿಕೆಯಾಗಬೇಕಿದ್ದು, ತನಿಖಾಧಿಕಾರಿಗಳು ಯಾವ ಆಧಾರದ ಮೇಲೆ ವರದಿ ನೀಡುತ್ತಾರೆ ಎಂಬುದರ ಮೇಲೆ ಪ್ರಕರಣದ ಅಂತಿಮ ಸತ್ಯಾಂಶ ತಿಳಿಯಲಿದೆ. ಇನ್ನೂ ಪ್ರಕರಣದ ತನಿಖೆ ಸಿಐಡಿಗೆ ಹಸ್ತಾಂತರಗೊಂಡಿದೆ ಮುಂದಿನ ದಿನಗಳಲ್ಲಿ ತನಿಖೆಯು ಮತ್ತಷ್ಟು ಚುರುಕುಗೊಳ್ಳಲಿದೆ.ಸಿಐಡಿ ತನಿಖೆ ಹೊಸದೇನಲ್ಲ: ಪರಂ ಹನೂರು ಕೇಸ್ ಸಿಐಡಿ ಹಸ್ತಾಂತರ ವಿಚಾರ ಪ್ರತಿಕ್ರಿಯಿಸಿರುವ ಉಪಮುಖ್ಯಮಂತ್ರಿ ಡಾಕ್ಟರ್ ಜಿ ಪರಮೇಶ್ವರ್ ಅವರು ಸಾಮಾನ್ಯವಾಗಿ ಇಂಥಾ ಘಟನೆ ಆದಾಗ, ಸರ್ಕಾರಕ್ಕೆ ಅನುಮಾನ, ಬಂದಾಗ ಅದನ್ನ ಸಿಐಡಿ ಗೆ ಕೊಡುತ್ತದೆ ಎಂದಿದ್ದಾರೆ.

ಅದೇ ರೀತಿ ಹನೂರು ಘಟನೆಯ ಬಗ್ಗೆಯೂ ಸಿಐಡಿ ತನಿಖೆಗೆ ಆದೇಶಿಸಲಾಗಿದೆ , ಇದರಲ್ಲಿ ಏನೂ ಹೊಸದೇನೂ ಇಲ್ಲ ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡುತ್ತಾ ಹೇಳಿದರು ಕುಮಾರಸ್ವಾಮಿ

## ತ.ನಾಡಿಗೆ 9 ಸಾವಿರ ಕ್ಯೂಸೆಕ್ ನೀರು ಹರಿಸಲು ಸೂಚನೆ



**ನವದೆಹಲಿ:** ಕರ್ನಾಟಕಕ್ಕೆ ಮತ್ತೆ ಕಾವೇರಿ ಆಘಾತ ಎದುರಾಗಿದೆ. ತಮಿಳುನಾಡಿಗೆ ಮುಂದಿನ 15 ದಿನಗಳವರೆಗೆ 9,000 ಕ್ಯೂಸೆಕ್ ನೀರು ಹರಿಸುವಂತೆ ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ ಆದೇಶ ಹೊರಡಿಸಿದ್ದು,ಈ ಮೂಲಕ ಕಾವೇರಿ ನೀರು ನಿಯಂತ್ರಣ ಸಮಿತಿ ಆದೇಶವನ್ನು ಎತ್ತಿಹಿಡಿದಿದೆ. ಇಂದು ದೆಹಲಿಯಲ್ಲಿ ನಡೆದ ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರದ ಸಭೆಯಲ್ಲಿ ತಮಿಳುನಾಡಿಗೆ 9 ಸಾವಿರ ಕ್ಯೂಸೆಕ್ ನೀರು ಹರಿಸಲು ಕರ್ನಾಟಕಕ್ಕೆ ಸೂಚಿಸಲಾಗಿದೆ. ಹೀಗಾಗಿ ಕಾವೇರಿ ವಿವಾದ ಸಂಬಂಧ ಕರ್ನಾಟಕಕ್ಕೆ ಮತ್ತೆ ಭಾರಿ ಹಿನ್ನಡೆಯಾಗಿದೆ. ಪ್ರತಿ ದಿನ ತಮಿಳುನಾಡಿಗೆ 9000 ಕ್ಯೂಸೆಕ್ ನೀರು ಹರಿಸುವಂತೆ ಕಾವೇರಿ ನೀರು ನಿಯಂತ್ರಣ ಸಮಿತಿ ಸೋಮವಾರ ನೀಡಿದ್ದ ಆದೇಶವನ್ನು ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರದ ಸಭೆಯಲ್ಲಿ ಎತ್ತಿಹಿಡಿಯಲಾಗಿದೆ. ಪ್ರಾಧಿಕಾರದ ಕಚೇರಿಯಲ್ಲಿ ನಡೆದ ಸಭೆಯಲ್ಲಿ ರಾಜ್ಯದಿಂದ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಗೌರವ್ ಗುಪ್ತಾ ಹಾಗೂ ಕಾವೇರಿ ನೀರಾವರಿ ನಿಗಮ ವ್ಯವಸ್ಥಾಪಕ ನಿರ್ದೇಶಕ ಮಹೇಶ್ ಭಾಗಿಯಾದರು. ತಮಿಳುನಾಡಿನಿಂದ ನೀರಾವರಿ ಕಾರ್ಯದರ್ಶಿ ಪ್ರಶಾಂತ್, ಕಾವೇರಿ ತಾಂತ್ರಿಕ ಸಮಿತಿ ಅಧ್ಯಕ್ಷ ಸುಬ್ರಹ್ಮಣ್ಯಂ ಭಾಗವಹಿಸಿದ್ದರು. ಸಭೆ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಗೌರವ್ ಗುಪ್ತಾ,ಇಂದು ಒಂದೂವರೆ ಗಂಟೆಗಳ ಕಾಲ ಸಭೆ ಮಾಡಿದ್ದೇವೆ. ನೆನ್ನೆ ಕೊಟ್ಟಿರುವ ಶಿಫಾರಸನ್ನು ಪಾಲಿಸಲು ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ ಸೂಚಿಸಿದೆ.ತಮಿಳುನಾಡು 28 ಟಿಎಂಸಿ ನೀರಿನ ಬೇಡಿಕೆ ಇಟ್ಟಿತ್ತು.ಆದರೆ,ಪ್ರಾಧಿಕಾರ ಅದನ್ನು ಒಪ್ಪಿಲ್ಲ. ಮುಂದೆ ಉತ್ತಮ ಮಳೆಯಾಗಬಹುದು ಎಂದು ಹವಾಮಾನ ಇಲಾಖೆ ಆಶಯ ವ್ಯಕ್ತಪಡಿಸಿದೆ.

# ರಾಜ್ಯಪಾಲರ ನಿರ್ಧಾರದ ಮೇಲೆ ನಾಗೇಂದ್ರ ಭವಿಷ್ಯ ನಿರ್ಧಾರ



**ಬೆಂಗಳೂರು,** ಕರ್ನಾಟಕ ಮಹರ್ಷಿ ವಾಲೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಬಹುಕೋಟಿ ಹಣ ವರ್ಗಾವಣೆ ಹಗರಣಕ್ಕೆ ಸಂಬಂಧಿಸಿದಂತೆ, ಸಚಿವ ಬಿ.ನಾಗೇಂದ್ರ ವಿರುದ್ಧ ಕಾನೂನು ಕ್ರಮ ಜರುಗಿಸಲು (ಪ್ರಾಸಿಕ್ಯೂಷನ್) ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅವರು, ಸಚಿವ ಸಂಪುಟ ಸಭೆಯ ಅಭಿಪ್ರಾಯ ಕೇಳಲು ಮುಂದಾಗಿರುವುದು ಕುತೂಹಲ ಮೂಡಿಸಿದೆ. ಒಂದು ವೇಳೆ ಸಚಿವ ಸಂಪುಟ ಸಭೆಯು ರಾಜ್ಯಪಾಲರ ಪತ್ರಕ್ಕೆ ಮನ್ನಣೆ ಕೊಡದಿದ್ದರೆ, ರಾಜ್ಯಪಾಲರು ಮುಂದೆ ತೆಗೆದುಕೊಳ್ಳುವ ನಿರ್ಧಾರ ಸಚಿವ ನಾಗೇಂದ್ರ ರಾಜಕೀಯ ಭವಿಷ್ಯವನ್ನು ತೀರ್ಮಾನ ಮಾಡಲಿದೆ.

ಜನಪ್ರತಿನಿಧಿಗಳ ವಿರುದ್ಧ ವಿಚಾರಣೆ ನಡೆಸಲು ಸಚಿವ ಸಂಪುಟ ಒಪ್ಪಿಗೆ ಕಡ್ಡಾಯ ಎಂಬುದು ಕೇವಲ ಔಪಚಾರಿಕ ಪ್ರಕ್ರಿಯೆ ಎಂದು ಹೇಳಲಾಗುತ್ತದೆ. ಏಕೆಂದರೆ, ಈ ಹಿಂದೆ ಮಾಜಿ ಮುಖ್ಯಮಂತ್ರಿ ಯಡಿಯೂರಪ್ಪ ವಿರುದ್ಧ ಡಿ ನೋಟಿಫೀಕೇಶನ್ ಪ್ರಕರಣದಲ್ಲಿ ಲೋಕಾಯುಕ್ತ ಅಧಿಕಾರಿಗಳು ವಿಚಾರಣೆಗೆ ಒಳಪಡಿಸಲು ಅನುಮತಿ ನೀಡಬೇಕೆಂದು ಅಂದಿನ ರಾಜ್ಯಪಾಲ ಹಂಸರಾಜ್ ಭಾರದ್ವಾಜ್ ಅವರಿಗೆ ಪತ್ರ ಬರೆದಿದ್ದರು. ಈ ಸಂದರ್ಭದಲ್ಲಿ ಸಚಿವ ಸಂಪುಟ ಸಭೆಯು ಯಡಿಯೂರಪ್ಪ ವಿರುದ್ಧ ಪ್ರಾಸಿಕ್ಯೂಷನ್ ಗೆ ಅನುಮತಿ ನೀಡಬಾರದು ಎಂದು ಒಂದು ಸಾಲಿನ ನಿರ್ಣಯವನ್ನು ತೆಗೆದುಕೊಂಡಿತ್ತು.ಆದರೆ ರಾಜ್ಯಪಾಲರು ಸಚಿವ ಸಂಪುಟ ಸಭೆಯನಿರ್ಣಯವನ್ನು ತಿರಸ್ಕರಿಸಿದ್ದರು ಎಂಬುದು ಉಲ್ಲೇಖ.ರಾಜ್ಯಪಾಲರ ಕಚೇರಿಯು ಈ ವಿಷಯದಲ್ಲಿ ಕಾನೂನು ಇಲಾಖೆಯ ಅಭಿಪ್ರಾಯ ಪಡೆಯುವ ಪ್ರಕ್ರಿಯೆಗೆ ಮುಂದಾಗಿದೆ. ರಾಜ್ಯಪಾಲರು ಸಚಿವರ ವಿರುದ್ಧದ ಪ್ರಾಸಿಕ್ಯೂಷನ್ ಅನುಮತಿ ವಿಚಾರದಲ್ಲಿ ಸರ್ಕಾರದ ನೆರವು ಮತ್ತು ಸಲಹೆಯನ್ನು ಪಡೆಯಬೇಕೇ ಎಂಬ ಪ್ರಶ್ನೆಯೂ ಇದರೊಂದಿಗೆ ಮುನ್ನೆಲೆಗೆ ಬಂದಿದೆ.

ವಾಲೀಕಿ ನಿಗಮದ ನಿಧಿಯ ದುರುಪಯೋಗ ಮತ್ತು ಹಣ ವರ್ಗಾವಣೆ ಪ್ರಕರಣಕ್ಕೆ ಸಂಬಂಧಿಸಿದಂತೆ ಕೇಂದ್ರ ತನಿಖಾ ದಳ (ಸಿಬಿಐ) ಸಚಿವ ನಾಗೇಂದ್ರ ಅವರ ವಿರುದ್ಧ ಪ್ರಾಸಿಕ್ಯೂಷನ್ ಅನುಮತಿ ಕೋರಿ ರಾಜ್ಯಪಾಲರಿಗೆ ಅಧಿಕೃತ ಪತ್ರ ಬರೆದಿದೆ.

ರಾಜ್ಯಪಾಲರ ಕಚೇರಿಯು (ಲೋಕಭವನ) ಈ ಕುರಿತು ಕಾನೂನು ಇಲಾಖೆ ಹಾಗೂ ತಜ್ಞರ ಸಲಹೆಯನ್ನು ಪಡೆದುಕೊಂಡಿದ್ದು, ಸಚಿವ ಸಂಪುಟದ ಅಭಿಪ್ರಾಯ ಮತ್ತು ಸಂವಿಧಾನಿಕ ನಿಯಮಗಳ ಅಡಿಯಲ್ಲಿ ಮುಂದಿನ ನಿರ್ಧಾರ ಕೈಗೊಳ್ಳಲು ಸಿದ್ಧತೆ ನಡೆಸಿದೆ. ಸಿಬಿಐ ರಾಜ್ಯ ಸರ್ಕಾರಕ್ಕೆ ಮೊದಲು ಮಾಹಿತಿ ಅಥವಾ ಪತ್ರ ನೀಡಬೇಕಾಗಿತ್ತು ಎಂಬುದು ಸರ್ಕಾರದ ವಾದವಾಗಿದೆ. ಇದೇ ವಿಚಾರ ಈಗ ಕಾನೂನು ಮತ್ತು ಸಂವಿಧಾನಾತಕ ಚರ್ಚೆಯನ್ನೂ ಹುಟ್ಟುಹಾಕಿದೆ. ವಿಶೇಷವಾಗಿ, ರಾಜ್ಯ ವ್ಯಾಪ್ತಿಯಲ್ಲಿ ಸಿಬಿಐ ತನಿಖೆ ನಡೆಸುವ ಅಧಿಕಾರ, ರಾಜ್ಯದ ಒಪ್ಪಿಗೆ, ಹಾಗೂ ಹಾಲಿ ಸಚಿವರ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡುವ ಸಂದರ್ಭದಲ್ಲಿ ರಾಜ್ಯಪಾಲರ ಅಧಿಕಾರದ ಮಿತಿಗಳೇನು ಎಂಬುದು ಪ್ರಮುಖ ಪ್ರಶ್ನೆಗಳಾಗಿವೆ.

2024ರ ಲೋಕಸಭಾ ಚುನಾವಣೆಗೆ ಮುನ್ನ ವಾಲೀಕಿ ನಿಗಮದಲ್ಲಿ ನಡೆದ ಹಣಕಾಸು ಅಕ್ರಮಗಳು ಮತ್ತು ವರ್ಗಾವಣೆ ಪ್ರಕರಣಗಳು ಬೆಳಕಿಗೆ ಬಂದಾಗ ಬಿ. ನಾಗೇಂದ್ರ ಅವರು ಎಸ್‌ಟಿ ಕಲ್ಯಾಣ ಸಚಿವರಾಗಿದ್ದರು. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಸಿಬಿಐ ಕ್ರಿಮಿನಲ್ ಪಿತೂರಿ ಆರೋಪದ ಮೇರೆಗೆ ಹಾಗೂ ಇಡಿ ಅಕ್ರಮ ಹಣ ವರ್ಗಾವಣೆ ತಡೆ ಕಾಯ್ದೆಯಡಿ ಕಾನೂನು ಕ್ರಮಕ್ಕೆ ಅನುಮತಿ ಕೋರಿ ಪ್ರತ್ಯೇಕ ಮನವಿಗಳನ್ನು ಲೋಕಭವನಕ್ಕೆ ಸಲ್ಲಿಸಿವೆ.

ಈ ಕುರಿತು ಪ್ರತಿಕ್ರಿಯಿಸಿದ್ದ ಗೃಹ ಸಚಿವ ಪ್ರಿಯಾಂಕ್ ಖರ್ಗೆ, ಸಚಿವರೊಬ್ಬರ ವಿರುದ್ಧ ಕಾನೂನು ಕ್ರಮ ಜರುಗಿಸಲು ರಾಜ್ಯಪಾಲರು ನೇರವಾಗಿ ಅನುಮತಿ ನೀಡಬಹುದೇ ಎಂಬ ಬಗ್ಗೆ ಅನುಮಾನ ವ್ಯಕ್ತಪಡಿಸಿದ್ದು, ಇದಕ್ಕೆ ರಾಜ್ಯ ಸರ್ಕಾರದ ಒಪ್ಪಿಗೆ ಕಡ್ಡಾಯವಾಗಿ ಅಗತ್ಯವಿರುತ್ತದೆ ಎಂದು ಪ್ರತಿಪಾದಿಸಿದ್ದರು. ಭಾರತೀಯ ಕಾನೂನು ಚೌಕಟ್ಟಿನನ್ವಯ, ದೆಹಲಿ ವಿಶೇಷ ಪೊಲೀಸ್ ಸ್ಥಾಪನಾ ಕಾಯಿದೆ, 1946ರ ಸೆಕ್ಷನ್ 6ರ ಪ್ರಕಾರ ಸಿಬಿಐ ತನ್ನ ತನಿಖಾ ವ್ಯಾಪ್ತಿಯನ್ನು ಚಲಾಯಿಸಲು ಸಾಮಾನ್ಯವಾಗಿ ರಾಜ್ಯ ಸರ್ಕಾರದ ಒಪ್ಪಿಗೆಯನ್ನು ಅಪೇಕ್ಷಿಸುತ್ತದೆ. ಆದಾಗ್ಯೂ ಉಚ್ಚ ನ್ಯಾಯಾಲಯ ಅಥವಾ ಸರ್ವೋಚ್ಚ ನ್ಯಾಯಾಲಯಗಳು ಸ್ವಯಂಪ್ರೇರಿತವಾಗಿ ಅಥವಾ ಸಾರ್ವಜನಿಕ ಹಿತಾಸಕ್ತಿ ಅರ್ಜಿಗಳ ಮೇರೆಗೆ ಸಿಬಿಐ ತನಿಖೆಗೆ ಆದೇಶಿಸಿದ ಸಂದರ್ಭಗಳಲ್ಲಿ ಅಥವಾ ಕೇಂದ್ರ ಸರ್ಕಾರದ ನೌಕರರು ಭಾಗಿಯಾದಾಗ ಇಂತಹ ವಿಶೇಷ ಒಪ್ಪಿಗೆಯ ಅಗತ್ಯವಿರುವುದಿಲ್ಲ ಎಂದು ಕಾನೂನು ತಜ್ಞರು ಅಭಿಪ್ರಾಯಪಡುತ್ತಾರೆ.

ಸಚಿವರು ಮತ್ತು ಶಾಸಕರ ವಿರುದ್ಧದ ಪ್ರಾಸಿಕ್ಯೂಷನ್ ಮಂಜೂರಾತಿ ವಿಷಯಗಳಲ್ಲಿ ರಾಜ್ಯಪಾಲರು ಏಕಪಕ್ಷೀಯವಾಗಿ ನಿರ್ಧಾರ ಕೈಗೊಳ್ಳಲು ಸಾಧ್ಯವಿದೆಯೇ ಅಥವಾ ಸರ್ಕಾರದ ಒಪ್ಪಿಗೆ ಕಡ್ಡೇಪಾಯವೇ ಎಂಬ ಬಗ್ಗೆ ಲೋಕಭವನವು ಕಾನೂನು ತಜ್ಞರಿಂದ ಸ್ಪಷ್ಟನೆ ಹಾಗೂ ಸಲಹೆಯನ್ನು ಪಡೆದುಕೊಂಡಿದೆ. ಬಂದಿರುವ ಕಾನೂನು ಅಭಿಪ್ರಾಯದ ಮೇರೆಗೆ, ಈ ಪ್ರಕ್ರಿಯೆಯಲ್ಲಿ ರಾಜ್ಯ ಸರ್ಕಾರದ ಅಧಿಕೃತ ಅಭಿಪ್ರಾಯವನ್ನು ಪಡೆದು ಮುಂದಿನ ಕ್ರಮ ಜರುಗಿಸಲು ನಿರ್ಧರಿಸಲಾಗಿದೆ.

## ಖಾಲಿ ನಿವೇಶನ ಸ್ವಚ್ಛತೆ: ಮಾಲೀಕರಿಗೆ ಆ.27 ಗಡುವು



**ಬೆಂಗಳೂರು:** ಖಾಲಿ ನಿವೇಶನಗಳಲ್ಲಿ ತ್ಯಾಜ್ಯ ಹಾಗೂ ಡೆಬ್ರಿಸ್ ರಾಶಿ ಹಾಕಿ ನಿರ್ಲಕ್ಷ್ಯ ವಹಿಸುವ ಸ್ವತ್ತಿನ ಮಾಲೀಕರ ವಿರುದ್ಧ ಬೆಂಗಳೂರು ಪೂರ್ವ ನಗರ ಪಾಲಿಕೆ ಕಟ್ಟುನಿಟ್ಟಿನ ಕ್ರಮಕ್ಕೆ ಮುಂದಾಗಿದೆ. ಆಗಸ್ಟ್ 27ರೊಳಗೆ ಖಾಲಿ ನಿವೇಶನಗಳನ್ನು ಸ್ವಯಂಪ್ರೇರಿತವಾಗಿ ಸ್ವಚ್ಛಗೊಳಿಸದಿದ್ದರೆ, ಪಾಲಿಕೆಯೇ ತ್ಯಾಜ್ಯ ತೆರವುಗೊಳಿಸಿ ಅದರ ಸಂಪೂರ್ಣ ವೆಚ್ಚವನ್ನು ಆಸ್ತಿ ತೆರಿಗೆಯೊಂದಿಗೆ ಮಾಲೀಕರಿಂದ ವಸೂಲಿ ಮಾಡಲಿದೆ. ಪ್ರವಾಸಕೈಪಿಡಿಗಳನ್ನು ಓದುವುದು

ಪೂರ್ವ ನಗರ ಪಾಲಿಕೆ ವ್ಯಾಪ್ತಿಯಲ್ಲಿ ನಡೆಯುತ್ತಿರುವ ?ತ್ಯಾಜ್ಯದಿಂದ ಸ್ವಾತಂತ್ರ್ಯ? ಅಭಿಯಾನವನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸುವ ಸಂಬಂಧ ಆಯುಕ್ತ ಡಿ.ಎಸ್. ರಮೇಶ್ ಅಧಿಕಾರಿಗಳೊಂದಿಗೆ ಸಭೆ ನಡೆಸಿದರು. ಖಾಸಗಿ ಖಾಲಿ ನಿವೇಶನಗಳನ್ನು ಗುರುತಿಸುವುದು, ಮಾಲೀಕರಿಗೆ ನೋಟಿಸ್ ನೀಡುವುದು ಹಾಗೂ ತ್ಯಾಜ್ಯ ತೆರವು ಮತ್ತು ಸಾಗಾಣಿಕೆ ಕುರಿತು ಸಭೆಯಲ್ಲಿ ಚರ್ಚಿಸಲಾಯಿತು.

ಈ ಹಿಂದೆ ಆಗಸ್ಟ್ 22ರೊಳಗೆ ತ್ಯಾಜ್ಯ ತೆರವುಗೊಳಿಸುವಂತೆ ಮಾಲೀಕರಿಗೆ ಸೂಚಿಸಲಾಗಿತ್ತು. ಆದರೆ ಬಹುತೇಕ ಖಾಲಿ ನಿವೇಶನಗಳಲ್ಲಿ ಇನ್ನೂ ಡೆಬ್ರಿಸ್ ತೆರವುಗೊಳಿಸದಿರುವುದು ಪಾಲಿಕೆಯ ಗಮನಕ್ಕೆ ಬಂದಿದೆ. ಹೀಗಾಗಿ ಆಗಸ್ಟ್ 27ರಿಂದ ಸಾಮೂಹಿಕವಾಗಿ ತ್ಯಾಜ್ಯ ವಿಲೇವಾರಿ ಕಾರ್ಯಾಚರಣೆ ಆರಂಭಿಸಲು ಪಾಲಿಕೆ ಸಿದ್ಧತೆ ನಡೆಸಿದೆ.

ನಿವೇಶನದ ವಿಸ್ತೀರ್ಣ ಹಾಗೂ ತಡೆಗೋಡೆ ಇರುವಿಕೆ ಆಧರಿಸಿ ಸ್ವಚ್ಛತಾ ವೆಚ್ಚ ನಿಗದಿಪಡಿಸಲಾಗಿದೆ. ಉದಾಹರಣೆಗೆ 2030 ಅಡಿ ನಿವೇಶನದ ತ್ಯಾಜ್ಯ ತೆರವಿಗೆ ಸ್ವಚ್ಛತಾ ಮತ್ತು ಸಾಗಾಣಿಕೆ ವೆಚ್ಚ ಸೇರಿ ಸಾವಿರಾರು ರೂಪಾಯಿ ವೆಚ್ಚವಾಗಲಿದೆ. 5080 ಅಡಿ ನಿವೇಶನದಲ್ಲಿ ಸಾಗಾಣಿಕೆ ವೆಚ್ಚವೇ 1.28 ಲಕ್ಷದವರೆಗೆ ತಲುಪಲಿದೆ. ಈ ವೆಚ್ಚವನ್ನು ತಪ್ಪಿಸಿಕೊಳ್ಳಲು ಮಾಲೀಕರು ಗಡುವಿನೊಳಗೆ ಸ್ವಚ್ಛತೆ ಕೈಗೊಳ್ಳುವಂತೆ ಆಯುಕ್ತರು ಮನವಿ ಮಾಡಿದ್ದಾರೆ.

ಅಧಿಕಾರಿಗಳ ವಿಶೇಷ ತಂಡ:ತ್ಯಾಜ್ಯ ತೆರವು ಕ್ರಮವನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸಲು ವಲಯ ಜಂಟಿ ಆಯುಕ್ತರು ಮತ್ತು ಮುಖ್ಯ ಅಭಿಯಂತರರ ಮೇಲ್ವಿಚಾರಣೆಯಲ್ಲಿ ವಿಶೇಷ ತಂಡ ರಚಿಸಲಾಗಿದೆ. ಸಹಾಯಕ ಪ್ರಧಾನ ವ್ಯವಸ್ಥಾಪಕರು, ಕಂದಾಯ ಅಧಿಕಾರಿಗಳು, ವಾರ್ಡ್ ಸಹಾಯಕ ಅಭಿಯಂತರರು, ಕಾರ್ಯಪಾಲಕ ಹಾಗೂ ಅಧೀಕ್ಷಕ ಅಭಿಯಂತರರು ಸೇರಿದಂತೆ ಹಲವು ಅಧಿಕಾರಿಗಳು ಈ ಕಾರ್ಯಾಚರಣೆಯಲ್ಲಿ ಭಾಗವಹಿಸಲಿದ್ದಾರೆ.

?ಆಗಸ್ಟ್ 27ರೊಳಗೆ ಖಾಲಿ ನಿವೇಶನಗಳನ್ನು ಸ್ವಚ್ಛಗೊಳಿಸಿಕೊಂಡರೆ ಪಾಲಿಕೆಯ ಕ್ರಮ ಮತ್ತು ಹೆಚ್ಚುವರಿ ವೆಚ್ಚದಿಂದ ಪಾರಾಗಬಹುದು. ಸಾರ್ವಜನಿಕರು ಈ ಅವಕಾಶವನ್ನು ಸದುಪಯೋಗಪಡಿಸಿಕೊಳ್ಳಬೇಕು? ಎಂದು ಆಯುಕ್ತ ಡಿ.ಎಸ್. ರಮೇಶ್ ಮನವಿ ಮಾಡಿದ್ದಾರೆ.

ಸಭೆಯಲ್ಲಿ ಜಂಟಿ ಆಯುಕ್ತೆ ಡಾ. ದಾಕ್ಷಾಯಿಣಿ ಕೆ., ಮುಖ್ಯ ಅಭಿಯಂತರರಾದ ಎಂ. ಲೋಕೇಶ್, ಕೃಷ್ಣಮೂರ್ತಿ ಹಾಗೂ ಘನತ್ಯಾಜ್ಯ ನಿರ್ವಹಣೆ ವಿಭಾಗದ ಅಧಿಕಾರಿಗಳು ಉಪಸ್ಥಿತರಿದ್ದರು.

# ಶಾಲೆಯಲ್ಲಿ ಹಿಜಾಬ್ ಅಗತ್ಯವಲ್ಲ ಅಲಹಾಬಾದ್ ಹೈಕೋರ್ಟ್ ಮಹತ್ವದ ತೀರ್ಪು



**ಅಲಹಾಬಾದ್:** ಖಾಸಗಿ ಅನುದಾನರಹಿತ ಶಾಲೆಯಲ್ಲಿ ನಿಗದಿತ ಸಮವಸ್ತ್ರದೊಂದಿಗೆ ಹಿಜಾಬ್ (ಶಿರೋವಸ್ತ್ರ) ಧರಿಸಲು ಅನುಮತಿ ನೀಡಬೇಕೆಂದು ಕೋರಿ ವಿದ್ಯಾರ್ಥಿನಿಯೊಬ್ಬಳು ಸಲ್ಲಿಸಿದ್ದ ಅರ್ಜಿಯನ್ನು ವಜಾಗೊಳಿಸಿರುವ ಅಲಹಾಬಾದ್ ಹೈಕೋರ್ಟ್, ?ಇಸ್ಲಾಂ ಧರ್ಮದಲ್ಲಿ ಶಾಲಾ ತರಗತಿಯೊಳಗೆ ಹಿಜಾಬ್ ಧರಿಸುವುದು ಧರ್ಮದ ಅತ್ಯಗತ್ಯ ಧಾರ್ಮಿಕ ಆಚರಣೆ ಎಂಬುದನ್ನು ಸಾಬೀತುಪಡಿಸಲು ಯಾವುದೇ ಪೂರಕ ಆಧಾರಗಳಿಲ್ಲ? ಎಂದು ಸ್ಪಷ್ಟಪಡಿಸಿದೆ.

ಪ್ರಯಾಗ್‌ರಾಜ್‌ನ ಅತ್ತರ್ಸುಯಾದಲ್ಲಿರುವ ?ಟ್ಯಾಗೋರ್ ಪಬ್ಲಿಕ್ ಸ್ಕೂಲ್? ಸಂಸ್ಥೆಯಲ್ಲಿ 6ನೇ ತರಗತಿಯಿಂದ 10ನೇ ತರಗತಿಯವರೆಗೆ ವ್ಯಾಸಂಗ ಮಾಡಿದ್ದ ಸುಕೈನಾ ರಿಜ್ವಿ ಎಂಬ ಮುಸ್ಲಿಂ ಶಿಯಾ ಸಮುದಾಯದ ವಿದ್ಯಾರ್ಥಿನಿ, 11ನೇ ತರಗತಿಯ ಪ್ರವೇಶಾತಿಯ ಸಂದರ್ಭದಲ್ಲಿಯೂ ಹಿಜಾಬ್ ಧರಿಸಲು ಅವಕಾಶ ನೀಡಬೇಕೆಂದು ಕೋರಿದ್ದಳು.

ಆದರೆ, ಶಾಲಾ ಆಡಳಿತ ಮಂಡಳಿಯು ?ಶಾಲೆಯಲ್ಲಿ ಎಲ್ಲ ವಿದ್ಯಾರ್ಥಿಗಳಿಗೆ ಒಂದೇ ರೀತಿಯ ಸಮವಸ್ತ್ರ ನೀತಿಯಿದ್ದು, ಇದಕ್ಕೆ ಹೆಚ್ಚುವರಿಯಾಗಿ ಹಿಜಾಬ್ ಧರಿಸಲು ಅವಕಾಶ ನೀಡಿದರೆ ಶಾಲಾ ಶಿಸ್ತು ಮತ್ತು ಸಮಾನತೆಗೆ ಧಕ್ಕೆಯಾಗುತ್ತದೆ? ಎಂದು ತಿಳಿಸಿ ಪ್ರವೇಶಾತಿಯನ್ನು ನಿರಾಕರಿಸಿತ್ತು. ಇದನ್ನು ಪ್ರಶ್ನಿಸಿ ವಿದ್ಯಾರ್ಥಿನಿ ತಾಯಿಯ ಮೂಲಕ ಅಲಹಾಬಾದ್ ಹೈಕೋರ್ಟ್‌ಗೆ ರಿಟ್ ಅರ್ಜಿ (ಸುಕೈನಾ ರಿಜ್ವಿ ವರ್ಸಸ್ ಉತ್ತರ ಪ್ರದೇಶ ಸರ್ಕಾರ ಮತ್ತು ಇತರರು) ಸಲ್ಲಿಸಿದ್ದರು. ನ್ಯಾಯಾಲಯದಲ್ಲಿ ಅರ್ಜಿದಾರರ ವಾದವೇನು? ಹಿಜಾಬ್ ಧರಿಸುವುದು ಇಸ್ಲಾಂ ಧರ್ಮದ ಆಚರಣೆಯ ಭಾಗವಾಗಿದ್ದು, ಇದನ್ನು ತಡೆಯುವುದು ಸಂವಿಧಾನದ ವಿಧಿ 14 (ಸಮಾನತೆಯ ಹಕ್ಕು), ವಿಧಿ 19(1)(ಎ) (ಅಭಿವ್ಯಕ್ತಿ ಸ್ವಾತಂತ್ರ್ಯ) ಹಾಗೂ ವಿಧಿ 25 (ಧಾರ್ಮಿಕ ಸ್ವಾತಂತ್ರ್ಯ) ಅಡಿಯಲ್ಲಿನ ಮೂಲಭೂತ ಹಕ್ಕುಗಳ ಉಲ್ಲಂಘನೆಯಾಗುತ್ತದೆ.

6ರಿಂದ 10ನೇ ತರಗತಿಯವರೆಗೆ ಶಾಲಾ ಆಡಳಿತ ಮಂಡಳಿ ಹಿಜಾಬ್ ಧರಿಸಲು ಯಾವುದೇ ಆಕ್ಷೇಪ ವ್ಯಕ್ತಪಡಿಸಿರಲಿಲ್ಲ. ಶಾಲಾ ಗುರುತಿನ ಚೀಟಿ ಮತ್ತು ಗುಂಪು ಛಾಯಾಚಿತ್ರಗಳಲ್ಲಿಯೂ ಶಿರೋವಸ್ತ್ರ ಧರಿಸಿರುವುದಕ್ಕೆ ಪುರಾವೆಗಳಿವೆ, ಆದ್ದರಿಂದ ಈಗ ನಿರಾಕರಿಸುವುದು ಸರಿಯಲ್ಲ ಎಂದು ವಾದಿಸಲಾಯಿತು.

ಶಾಲೆಯು ಜಾತ್ಯತೀತ ವಾತಾವರಣದಲ್ಲಿ ಎಲ್ಲ ಸಮುದಾಯದ ಮಕ್ಕಳಿಗೂ ಸಮಾನ ಶಿಕ್ಷಣ ನೀಡುತ್ತಿದ್ದು, ಬೋನಾಫೈಡ್ (ಸದುದ್ದೇಶದ) ಸಮವಸ್ತ್ರ ನಿಯಮವನ್ನು ಜಾರಿಗೆ ತಂದಿದೆ. ಕೇವಲ ಒಬ್ಬ ವಿದ್ಯಾರ್ಥಿಗೆ ಧಾರ್ಮಿಕ ಆಧಾರದಲ್ಲಿ ವಿನಾಯಿತಿ ನೀಡಿದರೆ ಶಾಲೆಯ ಶಿಸ್ತು ತಪ್ಪುತ್ತದೆ ಎಂದು ಆಡಳಿತ ಮಂಡಳಿ, ಉತ್ತರ ಪ್ರದೇಶ ಸರ್ಕಾರ ಹಾಗೂ ಸಿಬಿಎಸ್‌ಇ ಮಂಡಳಿ ಅರ್ಜಿಯನ್ನು ವಿರೋಧಿಸಿದವು. ನ್ಯಾಯಮೂರ್ತಿ ಜೆ.ಜೆ. ಮುನಿರ್ ಮತ್ತು ನ್ಯಾಯಮೂರ್ತಿ ಇಂದ್ರಜೀತ್ ಶುಕ್ಲಾ ಅವರನ್ನೊಳಗೊಂಡ ವಿಭಾಗೀಯ ಪೀಠವು ಆಗಸ್ಟ್ 21, 2026 ರಂದು ಈ ಕೆಳಗಿನ ಮಹತ್ವದ ಅಂಶಗಳನ್ನು ಉಲ್ಲೇಖಿಸಿ ಅರ್ಜಿಯನ್ನು ವಜಾಗೊಳಿಸಿತು: ಸಂವಿಧಾನದ ವಿಧಿ 25ರ ಅಡಿ ರಕ್ಷಣೆ ಪಡೆಯಲು ಕೇವಲ ವಾದ ಮಾಡಿದರೆ ಸಾಲದು, ಸೂಕ್ತ ಕಾನೂನಾತ್ಮಕ ಮತ್ತು ಧಾರ್ಮಿಕ ಆಧಾರಗಳಿರಬೇಕು. ಹಿಜಾಬ್ ಧರಿಸದಿದ್ದರೆ ಇಸ್ಲಾಂ ಧರ್ಮದ ಮೂಲ ತತ್ವಕ್ಕೆ ಭಂಗ ಬರುತ್ತದೆ ಅಥವಾ ಧರ್ಮದಿಂದ ಹೊರಹಾಕಲ್ಪಡುತ್ತಾರೆ ಎಂಬುದನ್ನು ಸಾಬೀತುಪಡಿಸುವ ಯಾವುದೇ ಅಧಿಕೃತ ಧಾರ್ಮಿಕ ಗ್ರಂಥಗಳನ್ನು ಅರ್ಜಿದಾರರು ನ್ಯಾಯಾಲಯಕ್ಕೆ ಸಲ್ಲಿಸಿಲ್ಲ. ಕರ್ನಾಟಕದ ಹಿಜಾಬ್ ವ್ಯಾಜ್ಯದಲ್ಲಿ ಸುಪ್ರೀಂ ಕೋರ್ಟ್‌ನಲ್ಲಿ ಭಿನ್ನ ತೀರ್ಪು ಬಂದಿದ್ದು, ಅಂತಿಮ ತೀರ್ಪು ಕಾಯ್ದಿರಿಸಲ್ಪಟ್ಟಿದೆ. ಆದರೆ, ಹಿಜಾಬ್ ಅತ್ಯಗತ್ಯ ಧಾರ್ಮಿಕ ಆಚರಣೆಯಲ್ಲ ಎಂದು ಹೇಳಿದ್ದ ?ಕರ್ನಾಟಕ ಹೈಕೋರ್ಟ್‌ನ ಪೂರ್ಣಪೀಠದ ತೀರ್ಪು? ಅತ್ಯಂತ ಪ್ರಭಾವಶಾಲಿ ಮೌಲ್ಯ ಹೊಂದಿದ್ದು, ಅದಕ್ಕಿಂತ ವಿಭಿನ್ನ ನಿಲುವು ತಳೆಯಲು ಯಾವುದೇ ಕಾರಣವಿಲ್ಲ

ಎಂದು ಅಲಹಾಬಾದ್ ಹೈಕೋರ್ಟ್ ತಿಳಿಸಿತು.ಸಮವಸ್ತ್ರ ನೀತಿಯು ಧರ್ಮನಿರಪೇಕ್ಷ ವಾತಾವರಣವನ್ನು ನಿರ್ಮಿಸುತ್ತದೆ ಮತ್ತು ಮಕ್ಕಳಲ್ಲಿ ಸಮಾನತೆಯನ್ನು ತರುತ್ತದೆ. ಶಾಲೆಯ ನಿಯಮಾವಳಿಗಳು ತಾರತಮ್ಯರಹಿತವಾಗಿದ್ದಾಗ, ಅದನ್ನು ಜಾರಿಗೊಳಿಸುವ ಸಂಪೂರ್ಣ ಹಕ್ಕು ಶಾಲಾ ಆಡಳಿತ ಮಂಡಳಿಗೆ ಇರುತ್ತದೆ.

## ಸಂಪುಟ ಸರ್ಜರಿ ಮತ್ತೆ ಮುನ್ನಲೆಗೆ ಡಿಕೆಶಿ ಶೀಘ್ರ ದೆಹಲಿಗೆ

**ಬೆಂಗಳೂರು:** ವಿಧಾನ ಮಂಡಲದ ಅಧಿವೇಶನ ಮುಗಿಯುತ್ತಿದ್ದಂತೆಯೇ ಸಚಿವ ಸಂಪುಟಕ್ಕೆ ಸಣ್ಣ ಪ್ರಮಾಣದಲ್ಲಿ ಸರ್ಜರಿ ಮಾಡುವ ಚರ್ಚೆಗಳು ಮತ್ತೆ ಮುನ್ನಲೆಗೆ ಬಂದಿದ್ದು, ಸಂಪುಟ ಸರ್ಜರಿ ಬಗ್ಗೆ ಹೈಕಮಾಂಡ್ ಜತೆ ಚರ್ಚಿಸಲು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಇನ್ನೆರಡು ಮೂರು ದಿನಗಳಲ್ಲಿ ದೆಹಲಿಗೆ ತೆರಳುವ ಸಾಧ್ಯತೆ ಇದೆ. 2ನೇ ಹಂತದ ಸಚಿವ ಸಂಪುಟ ವಿಸ್ತರಣೆ ಸಂದರ್ಭದಲ್ಲಿ ಸ್ಥಾನ ಸಿಗದ ಹಿರಿಯ ಶಾಸಕರು ಅಸಮಾಧಾನಗೊಂಡಿದ್ದು, ಇವರನ್ನು ಸಮಾಧಾನಪಡಿಸಲು ಸಂಪುಟದಲ್ಲಿ ಸಣ್ಣ ಪ್ರಮಾಣದ ಬದಲಾವಣೆ ಮಾಡುವ ಚಿಂತನೆಯನ್ನು ಹೈಕಮಾಂಡ್ ಹಿಂದೆಯೇ ನಡೆಸಿತ್ತು. ವಿಧಾನ ಮಂಡಲದ ಅಧಿವೇಶನ ಇದ್ದ ಕಾರಣ ಸಂಪುಟ ಸರ್ಜರಿ ಮುಂದಕ್ಕೆ ಹೋಗಿತ್ತು. ಈಗ ಅಧಿವೇಶನ ಮುಗಿದಿರುವುದರಿಂದ ಸಂಪುಟ ಸರ್ಜರಿಗೆ ಹೈಕಮಾಂಡ್ ಮುಂದಾಗಿದ್ದು, ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ರವರನ್ನು ದೆಹಲಿಗೆ ಕರೆಸಿ ಚರ್ಚೆ ನಡೆಸುವ ಸಾಧ್ಯತೆ ಇದ್ದು, ಇದೇ ಬರುವ ಗುರುವಾರ ಇಲ್ಲವೇ ಶುಕ್ರವಾರ ಮುಖ್ಯಮಂತ್ರಿ ದೆಹಲಿಗೆ ತೆರಳಲಿದ್ದಾರೆ ಎಂದು ಹೇಳಲಾಗಿದೆ. ರಾಜ್ಯದಲ್ಲಿ ಒಂದು ಸ್ಥಾನ ಹೊರತುಪಡಿಸಿ ಎಲ್ಲಾ ಸಚಿವ ಸ್ಥಾನಗಳನ್ನು ತುಂಬಲಾಗಿದೆ. ಅಸಮಾಧಾನಗೊಂಡಿರುವ ಮೂರ್ನಾಲ್ಕು ಮಂದಿ ಹಿರಿಯ ಶಾಸಕರಿಗೆ ಸಚಿವ ಸ್ಥಾನ ನೀಡಲು ಈಗಿರುವ ಸಚಿವರಲ್ಲಿ ಒಂದಿಬ್ಬರನ್ನು ಕೈ ಬಿಡುವ ಅನಿವಾರ್ಯತೆ ಇದೆ. ಜತೆಗೆ ಸಂಪುಟದಲ್ಲಿ ಮಹಿಳೆಯರಿಗೂ ಪ್ರಾತಿನಿಧ್ಯ ನೀಡಿಲ್ಲ. ಹಾಗಾಗಿ ಮಹಿಳಾ ಶಾಸಕರೊಬ್ಬರಿಗೂ ಸಚಿವ ಸ್ಥಾನ ನೀಡಲೇಬೇಕಾಗುತ್ತದೆ. ಇದನ್ನೆಲ್ಲಾ ಗಮನಿಸಿದರೆ ಈಗ ಸಚಿವರಾಗಿರುವವರಲ್ಲಿ ಒಂದಿಬ್ಬರನ್ನು ಕೈಬಿಡುವ ಸಾಧ್ಯತೆಗಳು ಹೆಚ್ಚಿವೆ. ಯಾರನ್ನು ಸಂಪುಟದಿಂದ ಕೈಬಿಡಬೇಕು, ಯಾವ ಹಿರಿಯ ಶಾಸಕರನ್ನು ಸಂಪುಟಕ್ಕೆ ಸೇರ್ಪಡೆ ಮಾಡಿಕೊಳ್ಳಬೇಕು ಎಂಬ ಬಗ್ಗೆ ಚರ್ಚೆ ನಡೆಸಲು ಹೈಕಮಾಂಡ್ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ರವರನ್ನು ದೆಹಲಿಗೆ ಕರೆಸಿಕೊಳ್ಳಲಿದೆ.

# ಹಿಜಾಬ್ ಇಸ್ಲಾಂ ಧರ್ಮದ ಅಗತ್ಯ ಆಚರಣೆಯಲ್ಲ: ಅಲಹಾಬಾದ್ ಹೈಕೋರ್ಟ್

**ಲಕ್ನೋ:** ಮುಸ್ಲಿಂ ಮಹಿಳೆಯರು ಹಿಜಾಬ್ ಧರಿಸುವುದು ಇಸ್ಲಾಂ ಧರ್ಮದ ಅತ್ಯಗತ್ಯ ಧಾರ್ಮಿಕ ಆಚರಣೆಯಲ್ಲ ಎಂದು ಅಲಹಾಬಾದ್ ಹೈಕೋರ್ಟ್ ಮಹತ್ವದ ತೀರ್ಪು ನೀಡಿದೆ.ಶಾಲಾ ಸಮವಸ್ತ್ರದ ಜೊತೆಗೆ ಹಿಜಾಬ್ ಧರಿಸಲು ಅನುಮತಿ ಕೋರಿ ವಿದ್ಯಾರ್ಥಿನಿಯೊಬ್ಬರು ಸಲ್ಲಿಸಿದ್ದ ಅರ್ಜಿಯನ್ನು ನ್ಯಾಯಾಲಯ ವಜಾಗೊಳಿಸಿದೆ. ಶೈಕ್ಷಣಿಕ ಸಂಸ್ಥೆಗಳು ನಿಗದಿಪಡಿಸಿರುವ ಸಮವಸ್ತ್ರ ಸಂಹಿತೆಯನ್ನು ವಿದ್ಯಾರ್ಥಿಗಳು ತಮ್ಮ ವೈಯಕ್ತಿಕ ಆದ್ಯತೆಗಳಿಗೆ ಅನುಗುಣವಾಗಿ ಬದಲಾಯಿಸಿಕೊಳ್ಳುವ ಹಕ್ಕು ಹೊಂದಿಲ್ಲ ಎಂದು ನ್ಯಾಯಾಲಯ ಸ್ಪಷ್ಟಪಡಿಸಿದೆ.



ಪ್ರಯಾಗ್‌ರಾಜ್‌ನ ಖಾಸಗಿ ಶಾಲೆಯೊಂದರ ಅಪ್ರಾಪ್ತ ವಿದ್ಯಾರ್ಥಿನಿ ತನ್ನ ತಾಯಿಯ ಮೂಲಕ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದರು. 10ನೇ ತರಗತಿ ಉತ್ತೀರ್ಣರಾಗಿ ಅದೇ ಶಾಲೆಯಲ್ಲಿ 11ನೇ ತರಗತಿಗೆ ಪ್ರವೇಶ ಪಡೆಯಲು ಬಯಸಿದ್ದ ಅವರು, ಶಾಲಾ ಸಮವಸ್ತ್ರದ ಜೊತೆಗೆ ಹಿಜಾಬ್ ಧರಿಸಲು ಅನುಮತಿ ನೀಡಬೇಕು ಎಂದು ಕೋರಿದ್ದರು. ಹಿಜಾಬ್ ಧರಿಸುವುದು ಇಸ್ಲಾಂ ಧರ್ಮದ ಅತ್ಯಗತ್ಯ ಆಚರಣೆಯಾಗಿದ್ದು, 6ನೇ ತರಗತಿಯಿಂದಲೂ ತಾವು ಅದನ್ನು ಧರಿಸುತ್ತಿರುವುದಾಗಿ ಅರ್ಜಿಯಲ್ಲಿ ಉಲ್ಲೇಖಿಸಿದ್ದರು.

ವಿಚಾರಣೆ ನಡೆಸಿದ ನ್ಯಾಯಮೂರ್ತಿಗಳಾದ ಜೆ.ಜೆ. ಮುನೀರ್ ಮತ್ತು ಇಂದ್ರಜಿತ್ ಶುಕ್ಲಾ ಅವರಿದ್ದ ದ್ವಿಸದಸ್ಯ ಪೀಠ, ಹಿಜಾಬ್ ಧರಿಸುವುದು ಇಸ್ಲಾಂ ಧರ್ಮದ ಅತ್ಯಗತ್ಯ ಧಾರ್ಮಿಕ ಆಚರಣೆಯಲ್ಲ ಎಂದು ಸ್ಪಷ್ಟಪಡಿಸಿತು. ಈ ವಿಷಯ ನ್ಯಾಯಾಲಯಗಳ ಮುಂದೆ ಬಂದಾಗಲೆಲ್ಲಾ ಹಿಜಾಬ್ ಧರಿಸದಿರುವುದರಿಂದ ಧರ್ಮಕ್ಕೆ ಯಾವುದೇ ಧಕ್ಕೆ ಉಂಟಾಗುವುದಿಲ್ಲ ಎಂಬ ನಿಲುವಿನ ತೀರ್ಪುಗಳು ಬಂದಿವೆ ಎಂದು ಪೀಠ ಉಲ್ಲೇಖಿಸಿತು.

ಶಾಲೆಯ ತರಗತಿಗಳ ಛಾಯಾಚಿತ್ರಗಳನ್ನು ಪರಿಶೀಲಿಸಿದ ನ್ಯಾಯಾಲಯ, ಅರ್ಜಿದಾರ ವಿದ್ಯಾರ್ಥಿನಿಯ ಸಮುದಾಯಕ್ಕೆ ಸೇರಿದ ಇತರ ಯಾವುದೇ ವಿದ್ಯಾರ್ಥಿನಿಯರು ಹಿಜಾಬ್ ಧರಿಸಿರಲಿಲ್ಲ. ಕೇವಲ ಅರ್ಜಿದಾರ ವಿದ್ಯಾರ್ಥಿನಿ ಮಾತ್ರ ಹಿಜಾಬ್ ಧರಿಸಿದ್ದರು ಎಂಬುದನ್ನೂ ಗಮನಿಸಿತು. ಸಮವಸ್ತ್ರ ನಿಯಮವು ಎಲ್ಲಾ ವಿದ್ಯಾರ್ಥಿಗಳಿಗೂ ಸಮಾನವಾಗಿ ಅನ್ವಯಿಸುತ್ತದೆ. ವೈಯಕ್ತಿಕ ಆಯ್ಕೆಯ ಆಧಾರದ ಮೇಲೆ ಪ್ರತಿಯೊಬ್ಬ ವಿದ್ಯಾರ್ಥಿಗೂ ವಿನಾಯಿತಿ ನೀಡಿದರೆ ಸಮವಸ್ತ್ರದ ಮೂಲ ಪರಿಕಲ್ಪನೆ ಹಾಗೂ ಶಾಲೆಯ ಶಿಸ್ತು ಹಾಳಾಗುತ್ತದೆ ಎಂದು ನ್ಯಾಯಪೀಠ ಅಭಿಪ್ರಾಯಪಟ್ಟಿದೆ.

ಖಾಸಗಿ ಅನುದಾನರಹಿತ ಶಿಕ್ಷಣ ಸಂಸ್ಥೆಗಳಿಗೆ ತಮ್ಮ ಆವರಣದಲ್ಲಿ ಸಮವಸ್ತ್ರ ಸಂಹಿತೆಯನ್ನು ಕಡ್ಡಾಯವಾಗಿ ಜಾರಿಗೊಳಿಸುವ ಸಂಪೂರ್ಣ ಸ್ವಾಯತ್ತತೆ ಹಾಗೂ ಹಕ್ಕು ಇದೆ. ಸಮವಸ್ತ್ರವು ತಾರತಮ್ಯವಿಲ್ಲದೆ ಸಮಾನತೆ ಮತ್ತು ಶಿಸ್ತನ್ನು ಕಾಪಾಡುವ ಉದ್ದೇಶ ಹೊಂದಿರುವವರೆಗೆ ಸಂಸ್ಥೆಯ ನಿರ್ಧಾರವೇ ಅಂತಿಮವಾಗಿರುತ್ತದೆ ಎಂದು ನ್ಯಾಯಾಲಯ ಹೇಳಿದೆ.

ಶಾಲಾ ಆಡಳಿತ ಮಂಡಳಿ, ರಾಜ್ಯ ಸರ್ಕಾರ ಹಾಗೂ ಸಿಬಿಎಸ್‌ಇ ಕೂಡ ವಿದ್ಯಾರ್ಥಿನಿಯ ಅರ್ಜಿಯನ್ನು ವಿರೋಧಿಸಿದ್ದವು. ವಿವಿಧ ಸಮುದಾಯಗಳ ಮಕ್ಕಳು ಕಲಿಯುವ ಶಾಲೆಯಲ್ಲಿ ಒಬ್ಬ ವಿದ್ಯಾರ್ಥಿಗೆ ವಿಶೇಷ ವಿನಾಯಿತಿ ನೀಡಿದರೆ ಶಾಲೆಯ ಶಿಸ್ತು ಕದಡುವ ಸಾಧ್ಯತೆಯಿದೆ ಎಂಬ ಶಾಲೆಯ ವಾದವನ್ನು ನ್ಯಾಯಾಲಯ ಪುರಸ್ಕರಿಸಿದೆ.

# ಕೆಪಿಎಸ್‌ಸಿ ಕಚೇರಿ ಮೇಲೆ ಸಿಐಡಿ ದಾಳಿ

**ಬೆಂಗಳೂರು:** ಪಶುವೈದ್ಯಾಧಿಕಾರಿಗಳ ನೇಮಕಾತಿ ಪರೀಕ್ಷೆ ಹಗರಣಕ್ಕೆ ಸಂಬಂಧಿಸಿದಂತೆ ಕರ್ನಾಟಕ ಲೋಕಸೇವಾ ಆಯೋಗ (ಕೆಪಿಎಸ್‌ಸಿ) ಕಚೇರಿ ಮೇಲೆ ಸಿಐಡಿ ಪೊಲೀಸರು ಇಂದು ದಾಳಿ ನಡೆಸಿ ಶೋಧ ಕೈಗೊಂಡಿದ್ದಾರೆ.



ಪ್ರಕರಣದ ತನಿಖೆ ನಡೆಸುತ್ತಿರುವ ಸಿಐಡಿ ಅಧಿಕಾರಿಗಳ ತಂಡ ಇಂದು ಎಸ್‌ಪಿ ರಾಘವೇಂದ್ರ ಹೆಗ್ಡೆ ನೇತೃತ್ವದಲ್ಲಿ ಎರಡನೇ ಬಾರಿ ಕೆಪಿಎಸ್‌ಸಿ ಕಚೇರಿ ಮೇಲೆ ದಾಳಿ ನಡೆಸಿದ್ದು, ದಾಖಲೆಗಳ ಪರಿಶೀಲನೆಯಲ್ಲಿ ತೊಡಗಿದೆ.

ಮತ್ತೊಂದೆಡೆ ಪರೀಕ್ಷೆ ಎದುರಿಸಿದ್ದ ಎಲ್ಲ 329 ಅಭ್ಯರ್ಥಿಗಳಿಗೆ ಇಂದು ವಿಚಾರಣೆಗೆ ಹಾಜರಾಗಲು ಸೂಚಿಸಿ ಸಿಐಡಿ ಅಧಿಕಾರಿಗಳು ನೋಟಿಸ್ ನೀಡಿದ್ದಾರೆ.

ಅಭ್ಯರ್ಥಿಗಳಿಂದ ವಶಪಡಿಸಿಕೊಂಡಿರುವ ಓಎಂಆರ್ ಕಾರ್ಬನ್ ಶೀಟ್‌ಗಳನ್ನ ಈಗಾಗಲೇ ವಿಧಿವಿಜ್ಞಾನ ಪ್ರಯೋಗಾಲಯಕ್ಕೆ ರವಾನಿಸಲಾಗಿದೆ. ಪ್ರಕರಣದ ಪ್ರತ್ಯೇಕ ತನಿಖೆ ನಡೆಸಿರುವ ಇಡಿ ಅಧಿಕಾರಿಗಳಿಗೆ ಲಭ್ಯವಾದ ಕೆಲ ಮಾಹಿತಿ ಹಾಗೂ ತಪ್ಪೊಪ್ಪಿಗೆ ಹೇಳಿಕೆಗಳನ್ನ ಆಧರಿಸಿ ಸಿಐಡಿ ಅಧಿಕಾರಿಗಳು ತನಿಖೆಯನ್ನ ಮತ್ತಷ್ಟು ಚುರುಕುಗೊಳಿಸಿರುವುದಾಗಿ ತಿಳಿಸಿದ್ದಾರೆ.ಬೃಹತ್ ಅಕ್ರಮ ಹಾಗೂ ಅಕ್ರಮ ಹಣ ವರ್ಗಾವಣೆ ಪ್ರಕರಣಕ್ಕೆ ಸಂಬಂಧಿಸಿದಂತೆ ಜಾರಿ ನಿರ್ದೇಶನಾಲಯದ ಅಧಿಕಾರಿಗಳು 21ಕ್ಕೂ ಹೆಚ್ಚು ಸ್ಥಳಗಳಲ್ಲಿ ಶೋಧ ಕಾರ್ಯಾಚರಣೆ ನಡೆಸಿದ್ದರು.

ಅಲ್ಲದೆ ಪರೀಕ್ಷೆ ಉಸ್ತುವಾರಿ ವಹಿಸಿದ್ದ ಐಎಎಸ್ ಅಧಿಕಾರಿ ಜ್ಞಾನೇಂದ್ರ ಕುಮಾರ್ ಅವರ ನಿವಾಸದ ಮೇಲೆಯೂ ಇಡಿ ಅಧಿಕಾರಿಗಳು ದಾಳಿ ನಡೆಸಿದ್ದರು. ಅವರ ಅನುಪಸ್ಥಿತಿಯಲ್ಲಿ ಪರಿಶೀಲನೆ ನಡೆಸಿದ್ದ ಇಡಿ ಅಧಿಕಾರಿಗಳು ಇಂದು ವಿಚಾರಣೆಗೆ ಹಾಜರಾಗುವಂತೆ ಸೂಚಿಸಿ ಮನೆ ಬಾಗಿಲಿಗೆ ನೋಟಿಸ್ ಅಂಟಿಸಿ ತೆರಳಿದ್ದರು.

# BPL ಕಾರ್ಡ್ ಆದಾಯ ಮಿತಿ ಪರಿಷ್ಕರಣೆಗೆ ಸರ್ಕಾರ ಚಿಂತನೆ: ಸಚಿವ ರಿಜ್ವಾನ್ ಅರ್ಷದ್

**ಬೆಂಗಳೂರು:** ಬಿಪಿಎಲ್ ಕಾರ್ಡ್‌ಗಳಿಗೆ ನಿಗದಿಪಡಿಸಿರುವ ವಾರ್ಷಿಕ ಆದಾಯ ಮಿತಿಯನ್ನು ಪರಿಷ್ಕರಿಸುವ ಕುರಿತು ಸರ್ಕಾರ ಪರಿಶೀಲನೆ ನಡೆಸುತ್ತಿದೆ ಎಂದು ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ರಿಜ್ವಾನ್ ಅರ್ಷದ್ ವಿಧಾನಸಭೆಗೆ ತಿಳಿಸಿದ್ದಾರೆ.



ಪ್ರಸ್ತುತ ಬಿಪಿಎಲ್ ಕಾರ್ಡ್ ಪಡೆಯಲು ವಾರ್ಷಿಕ ಆದಾಯ ಮಿತಿ 1.20 ಲಕ್ಷ ರೂಪಾಯಿ ಇದೆ. ಆದಾಯ ಅರ್ಹತಾ ಮಿತಿಯನ್ನು ಪರಿಷ್ಕರಿಸುವ ವಿಚಾರ ವ್ಯಾಪಕ ಪರಿಣಾಮಗಳನ್ನು ಹೊಂದಿದ್ದು, ಎಲ್ಲ ಸಂಬಂಧಿತರೊಂದಿಗೆ ಸಮಗ್ರ ಸಮಾಲೋಚನೆ ಅಗತ್ಯವಿದೆ.ಈ ವಿಷಯ ಸರ್ಕಾರದ ಪರಿಶೀಲನೆಯಲ್ಲಿದೆ. ಅರ್ಹ ಯಾವುದೇ ಫಲಾನುಭವಿಗೆ ಅವರ ಹಕ್ಕಿನ ಸೌಲಭ್ಯ ವಂಚನೆಯಾಗದಂತೆ ಮುಖ್ಯಮಂತ್ರಿ ಅವರೊಂದಿಗೆ ಈ ವಿಚಾರವನ್ನು ಚರ್ಚಿಸಿ ಅಗತ್ಯ ಕ್ರಮ ಕೈಗೊಳ್ಳುತ್ತೇನೆ ಎಂದು ಹೇಳಿದರು.

ರದ್ದುಗೊಂಡಿರುವ ಬಿಪಿಎಲ್ ಕಾರ್ಡ್‌ಗಳನ್ನು ಮರುಪರಿಶೀಲಿಸಿ, ಅರ್ಹ ಫಲಾನುಭವಿಗಳು ತಮ್ಮ ಸೌಲಭ್ಯಗಳಿಂದ ವಂಚಿತರಾಗದಂತೆ ನೋಡಿಕೊಳ್ಳಲು ಹಾಗೂ ನಕಲಿ ಕಾರ್ಡ್‌ಗಳು, ಅನರ್ಹ ಫಲಾನುಭವಿಗಳು ಮತ್ತು ಇತರ ಅಕ್ರಮಗಳನ್ನು ಪತ್ತೆಹಚ್ಚಲು ಇಲಾಖೆಗೆ ಸೂಚಿಸಲಾಗಿದೆ ಎಂದು ಅರ್ಷದ್ ತಿಳಿಸಿದರು.

ಸರ್ಕಾರಿ ಕೆಲಸದಲ್ಲಿ ವಿಳಂಬ ಮಾಡಿದರೆ ಅಧಿಕಾರಿಗಳಿಗೆ ಭಾರಿ ದಂಡ: ವಿಧಾನಸಭೆಯಲ್ಲಿ ಸಕಾಲ ಸೇವೆಗಳ ತಿದ್ದುಪಡಿ ಮಸೂದೆ ಪಾಸ್ಪತ್ರಿ

ಕುಡಿಯುವ ನೀರಿನ ಘಟಕ ದುರಸ್ತಿಗೆ 3,000 ರೂಪಾಯಿ ವೆಚ್ಚ: ಈಶ್ವರ ಖಂಡ್ರೆ

ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರಿನ ಘಟಕಗಳ ಮೂಲಕ ಶುದ್ಧ ಕುಡಿಯುವ ನೀರು ಪೂರೈಕೆಯನ್ನು ಖಚಿತಪಡಿಸಿಕೊಳ್ಳಲು ಪ್ರತಿಯೊಂದು ಘಟಕದ ದುರಸ್ತಿಗೆ ಸರ್ಕಾರ 3,000 ರೂಪಾಯಿ ವೆಚ್ಚ ಮಾಡಲಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಖಂಡ್ರೆ ವಿಧಾನಸಭೆಗೆ ತಿಳಿಸಿದ್ದಾರೆ.

ಅನೇಕಲ್ ಶಾಸಕ ಬಿ. ಶಿವಣ್ಣ ಅವರ ಪ್ರಶ್ನೆಗೆ ಉತ್ತರಿಸಿದ ಈಶ್ವರ ಖಂಡ್ರೆ, ರಾಜ್ಯಾದ್ಯಂತ ಒಟ್ಟು 20,340 ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಸ್ಥಾಪಿಸಲಾಗಿದೆ. ಈ ಪೈಕಿ 17,208 ಘಟಕಗಳು ಕಾರ್ಯನಿರ್ವಹಿಸುತ್ತಿದ್ದು, 602 ಘಟಕಗಳು ಸ್ಥಗಿತಗೊಂಡಿವೆ ಹಾಗೂ 2,530 ಘಟಕಗಳಿಗೆ ದುರಸ್ತಿ ಅಗತ್ಯವಿದೆ ಎಂದು ತಿಳಿಸಿದರು.

ಕಾರ್ಯನಿರ್ವಹಿಸದ ಕುಡಿಯುವ ನೀರಿನ ಘಟಕಗಳನ್ನು ಆಯಾ ಗ್ರಾಮ ಪಂಚಾಯಿತಿಗಳಿಗೆ ಲಭ್ಯವಿರುವ ಅನುದಾನದಿಂದ ದುರಸ್ತಿ ಮಾಡಲಾಗುವುದು. ಪಂಚಾಯಿತಿಯಲ್ಲಿ ಸಾಕಷ್ಟು ಅನುದಾನ ಇಲ್ಲದಿದ್ದರೆ, ಅಗತ್ಯ ಅನುದಾನವನ್ನು ಇಲಾಖೆ ಒದಗಿಸಲಿದೆ ಎಂದು ಹೇಳಿದರು.

ಕುಡಿಯುವ ನೀರಿನ ಘಟಕಗಳ ದುರಸ್ತಿಗಾಗಿ ರಾಜ್ಯ ಸರ್ಕಾರ 29.50 ಕೋಟಿ ರೂಪಾಯಿ ಅನುದಾನ ಮೀಸಲಿಟ್ಟಿದ್ದು, ಅದರಲ್ಲಿ 13 ಕೋಟಿ ರೂಪಾಯಿ ಈಗಾಗಲೇ ಬಿಡುಗಡೆ ಮಾಡಲಾಗಿದೆ ಎಂದು ಈಶ್ವರ್ ಖಂಡ್ರೆ ತಿಳಿಸಿದರು.

# ರಾಷ್ಟ್ರದ ಅತಿದೊಡ್ಡ ಭೂ ಲೂಟಿಯ ಮಹಾನಾಯಕ ನೈಸ್ ಕಂಪನಿ ಖರೀದಿಸುತ್ತಿದ್ದಾರೆ: ರಾಜ್ಯದ ಜನರಿಗೆ CM ಸ್ಪಷ್ಟನೆ ನೀಡಲಿ

**ಬೆಂಗಳೂರು:** ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರೇ ನೈಸ್ ಕಂಪನಿಯನ್ನು ಖರೀದಿಸಲು ಹೊರಟಿದ್ದಾರೆ ಎಂದು ಕೇಂದ್ರ ಬೃಹತ್ ಕೈಗಾರಿಕಾ ಸಚಿವ ಎಚ್.ಡಿ.ಕುಮಾರಸ್ವಾಮಿ ಆರೋಪಿಸಿದರು.



ಜೆಡಿಎಸ್ ಕಚೇರಿಯಲ್ಲಿ ಸೋಮವಾರ ಯುವಕರು ಮತ್ತು ವಿದ್ಯಾರ್ಥಿಗಳನ್ನು ಉದ್ದೇಶಿಸಿ ಅವರು ಮಾತನಾಡಿದರು. ರಾಜ್ಯದ ಹಾಲಿ ಮುಖ್ಯಮಂತ್ರಿಯೇ ನೈಸ್ ಕಂಪನಿ ಖರೀದಿಸಲು ಹೊರಟಿದ್ದಾರೆ. ನೈಸ್ ಕಂಪನಿಯನ್ನು ಯಾರು 'ಟೇಕ್ ಓವರ್' ಮಾಡುತ್ತಿದ್ದಾರೆಂದು ತಾಕತ್ತಿದ್ದರೆ ಸಿಎಂ ಡಿ.ಕೆ.ಶಿವಕುಮಾರ್ ಜನತೆಯ ಮುಂದೆ ಹೇಳಲಿ ಎಂದು ಸವಾಲನ್ನೂ ಹಾಕಿದ್ದಾರೆ.

ಬೆಂಗಳೂರು ಮೈಸೂರು ಇನ್‌ಫ್ರಾಸ್ಟ್ರಕ್ಚರ್ ಕಾರಿಡಾರ್ (ಬಿಎಂಐಸಿ) ಯೋಜನೆಯನ್ನು ನೈಸ್ ಕಂಪನಿ ಅನುಷ್ಠಾನಕ್ಕೆ ತರುತ್ತಿದೆ. ಈ ಯೋಜನೆಯು ದೇಶದಲ್ಲೇ ಅತ್ಯಂತ ದೊಡ್ಡ ಹಗರಣ. ಅದನ್ನು ಸರ್ಕಾರವು ತನ್ನ ಸುಪರ್ದಿಗೆ ತೆಗೆದುಕೊಳ್ಳಬೇಕು ಎಂದು ಹೈಕೋರ್ಟ್ ಅಭಿಪ್ರಾಯಪಟ್ಟಿತ್ತು ಎಂದು ವಿವರಿಸಿದರು.

ನೈಸ್ ಕಂಪನಿ ಮತ್ತು ಬಿಎಂಐಸಿ ಯೋಜನೆಯನ್ನು ಸರ್ಕಾರದ ಸುಪರ್ದಿಗೆ ತೆಗೆದುಕೊಳ್ಳುವ ಬದಲಿಗೆ, ಡಿ.ಕೆ.ಶಿವಕುಮಾರ್ ಅವರು ತಮ್ಮ ಸ್ವಂತಕ್ಕೆ ಖರೀದಿಸಲು ಮುಂದಾಗಿದ್ದಾರೆ ಎಂಬುದು ಗೊತ್ತಾಗಿದೆ. ಇತರರ ಕಂಪನಿಗಳನ್ನು ಬಳಸಿಕೊಂಡು ತಮ್ಮ ಹಣವನ್ನು ಹೂಡಿಕೆ ಮಾಡಿ, ನೈಸ್ ಅನ್ನು ಸುಪರ್ದಿಗೆ ತೆಗೆದುಕೊಳ್ಳುತ್ತಿದ್ದಾರೆ ಎಂಬ ಮಾಹಿತಿ ನನಗೆ ದೊರೆತಿದೆ. ಸೂಕ್ತ ಸಮಯದಲ್ಲಿ ಎಲ್ಲ ದಾಖಲೆಗಳನ್ನು ಬಿಡುಗಡೆ ಮಾಡುತ್ತೇನೆ ಎಂದರು.

ತಕ್ಷಣವೇ ನೈಸ್ ರಸ್ತೆಯಲ್ಲಿ ಟೋಲ್ ಸಂಗ್ರಹ ನಿಲ್ಲಿಸಿ: ಸಿಎಂ ಡಿ.ಕೆ ಶಿವಕುಮಾರ್ ಗೆ ಎಚ್.ಡಿ ಕುಮಾರಸ್ವಾಮಿ ಪತ್ರ

ಬಿಎಂಐಸಿ ಯೋಜನೆ ಹೆಸರಲ್ಲಿಸಾವಿರಾರು ಎಕರೆ ಲೂಟಿ ಹೊಡೆಯಲು ಸಂಚು ರೂಪಿಸಿದ್ದಾರೆ. ನಾನಿಲ್ಲಿ ಕುಳಿತು ಸಂತೆ ಭಾಷಣ ಮಾಡುತ್ತಿಲ್ಲ. ಮುಂದಿನ ವಾರ ದಾಖಲೆ ಸಮೇತ ತಿಳಿಸುತ್ತೇನೆ," ಎಂದು ಕುಮಾರಸ್ವಾಮಿ ಸ್ಫೋಟಕ ಹೇಳಿಕೆ ನೀಡಿದ್ದಾರೆ.

ಈ ಕಂಪನಿಯು 20,000 ಎಕರೆಗೂ ಹೆಚ್ಚು ಜಮೀನನ್ನು 20 ವರ್ಷಗಳ ಹಿಂದೆಯೇ ಸ್ವಾಧೀನಕ್ಕೆ ಪಡೆದುಕೊಂಡಿದೆ. ಬೆಂಗಳೂರು?ಮೈಸೂರು ಮಧ್ಯೆ 111 ಕಿ.ಮೀ. ಉದ್ದದ ಎಕ್ಸ್‌ಪ್ರೆಸ್ ಹೆದ್ದಾರಿ ನಿರ್ಮಿಸಬೇಕಿತ್ತು. ಆದರೆ, ಈವರೆಗೆ 5 ಕಿ.ಮೀ.ನಷ್ಟು ಹೆದ್ದಾರಿಯನ್ನಷ್ಟೇ ನಿರ್ಮಿಸಿದೆ. ರೈತರ ಜಮೀನನ್ನು ಕಸಿದುಕೊಂಡು, ಪರಿಹಾರವನ್ನೂ ನೀಡದೆ ಅನ್ಯಾಯ ಮಾಡಿರುವ ಕಂಪನಿಯನ್ನು ಏಕೆ ಖರೀದಿಸುತ್ತಿದ್ದೇನೆ ಎಂಬುದನ್ನು ಮುಖ್ಯಮಂತ್ರಿ ಅವರು ರಾಜ್ಯದ ಜನರಿಗೆ ಸ್ಪಷ್ಟಪಡಿಸಬೇಕು ಎಂದು ಒತ್ತಾಯಿಸಿದರು.

ಈ ಮುಖ್ಯಮಂತ್ರಿಯೇ ರಾಷ್ಟ್ರದಲ್ಲಿ ಅತಿದೊಡ್ಡ ಭೂ ಲೂಟಿಯ ಮಹಾನಾಯಕ. ನನಗಿರುವ ಮಾಹಿತಿ ಪ್ರಕಾರ, ಬೇನಾಮಿ ಕಂಪನಿಗಳ ಮೂಲಕ ಈ ಮುಖ್ಯಮಂತ್ರಿಯೇ ನೈಸ್ ಕಂಪನಿಯನ್ನು ಖರೀದಿಸಲು ಹೊರಟಿದ್ದಾರೆ.ಈ ರಾಜ್ಯದಲ್ಲಿರೈತರಿಗೊಂದು, ಸಿಎಂಗೊಂದು ಕಾನೂನು ಇದೆಯಾ? ವಿಧಾನಸೌಧದ ಮೂರನೇ ಮಹಡಿಯಲ್ಲಿಕೂತು ಈ ಸಿಎಂ ನೇರ ವ್ಯವಹಾರಕ್ಕೆ ಇಳಿದಿದ್ದಾರೆ. ಬೇನಾಮಿ ಕಂಪನಿ ಮೂಲಕ ಯಾರ್ಯಾರು ಈ ವ್ಯವಹಾರಕ್ಕೆ ಇಳಿದಿದ್ದಾರೆ ಎಂಬ ಮಾಹಿತಿ ನನಗಿದೆ. ಈ ಸಿಎಂ ಎದೆ ಮುಟ್ಟಿಕೊಂಡು ಮಾತನಾಡಲಿ. ಈ ಬಗ್ಗೆ ರಾಜ್ಯದ ಜನತೆಯ ಮುಂದೆ ಸತ್ಯವನ್ನು ಬಾಯಿ ಬಿಡಲಿ," ಎಂದು ಸವಾಲೆಸೆದರು.

ನೈಸ್ ರಸ್ತೆ ಬಳಕೆಗೆ ಶುಲ್ಕ ಸಂಗ್ರಹಿಸಬಾರದು. ಆದರೆ ಸರ್ಕಾರವು ಆ ಕಂಪನಿಯ ಬೆಂಬಲಕ್ಕೆ ನಿಂತಿದೆ. ಅಲ್ಲಿಗೆ ಜನ ನುಗ್ಗಿಸಿ ಗಲಾಟೆ ಮಾಡಿ ಎಂದು ನಮಗೆ ಸವಾಲು ಹಾಕುವುದರಲ್ಲಿ ಅರ್ಥವಿಲ್ಲ. ನಾವು ಶಾಂತಿಪ್ರಿಯರು. ಕಾನೂನು ಪ್ರಕಾರವೇ ಹೋರಾಟ ನಡೆಸುತ್ತೇವೆ.

ಸರ್ಕಾರದ ಈ ಅಕ್ರಮಗಳ ವಿರುದ್ಧ ರಾಜ್ಯದ ಇಡೀ ಯುವ ಸಮುದಾಯ ತಿರುಗಿ ಬೀಳಬೇಕು? ಎಂದರು.

ಕುಮಾರಸ್ವಾಮಿ ಬೇನಾಮಿ ಆಸ್ತಿ ಹೊಂದಿದ್ದಾರೆಂದು ಯಾರೋ ಮಾತನಾಡಿದ್ದನ್ನು ಗಮನಿಸಿದ್ದೇನೆ. ನನ್ನ ಬೇನಾಮಿ ಆಸ್ತಿ ಯಾವುದಾದರೂ ಇದ್ದರೆ ತೋರಿಸಲಿ. ಇದು ಈ ಸರಕಾರಕ್ಕೆ ನನ್ನ ನೇರ ಸವಾಲು. ತೋರಿಸಿದರೆ ರಾಜಕೀಯದಿಂದಲೇ ನಿವೃತ್ತಿಯಾಗುತ್ತೇನೆ.

# ಕಾಂಗ್ರೆಸ್ ಸರ್ಕಾರದ ವೈಫಲ್ಯ ವಿರೋಧಿಸಿ ಸೆಪ್ಟೆಂಬರ್ 1ರಿಂದ 10ರವರೆಗೆ ರಾಯಚೂರಿನಿಂದ ಬಳ್ಳಾರಿಗೆ BJP-JDS ಪಾದಯಾತ್ರೆ

**ಬೆಂಗಳೂರು:** ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರದ ವೈಫಲ್ಯಗಳನ್ನು ವಿರೋಧಿಸಿ ಕರ್ನಾಟಕ ಬಿಜೆಪಿ ಸೆಪ್ಟೆಂಬರ್ 1 ರಿಂದ 10ರವರೆಗೆ ರಾಯಚೂರಿನಿಂದ ಬಳ್ಳಾರಿಗೆ 10 ದಿನಗಳ ಪಾದಯಾತ್ರೆ ಕೈಗೊಳ್ಳಲಿದೆ ಎಂದು ಪಕ್ಷದ ರಾಜ್ಯ ಅಧ್ಯಕ್ಷ ಬಿ.ವೈ ವಿಜಯೇಂದ್ರ ತಿಳಿಸಿದ್ದಾರೆ.



ರೈತರ ಸಂಕಷ್ಟ, ನಿರುದ್ಯೋಗ, ಮೀಸಲಾತಿ ಸಮಸ್ಯೆಗಳು ಮತ್ತು ನೇಮಕಾತಿಯಲ್ಲಿನ ಭ್ರಷ್ಟಾಚಾರದ ಆರೋಪಗಳ ಜೊತೆಗೆ ಭ್ರಷ್ಟಾಚಾರ ಆರೋಪ ಎದುರಿಸುತ್ತಿರುವ ಬಿ. ನಾಗೇಂದ್ರ ಅವರನ್ನು ರಾಜ್ಯ ಸಚಿವ ಸಂಪುಟಕ್ಕೆ ಸೇರಿಸಿಕೊಳ್ಳುವುದನ್ನು ಬಿಜೆಪಿ ಹೈಲೈಟ್ ಮಾಡಲು ಯೋಜಿಸಿದೆ. ಸುಮಾರು 200 ಕಿ.ಮೀ. ಪಾದಯಾತ್ರೆ ಸೆಪ್ಟೆಂಬರ್ 1 ರಂದು ರಾಯಚೂರಿನಲ್ಲಿ ಪ್ರಾರಂಭವಾಗಲಿದ್ದು, ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಇದನ್ನು ಉದ್ಘಾಟಿಸಲಿದ್ದಾರೆ. ಮೆರವಣಿಗೆ ಬಳ್ಳಾರಿಯಲ್ಲಿ ಮುಕ್ತಾಯಗೊಳ್ಳಲಿದೆ ಎಂದು ವಿಜಯೇಂದ್ರ ಹೇಳಿದರು.

ಬಿಜೆಪಿ ನೇತೃತ್ವದ ಪಾದಯಾತ್ರೆಗೆ ಜೆಡಿಎಸ್ 'ಸಂಪೂರ್ಣ ಬೆಂಬಲ' ನೀಡಲಿದೆ, ಅದರ ನಾಯಕರು ಉದ್ಘಾಟನಾ ಮತ್ತು ಸಮಾರೋಪ ಕಾರ್ಯಕ್ರಮದಲ್ಲಿ ಭಾಗವಹಿಸುವ ನಿರೀಕ್ಷೆಯಿದೆ ಎಂದು ಹೇಳಿದರು. ಈ ಜನವಿರೋಧಿ, ಬಡವರ ವಿರೋಧಿ, ರೈತ ವಿರೋಧಿ, ಯುವಜನ ವಿರೋಧಿ ಮತ್ತು ಅಭಿವೃದ್ಧಿ ವಿರೋಧಿ ಕಾಂಗ್ರೆಸ್ ಸರ್ಕಾರದ ನಿಜವಾದ ಬಣ್ಣಗಳನ್ನು ಬಹಿರಂಗಪಡಿಸುವುದು ಮತ್ತು ರಾಜ್ಯದ ಜನರಲ್ಲಿ ಜಾಗೃತಿ ಮೂಡಿಸುವುದು ಈ ಪಾದಯಾತ್ರೆಯ ಉದ್ದೇಶವಾಗಿದೆ ಎಂದು ವಿಜಯೇಂದ್ರ ಹೇಳಿದರು.

ಕರ್ನಾಟಕ ರಾಜ್ಯ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಹಗರಣದಲ್ಲಿ ನಾಗೇಂದ್ರ ಅವರ ಪಾತ್ರದ ಆರೋಪದ ಮೇಲೆ ಅವರನ್ನು ಸಂಪುಟದಿಂದ ತೆಗೆದುಹಾಕುವಂತೆ ಒತ್ತಾಯಿಸಲು ಬಿಜೆಪಿ ಈ ಪಾದಯಾತ್ರೆಯನ್ನು ಬಳಸಿಕೊಳ್ಳಲಿದೆ. ಭ್ರಷ್ಟ ಸಚಿವ ನಾಗೇಂದ್ರ ಅವರನ್ನು ಸಂಪುಟದಿಂದ ಕೈಬಿಡಬೇಕೆಂಬ ಬೇಡಿಕೆಯೊಂದಿಗೆ ಪ್ರಾರಂಭಿಸಿ, ಈ ಎಲ್ಲಾ ಸಮಸ್ಯೆಗಳನ್ನು ಕೈಗೆತ್ತಿಕೊಳ್ಳಲು ನಾವು ನಿರ್ಧರಿಸಿದ್ದೇವೆ ಎಂದು ಅವರು ಹೇಳಿದರು.

ಸರ್ಕಾರವು ಬರಗಾಲ ಪೀಡಿತ ರೈತರ ಸಂಕಷ್ಟವನ್ನು ಪರಿಹರಿಸಲು ವಿಫಲವಾಗಿದೆ ಎಂದು ವಿಜಯೇಂದ್ರ ಆರೋಪಿಸಿದರು. ರಾಜ್ಯದಲ್ಲಿ ಸುಮಾರು 2.5 ಲಕ್ಷ ಹುದ್ದೆಗಳು ಭರ್ತಿಯಾಗಿಲ್ಲ, ವೃದ್ಧಾಪ್ಯ ಪಿಂಚಣಿ, ಸಂಧ್ಯಾ ಸುರಕ್ಷಾ ಸೌಲಭ್ಯಗಳು, ಬಡವರಿಗೆ ಮನೆಗಳು ಮತ್ತು ಗಂಗಾ ಕಲ್ಯಾಣ ಯೋಜನೆಗಳನ್ನು ಸರಿಯಾಗಿ ಅನುಷ್ಠಾನಗೊಳಿಸಲಾಗುತ್ತಿಲ್ಲ ಎಂದು ಆರೋಪಿಸಿದರು.

ಇತ್ತೀಚೆಗೆ ವಿಧಾನಸಭೆ ಅಧಿವೇಶನವನ್ನು ಮೊಟಕುಗೊಳಿಸಿದ ಬಗ್ಗೆ ಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಅವರನ್ನು ಟೀಕಿಸಿದ ವಿಜಯೇಂದ್ರ, ಸರ್ಕಾರವು ಪ್ರಮುಖ ವಿಷಯಗಳ ಕುರಿತು ಚರ್ಚೆಗಳನ್ನು ತಪ್ಪಿಸಿದೆ ಎಂದು ಆರೋಪಿಸಿದರು. ಈ ಎಲ್ಲಾ ವಿಷಯಗಳನ್ನು ವಿಧಾನಸಭೆಯಲ್ಲಿ ಚರ್ಚಿಸಿದ್ದರೆ, ಈ ಕಾಂಗ್ರೆಸ್ ಸರ್ಕಾರದ ಮುಖವಾಡ ಕಳಚುತ್ತಿತ್ತು ಎಂದು ಹೇಳಿದರು.

ಶಿವಕುಮಾರ್ ಅವರು ಆಡಳಿತ ಮತ್ತು ಅಭಿವೃದ್ಧಿಗಿಂತ ರಿಯಲ್ ಎಸ್ಟೇಟ್ ಸಂಬಂಧಿತ ಯೋಜನೆಗಳ ಮೇಲೆ ಕೇಂದ್ರೀಕರಿಸುತ್ತಿದ್ದಾರೆ. ಒಟ್ಟಾರೆಯಾಗಿ, ಶಿವಕುಮಾರ್ ಅವರ ಆಸಕ್ತಿ ರಿಯಲ್ ಎಸ್ಟೇಟ್ ಸುತ್ತ ಸುತ್ತುತ್ತದೆ. ಪ್ರಸ್ತಾವಿತ ಬಿಡದಿ ಟೌನ್‌ಶಿಪ್ ಯೋಜನೆ, ಅವರ ಹುಟ್ಟೂರು ಕನಕಪುರದಲ್ಲಿ ವಿಮಾನ ನಿಲ್ದಾಣ ಮತ್ತು ನೈಸ್ ಯೋಜನೆಯನ್ನು ಸ್ವಾಧೀನಪಡಿಸಿಕೊಳ್ಳುವ ಸರ್ಕಾರದ ಕ್ರಮವನ್ನು ಉಲ್ಲೇಖಿಸಿ ವಿಜಯೇಂದ್ರ ಆರೋಪಿಸಿದರು.

ಸರ್ಕಾರವು ಮೀಸಲಾತಿಯೊಂದಿಗೆ "ಆಟವಾಡುತ್ತಿದೆ" ಮತ್ತು ಒಬಿಸಿ ಮೀಸಲಾತಿಯ ಬಗ್ಗೆ ಸ್ಪಷ್ಟವಾದ ನಿಲುವು ತೆಗೆದುಕೊಳ್ಳುವಲ್ಲಿ ವಿಫಲವಾಗಿದೆ. ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ನೇತೃತ್ವದ ಬಿಜೆಪಿ ಸರ್ಕಾರವು ವಾಲ್ಮೀಕಿ ಸಮುದಾಯಕ್ಕೆ ಮೀಸಲಾತಿಯನ್ನು ಶೇಕಡಾ ಮೂರರಿಂದ ಏಳುಕ್ಕೆ ಹೆಚ್ಚಿಸಿತ್ತು ಎಂದರು. ಪಾದಯಾತ್ರೆಯ ಸಮಯದಲ್ಲಿ ಬಿಜೆಪಿ ಉತ್ತರ ಕರ್ನಾಟಕ ಮತ್ತು ನೀರಾವರಿ ಯೋಜನೆಗಳ ಸಮಸ್ಯೆಗಳನ್ನು ಸಹ ಎತ್ತುತ್ತದೆ ಎಂದು ವಿಜಯೇಂದ್ರ ಹೇಳಿದರು.

# 10 ವರ್ಷ ಪೂರೈಸಿದ ಯುಪಿಐ: ಡಿಜಿಟಲ್ ಕ್ರಾಂತಿಗೆ ಪ್ರಧಾನಿ ಮೋದಿ ಶ್ಲಾಘನೆ

**ನವದೆಹಲಿ:** ಭಾರತದ ಆರ್ಥಿಕ ಹಾಗೂ ತಂತ್ರಜ್ಞಾನ ಇತಿಹಾಸದಲ್ಲಿ ಕ್ರಾಂತಿಕಾರಿ ಬದಲಾವಣೆ ತಂದಿರುವ ಏಕೀಕೃತ ಪಾವತಿ ಇಂಟರ್ಫೇಸ್ (ಯುಪಿಐ) ಯಶಸ್ವಿಯಾಗಿ 10 ವರ್ಷಗಳನ್ನು ಪೂರೈಸಿದೆ. ಈ ಮಹತ್ವದ ಮೈಲಿಗಲ್ಲು ಭಾರತದ ಡಿಜಿಟಲ್ ಪಾವತಿ ವ್ಯವಸ್ಥೆ ಹಾಗೂ ಆರ್ಥಿಕ ಸೇರ್ಪಡೆಯ ಬೆನ್ನೆಲುಬಾಗಿ ಯುಪಿಐ ಬೆಳೆದುಬಂದ ಹಾದಿಯನ್ನು ಸಾರುತ್ತದೆ. ಈ ಸಂದರ್ಭದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ಯುಪಿಐ ದಶಕದ ಸಂಭ್ರಮವನ್ನು ಆಚರಿಸಿ, ಅದರ ವ್ಯಾಪಕ ಬೆಳವಣಿಗೆಯನ್ನು ಮುಕ್ತಕಂಠದಿಂದ ಶ್ಲಾಘಿಸಿದ್ದಾರೆ.




ಯುಪಿಐ ಆರಂಭವಾಗಿ ಒಂದು ದಶಕ ಪೂರ್ಣಗೊಂಡಿರುವ ಕುರಿತು ಎಕ್ಸ್ ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಪ್ರಧಾನಿ ನರೇಂದ್ರ ಮೋದಿ, ಒಂದು ದಶಕದ ಹಿಂದೆ ಜಾರಿಗೆ ಬಂದ ಯುಪಿಐ ಭಾರತದ ಡಿಜಿಟಲ್ ಪಾವತಿ ಪಯಣದಲ್ಲಿ ಪ್ರಮುಖ ತಿರುವು ತಂದಿದೆ ಎಂದು ಹೇಳಿದ್ದಾರೆ. ಯುಪಿಐನ ಪ್ರಮಾಣ ಮತ್ತು ವ್ಯಾಪ್ತಿಯು ಪ್ರತಿಯೊಬ್ಬ ಭಾರತೀಯನು ಹೆಮ್ಮೆಪಡಬೇಕಾದ ವಿಷಯವಾಗಿದೆ ಎಂದು ಅವರು ತಿಳಿಸಿದ್ದಾರೆ.

ಅಲ್ಲದೆ, ಕಳೆದ ಹತ್ತು ವರ್ಷಗಳಲ್ಲಿ ಯುಪಿಐ ತಮ್ಮ ದೈನಂದಿನ ಜೀವನದ ಮೇಲೆ ಹೇಗೆ ಪರಿಣಾಮ ಬೀರಿದೆ ಹಾಗೂ ತಮ್ಮ ಅನುಭವ ಹೇಗಿದೆ ಎಂಬುದನ್ನು ನಾಗರಿಕರು ಹಂಚಿಕೊಳ್ಳುವಂತೆ ಅವರು ಆಹ್ವಾನಿಸಿದ್ದಾರೆ.ಭಾರತೀಯ ರಿಸರ್ವ್ ಬ್ಯಾಂಕ್‌ನ ನಿಯಂತ್ರಕ ಮೇಲ್ವಿಚಾರಣೆಯಲ್ಲಿ ಭಾರತೀಯ ರಾಷ್ಟ್ರೀಯ ಪಾವತಿ ನಿಗಮ (ಎನ್‌ಪಿಸಿಐ) 2016ರ ಆಗಸ್ಟ್ 25ರಂದು ಯುಪಿಐ ಅನ್ನು ಅಧಿಕೃತವಾಗಿ ಪ್ರಾರಂಭಿಸಿತು. ಅಂದಿನಿಂದ ಈ ವ್ಯವಸ್ಥೆ ದೇಶಾದ್ಯಂತ ಅಪಾರ ಬೆಳವಣಿಗೆ ದಾಖಲಿಸಿದೆ. 2016–17ರಲ್ಲಿ ಕೇವಲ 1.78 ಕೋಟಿಯಷ್ಟಿದ್ದ ವಾರ್ಷಿಕ ಯುಪಿಐ ವಹಿವಾಟುಗಳ ಸಂಖ್ಯೆ, 2025–26ರ ವೇಳೆಗೆ 24,162 ಕೋಟಿಗೂ ಅಧಿಕಕ್ಕೆ ತಲುಪಿದೆ. ಇದು ಸುಮಾರು 13,000 ಪಟ್ಟು ಏರಿಕೆಯಾಗಿದೆ.ವಹಿವಾಟಿನ ಮೊತ್ತದಲ್ಲಿಯೂ ಬೃಹತ್ ಜಿಗಿತ ಕಂಡುಬಂದಿದೆ. 2016–17ರಲ್ಲಿ ಕೇವಲ 0.07 ಲಕ್ಷ ಕೋಟಿ ರೂ. ಇದ್ದ ವಹಿವಾಟಿನ ಮೌಲ್ಯವು, 2025–26ರಲ್ಲಿ ಸುಮಾರು 314 ಲಕ್ಷ ಕೋಟಿ ರೂ.ಗಳಿಗೆ ಏರಿಕೆಯಾಗಿದೆ. ಇದು ಸುಮಾರು 4,000 ಪಟ್ಟು ಹೆಚ್ಚಳವಾಗಿದೆ.

ಅಧಿಕೃತ ಪ್ರಕಟಣೆಯ ಪ್ರಕಾರ, ಯುಪಿಐ ಇಂದು ಭಾರತದ ಡಿಜಿಟಲ್ ಸಾರ್ವಜನಿಕ ಮೂಲಸೌಕರ್ಯದ (ಡಿಪಿಐ) ಅತ್ಯಂತ ಯಶಸ್ವಿ ಸ್ತಂಭಗಳಲ್ಲಿ ಒಂದಾಗಿದೆ. ಒಂದೇ ಅಪ್ಲಿಕೇಶನ್ ಮೂಲಕ ತಡೆರಹಿತ, ಪರಸ್ಪರ ಕಾರ್ಯನಿರ್ವಹಿಸಬಹುದಾದ ಹಾಗೂ ನೈಜ–ಸಮಯದ ವ್ಯಕ್ತಿಯಿಂದ ವ್ಯಕ್ತಿಗೆ ಮತ್ತು ವ್ಯಕ್ತಿಯಿಂದ ವ್ಯಾಪಾರಿಗೆ ವಹಿವಾಟು ನಡೆಸಲು ಇದು ನಾಗರಿಕರಿಗೆ ಅವಕಾಶ ಮಾಡಿಕೊಟ್ಟಿದೆ.

# ಕಾವೇರಿ ವಿಚಾರದಲ್ಲಿ ಕರ್ನಾಟಕಕ್ಕೆ ಮತ್ತೆ ಶಾಕ್: ತಮಿಳುನಾಡಿಗೆ ನೀರು ಬಿಡಬೇಕೆಂಬ CWRC ಆದೇಶ ಎತ್ತಿಹಿಡಿದ CWMA

**ನವದೆಹಲಿ:** ಕಾವೇರಿ ನದಿ ನೀರು ಹಂಚಿಕೆ ವಿವಾದಕ್ಕೆ ಸಂಬಂಧಿಸಿದಂತೆ ಕರ್ನಾಟಕಕ್ಕೆ ಮತ್ತೆ ತೀವ್ರ ಹಿನ್ನಡೆಯಾಗಿದ್ದು, ನೆರೆ ರಾಜ್ಯ ತಮಿಳುನಾಡಿಗೆ ಮುಂದಿನ 15 ದಿನಗಳ ಕಾಲ ಪ್ರತಿದಿನ 9,000 ಕ್ಯೂಸೆಕ್ ನೀರು ಹರಿಸುವಂತೆ ಕಾವೇರಿ ನೀರು ನಿಯಂತ್ರಣ ಸಮಿತಿ(CWRC) ಸೋಮವಾರ ನೀಡಿದ್ದ ಆದೇಶವನ್ನು ಮಂಗಳವಾರ ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ(CWMA) ಎತ್ತಿಹಿಡಿದಿದೆ.



ಇಂದು ದೆಹಲಿಯಲ್ಲಿ ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರದ ಕಚೇರಿಯಲ್ಲಿ ನಡೆದ ಸಭೆಯಲ್ಲಿ ರಾಜ್ಯದಿಂದ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಗೌರವ್ ಗುಪ್ತಾ ಹಾಗೂ ಕಾವೇರಿ ನೀರಾವರಿ ನಿಗಮ ಎಂಡಿ ಮಹೇಶ್ ಅವರು ಭಾಗಿಯಾದ್ದಾರೆ. ತಮಿಳುನಾಡಿನಿಂದ ನೀರಾವರಿ ಕಾರ್ಯದರ್ಶಿ ಪ್ರಶಾಂತ್, ಕಾವೇರಿ ತಾಂತ್ರಿಕ ಸಮಿತಿ ಅಧ್ಯಕ್ಷ ಸುಬ್ರಹ್ಮಣ್ಯಂ ಅವರು ಭಾಗಿಯಾಗಿದ್ದರು.

ಸಭೆ ಬಳಿಕ ಮಾತನಾಡಿದ ಗೌರವ್ ಗುಪ್ತಾ ಅವರು, ?ಇಂದು ಒಂದೂವರೆ ಗಂಟೆಗಳ ಕಾಲ ಸಭೆ ಮಾಡಿದ್ದೇವೆ. ನೆನ್ನೆ ಕೊಟ್ಟಿರುವ ಶಿಫಾರಸನ್ನು ಪಾಲಿಸಲು ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ ಸೂಚಿಸಿದೆ . ತಮಿಳುನಾಡು 28 ಟಿಎಂಸಿ ನೀರಿನ ಬೇಡಿಕೆ ಇಟ್ಟಿತ್ತು . ಆದರೆ, ಪ್ರಾಧಿಕಾರ ಅದನ್ನು ಒಪ್ಪಿಲ್ಲ. ಮುಂದೆ ಉತ್ತಮ ಮಳೆಯಾಗಬಹುದು ಎಂದು ಹವಾಮಾನ ಇಲಾಖೆ ಆಶಯ ವ್ಯಕ್ತಪಡಿಸಿದೆ.

# ಮನೆ ಮುಂದೆ ನಿಲ್ಲಿಸೋ ವಾಹನಗಳಿಗೆ ಪಾರ್ಕಿಂಗ್ ಶುಲ್ಕಕ್ಕೆ ರಾಮಲಿಂಗಾರೆಡ್ಡಿ ತೀವ್ರ ಆಕ್ಷೇಪ: CM ಡಿಕೆಶಿಗೆ ಪತ್ರ

**ಬೆಂಗಳೂರು:** ಬೆಂಗಳೂರಿನಲ್ಲಿ ಮನೆ ಮುಂದೆ ರಸ್ತೆಬದಿಯಲ್ಲಿ ವಾಹನ ನಿಲ್ಲಿಸಿದರೆ ಪಾರ್ಕಿಂಗ್ ಶುಲ್ಕ ವಿಧಿಸುವ ಪ್ರಸ್ತಾವಕ್ಕೆ ಅರಣ್ಯ ಸಚಿವ ರಾಮಲಿಂಗಾರೆಡ್ಡಿ ಅವರು ತೀವ್ರ ಆಕ್ಷೇಪ ವ್ಯಕ್ತಪಡಿಸಿದ್ದು, ಈ ಸಂಬಂದ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರಿಗೆ ಪತ್ರ ಬರೆದಿದ್ದಾರೆ.




ವರ್ಷಕ್ಕೆ 15,000 ರಿಂದ 25,000 ರೂ.ಗಳವರೆಗೆ ಪಾರ್ಕಿಂಗ್ ಶುಲ್ಕವಿಧಿಸುವ ಪ್ರಸ್ತಾವನೆಯನ್ನು ಮರುಪರಿಶೀಲಿಸುವಂತೆ ರಾಮಲಿಂಗಾ ರೆಡ್ಡಿ ಅವರು ಡಿಕೆ ಶಿವಕುಮಾರ್ ಅವರಿಗೆ ಮನವಿ ಮಾಡಿದ್ದಾರೆ. ಇದು ಮಧ್ಯಮ ವರ್ಗದ ಮತ್ತು ಸಾಮಾನ್ಯ ಕುಟುಂಬಗಳಿಗೆ ಆರ್ಥಿಕ ಹೊರೆಯಾಗುತ್ತದೆ ಎಂದು ರಾಮಲಿಂಗಾ ರೆಡ್ಡಿ ಅವರು ಹೇಳಿದ್ದಾರೆ. ಆಗಸ್ಟ್ 24 ರಂದು ಬರೆದ ಪತ್ರದಲ್ಲಿ, ರಾಮಲಿಂಗಾ ರೆಡ್ಡಿ ಅವರು, ಬೆಂಗಳೂರಿನಲ್ಲಿ ಹೆಚ್ಚುತ್ತಿರುವ ವಾಹನಗಳ ಸಂಖ್ಯೆ ಮತ್ತು ಸಂಚಾರ ಸಮಸ್ಯೆಗಳ ನಡುವೆ ರಸ್ತೆಬದಿಯ ಪಾರ್ಕಿಂಗ್ ಅನ್ನು ನಿಯಂತ್ರಿಸುವ ಅಗತ್ಯವನ್ನು ಒಪ್ಪಿಕೊಂಡಿದ್ದಾರೆ. ಆದರೆ ಸಾಮಾನ್ಯ ನಾಗರಿಕರ ಆರ್ಥಿಕ ಪರಿಸ್ಥಿತಿಯನ್ನು ಕೂಡ ಪರಿಗಣಿಸುವುದು ಅಗತ್ಯ ಎಂದು ಹೇಳಿದ್ದಾರೆ. ಅಗತ್ಯ ವಸ್ತುಗಳ ಬೆಲೆ ಏರಿಕೆ ಮತ್ತು ಅಡುಗೆ ಅನಿಲ, ಪೆಟ್ರೋಲ್, ಡೀಸೆಲ್, ಜಿಎಸ್‌ಟಿ ಹಾಗೂ ಟೋಲ್‌ಗಳ ಮೇಲಿನ ಹೆಚ್ಚಿದ ವೆಚ್ಚಗಳಿಂದಾಗಿ ಮಧ್ಯಮ ವರ್ಗ ಮತ್ತು ಸಾಮಾನ್ಯ ಕುಟುಂಬಗಳು ಈಗಾಗಲೇ ಆರ್ಥಿಕ ಸಂಕಷ್ಟಕ್ಕೆ ಸಿಲುಕಿವೆ. ಇಂತಹ ಸಂದರ್ಭದಲ್ಲಿ ಪಾರ್ಕಿಂಗ್ ಶುಲ್ಕ ವಿಧಿಸಿದರೆ ಜನರಿಗೆ ಮತ್ತಷ್ಟು ಹೊರೆಯಾಗುತ್ತದೆ ಎಂದು ಅಭಿಪ್ರಾಯಪಟ್ಟಿದ್ದಾರೆ. ದೊಡ್ಡ ನಿವೇಶನ ಅಥವಾ ಸ್ವಂತ ಮನೆ ಹೊಂದಿರುವ ಕೆಲವರಿಗೆ ತಮ್ಮ ವಾಹನಗಳನ್ನು ಮನೆಯ ಆವರಣದಲ್ಲೇ ನಿಲ್ಲಿಸಲು ಸಾಧ್ಯವಾಗಬಹುದು. ಬಹುತೇಕ ಮಧ್ಯಮ ವರ್ಗದ ಕುಟುಂಬಗಳು ಸೀಮಿತ ಜಾಗದ ಮನೆ ಮತ್ತು ಅಪಾರ್ಟ್‌ಮೆಂಟ್‌ಗಳಲ್ಲಿ ವಾಸಿಸುತ್ತಿದ್ದು, ವಾಹನ ನಿಲ್ಲಿಸಲು ಆವರಣದೊಳಗೆ ಸ್ಥಳಾವಕಾಶದ ಕೊರತೆ ಇರುತ್ತದೆ ಎಂದರು.

Printed By: DEVANAHALLI TQ, BANGALORE RURAL DIST. PRINTER: J AMBRISH, PRINTED AT: KALYANI PRINTERS, GROUND FLOOR, FLAT NO. 12/1, 1ST CROSS ROAD, MYSURE ROAD, OLD TOLLGATE, NEAR BY GOPALAN MALL, BENGALURU, KARNATAKA-560026. Published & owned by RADHIKA A. R., D/O RAMAKRISHNAIAH, BEHAIND AC OFFICE, SWEET WATER BOREWELL ROAD, MADHUGIRI TALUK, TUMAKURU DIST. KARNATAKA PIN-572132, and published at TUMAKURU. BEHAIND AC OFFICE, SWEET WATER BORE WELL ROAD, MADHUGIRI, MADHUGIRI TALUK, TUMAKURU. DIST. KARNATAKA PIN-572132 Editor: RADHIKA A.R. "KARNATAKA SUCCESS NO 1 " KANNADA Daily News Paper